ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 49 ಸಂಚಿಕೆ- 49 | PAGE-8 ಪುಟ-8 | ಶುಕ್ರವಾರ 28.03.2025 | RS.2/- ಬೆಲೆ 2/-

## ಗ್ರಾಹಕರಿಗೆ ಶಾಕ್: ನಂದಿನಿ ಹಾಲಿನ ದರ ಲೀ.ಗೆ 4 ರೂ.ಏರಿಕೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮಾ.27:ಬೆಲೆ ಏರಿಕೆಯ ಬಿಸಿಯಿಂದ ತತ್ತರಿಸಿಹೋಗಿರುವ ಗ್ರಾಹಕರಿಗೆ ಸರ್ಕಾರ ಇಂದು ಮತ್ತೆ ಬಿಗ್ ಶಾಕ್ ನೀಡಿದೆ. ನಂದಿನಿ ಪ್ಯಾಕೆಟ್ ಹಾಲಿನ ದರ ಪ್ರತಿಲೀಟರ್ ಗೆ 4 ರೂಪಾಯಿ ಹೆಚ್ಚಳ ಮಾಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ.

ನಂದಿನಿ ಹಾಲಿನ ದರ ಪ್ರತಿ ಲೀಟರ್ ಗೆ 4 ರೂಪಾಯಿ ಹೆಚ್ಚಿಸಿ ರಾಜ್ಯ ಸಚಿವ ಸಂಪುಟ ಇಂದು ಅನುಮೋದನೆ ನೀಡಿದೆ.

ನಂದಿನಿ ಹಾಲಿನ ದರ ಹೆಚ್ಚಿಸಿ ಇನ್ನೂ ವರ್ಷವಾಗಿಲ್ಲ. ಆಗಲೇ ದರ ಏರಿಕೆಗೆ ಪ್ರಸ್ತಾಪ ಬಂದಿತ್ತು. ಕೆಎಂಎಫ್ ಅಧಿಕಾರಿಗಳ ಜೊತೆ ಮೂರು ದಿನಗಳ ಹಿಂದೆ ಸಭೆ ನಡೆಸಿದ ಸಿಎಂ ಸಿದ್ದರಾಮಯ್ಯ ಹಾಲಿ ದರ ಹೆಚ್ಚಳಕ್ಕೆ ಒಪ್ಪಿಗೆ ಸೂಚಿಸಿರಲಿಲ್ಲ.

ಇದೀಗ ನಂದಿನ ಹಾಲಿನ ದರ ಏರಿಕೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ಗ್ರಾಹಕರಿಗೆ ಹಾಲು ಬಿಸಿತುಪ್ಪವಾಗಿದೆ.

## ಕರೆಂಟ್ ಶಾಕ್

## ಫಿಕ್ಸೆಡ್ ಚಾರ್ಜ್ ದರ 25 ರೂ. ಏರಿಕೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮಾ.27: ಕಳೆದ ವಾರ ಇಂಧನ ಇಲಾಖೆಯ ಸಿಬ್ಬಂದಿ ಪಿಂಚಣಿ ಗ್ರಾಚ್ಯುಟಿಯನ್ನು ಸರ್ಕಾರ ಪಾವತಿ ಮಾಡದೇ ಇರೋದಕ್ಕೆ ಗ್ರಾಹಕರಿಗೆ 36 ಪೈಸೆಯಂತೆ ಪ್ರತಿ ಯೂನಿಟ್‌ಗೆ ಕೆಇಆರ್‌ಸಿ ದರ ಏರಿಕೆ ಮಾಡಿ ಬರೆ ಹಾಕಿತ್ತು. ಇದರ ಬೆನ್ನಲ್ಲೇ ಇಂದು ವಾರ್ಷಿಕ ವಿದ್ಯುತ್ ದರ ಏರಿಕೆ ಆದೇಶ ಹೊರಡಿಸಿದೆ. ವಿದ್ಯುತ್ ಶುಲ್ಕ ಇಳಿಸಿ ನಿಗದಿತ ಶುಲ್ಕ ಏರಿಸಿ ಗ್ರಾಹಕರಿಗೆ ಮತ್ತೊಂದು ಶಾಕ್ ಕೊಟ್ಟಿದೆ. * ಇದುವರೆಗೆ ಗೃಹಬಳಕೆ ನಿಗದಿತ 120 ರೂ. ಇತ್ತು. ಇನ್ಮುಂದೆ 145 ರೂ.ಗೆ ಜಂಪ್ ಆಗಲಿದೆ. ಅಂದರೆ, 25 ರೂ. ಏರಿಕೆಯಾಗಿದೆ. * ಬೃಹತ್ ಕೈಗಾರಿಕೆ ವಾಣಿಜ್ಯ ಉದ್ದೇಶದ ವಿದ್ಯುತ್ ಬಳಕೆಯ ಮೇಲಿದ್ದ ಡಿಮ್ಯಾಂಡ್ ಚಾರ್ಜ್ 340 ರೂ.ನಿಂದ 345 ರೂ.ಗೆ ಏರಿಕೆಯಾಗಿದೆ.* ಎಲ್-ಟಿ-ಸಣ್ಣ ಕೈಗಾರಿಕೆಗೆ 140 ರೂ. ಇದ್ದಿದ್ದು -150 ರೂ.ಗೆ ಡಿಮ್ಯಾಂಡ್ ಚಾರ್ಜ್ ಏರಿಕೆಯಾಗಿದೆ.

**ಇಳಿಕೆ ಏನು?**

* ಗೃಹಬಳಕೆಯ ವಿದ್ಯುತ್‌ಗೆ 2025-26ರಲ್ಲಿ 10 ಪೈಸೆ ಹಾಗೂ 2027-28ಕ್ಕೆ 5 ಪೈಸೆ ಕಡಿತ

*ಹೆಚ್‌ಟಿ ವಾಣಿಜ್ಯದಲ್ಲಿ ಮಾಲ್ ಹಾಗೂ 5ಸ್ಟಾರ್ ಹೋಟೆಲ್‌ಗಳಿಗೆ ಪ್ರತಿ ಯೂನಿಟ್‌ನಲ್ಲಿ 205 ಪೈಸೆಗಳಷ್ಟು ಕಡಿತ*ಇವಿ ಚಾರ್ಜಿಂಗ್ ಸ್ಟೇಷನ್‌ಗಳಿಗೆ ಪ್ರತಿ ಯೂನಿಟ್‌ಗೆ 4.50 ರಷ್ಟು ಕಡಿಮೆ ದರದಲ್ಲಿ ಮುಂದುವರಿಕೆ

ಸೋಲಾರ್ ಅಳವಡಿಕೆಗೆ ಪ್ರೋತ್ಸಾಹ

ಸೋಲಾರ್ ಅಳವಡಿಸಿಕೊಂಡ ಗೃಹಬಳಕೆಯ ಗ್ರಾಹಕರಿಗೆ 10 ಕಿಲೋವ್ಯಾಟ್ ವರೆಗೆ ಅನ್ವಯವಾಗುವಂತೆ ಪ್ರತಿ ಕಿಲೋ ವ್ಯಾಟ್‌ಗೆ 25 ರೂಪಾಯಿ ರಿಯಾಯಿತಿ.

## ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಹಾಲಿನ ಬೆಲೆ ೯ ರೂ. ಏರಿಕೆ : ಸುರೇಶ್ ಕುಮಾರ್



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು: ಮಾ.27:ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಹಾಲಿನ ದರವನ್ನು 9 ರೂ. ಏರಿಕೆ ಮಾಡಿದೆ. ಈಗ ಹಾಲಿನ ದರ, ಮುಂದೆ ನೀರಿನ ದರ, ಆಮೇಲೆ ವಿದ್ಯುತ್ ದರ, ಬಹುಶಃ ಸೇವಿಸುವ ಗಾಳಿಗೂ ಬೆಲೆ ನಿಗದಿ ಪಡಿಸುವ ದಿನ ಬಹಳ ದೂರ ಇಲ್ಲ ಎಂದು ಬಿಜೆಪಿ ಶಾಸಕ ಮಾಜಿ ಸಚಿವ ಸುರೇಶ್ ಕುಮಾರ್ ಆಕ್ರೋಶ ಹೊರ ಹಾಕಿದ್ದಾರೆ.

ಹಾಲಿನ ದರ ಹೆಚ್ಚಿಸಿ ರೈತರಿಗೆ ಪ್ರೋತ್ಸಾಹಧನ ನೀಡ ಬೇಕೆಂಬುದು ಒಪ್ಪಿತ ಮಾತು. ಹಾಗೆಂದ ಮಾತ್ರಕ್ಕೆ ಗ್ರಾಹಕರ ಜೇಬಿನಿಂದ ಕಿತ್ತುಕೊಡುವುದು ಕಾಂಗ್ರೆಸ್ ಸರ್ಕಾರ ಹೇಳಿಕೊಳ್ಳುವ ಸಾಮಾಜಿಕ ನ್ಯಾಯದ ಪರಿಕಲ್ಪನೆ ಇದೆಯೇ ಎಂದು ಪ್ರಶ್ನಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ, ಆಗಸ್ಟ್ 2023 ರಲ್ಲಿ, ಹಾಲಿನ ಬೆಲೆ ಲೀಟರ್‌ಗೆ 3 ರೂ.ಗಳಷ್ಟು ಏರಿಕೆಯಾಯಿತು. ಅದಾದ ಬಳಿಕ 2024ರ ಜೂನ್ 26ಕ್ಕೆ ನಂದಿನಿಯ ಎಲ್ಲಾ ಹಾಲಿನ ಬೆಲೆಯನ್ನು 2 ರೂಪಾಯಿ ಏರಿಕೆ ಮಾಡಿತು. ಈಗ ಮತ್ತೊಂದು ಸುತ್ತಿನ ಹಾಲಿನ ಬೆಲೆ ಏರಿಕೆಯಾಗಿದೆ. ಏಪ್ರಿಲ್ 1 ರಿಂದ ಹಾಲಿನ ದರ ಲೀಟರ್ 4 ರೂಪಾಯಿ ಏರಿಕೆ ಘೋಷಣೆ ಮಾಡಿದೆ.

ಇದರೊಂದಿಗೆ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಲೀಟರ್ ಹಾಲಿನ ಬೆಲೆಯಲ್ಲಿ 9 ರೂಪಾಯಿ ಏರಿಕೆ ಮಾಡಿದಂತಾಗಿದೆ. ಇನ್ನೊಂದು ವಿಚಾರವೇನೆಂದರೆ ಬರೀ ಹಾಲು ಮಾತ್ರವಲ್ಲ ಮೊಸರು ಕೂಡ ಲೀಟರ್‌ಗೆ 4 ರೂಪಾಯಿ ಏರಿಕೆ ಮಾಡಿದೆ.

ಎಲ್ಲಾ ಪೋಷಕಾಂಶಗಳನ್ನು ಹೊಂದಿದ ಸಂಪೂರ್ಣ ಆಹಾರದಲ್ಲಿ ಮೊಟ್ಟೆಯನ್ನು ಹೊರತುಪಡಿಸಿದರೆ ಹಾಲಿಗೆ ಮೊದಲ ಅಗ್ರಸ್ಥಾನ. ಬಹುಶಃ ನಗರ ಪ್ರದೇಶದಲ್ಲಿ ಶ್ರೀಮಂತರು ಮಾತ್ರ ಹಾಲನ್ನು ಬಳಸಬೇಕೆ? ಬಡ ಮಧ್ಯಮ ವರ್ಗ

(2ನೇ ಪುಟ ನೋಡಿ)


## ಈ ದೇಶ ಧರ್ಮಶಾಲೆಯಲ್ಲ : ಅಮಿತ್ ಶಾ



ನವದೆಹಲಿ:ಮಾ.27:ಕೇಂದ್ರಸರ್ಕಾರ ಗುರುವಾರ ಲೋಕಸಭೆಯಲ್ಲಿ ವಲಸೆ ಮತ್ತು ವಿದೇಶಿಯರ ಮಸೂದೆ 2025 ಅಂಗೀಕರಿಸಿದ್ದು, ವ್ಯಾಪಾರ, ಶಿಕ್ಷಣ ಮತ್ತು ಹೂಡಿಕೆಗಾಗಿ ಭಾರತ-ಕ್ಕೆ ಬರುವವರಿಗೆ ಸ್ವಾಗತ. ಆದರೆ ಭದ್ರತೆಗೆ ಬೆದರಿಕೆ ಒಡ್ಡುವವರು ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಎಚ್ಚರಿಸಿದ್ದಾರೆ. ಅಮಿತ್ ಶಾ ಅವರು ಮಂಡಿಸಿದ ವಲಸೆ ಮತ್ತು ವಿದೇಶಿಯರ ಮಸೂದೆಯನ್ನು ವಾದ-ವಿವಾದಗಳ ಮಧ್ಯೆ ವಿರೋಧ ಪಕ್ಷದ ಸದಸ್ಯರು ಸೂಚಿಸಿದ ತಿದ್ದುಪಡಿಗಳನ್ನು ತಿರಸ್ಕರಿಸಿ, ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು. ದೇಶದ ಭದ್ರತೆ ಮತ್ತು ಆರ್ಥಿಕತೆಯನ್ನು ಬಲಪಡಿಸಲು, ಉತ್ಪಾದನೆ ಮತ್ತು ವ್ಯಾಪಾರವನ್ನು ಉತ್ತೇಜಿಸಲು, ಶಿಕ್ಷಣ ವ್ಯವಸ್ಥೆಗೆ ಜಾಗತಿಕ ಮನ್ನಣೆ ಪಡೆಯಲು ಮತ್ತು ವಿಶ್ವವಿದ್ಯಾಲಯಗಳು ಅಂತರರಾಷ್ಟ್ರೀಯ ಖ್ಯಾತಿಯನ್ನು ಗಳಿಸಲು ಈ ಮಸೂದೆ ಅಗತ್ಯವಾಗಿದೆ

(2ನೇ ಪುಟ ನೋಡಿ)

## ಮೊಬೈಲ್ ಬಳಸದಂತೆ ಹೇಳಿದ್ದಕ್ಕೆ ಬಾಲಕಿ ಆತ್ಮಹತ್ಯೆ



ಮಲ್ಲಮ್ಮನುಡಿವಾರ್ತೆ ಬೀದರ. ಮಾ. 27 : ಮೊಬೈಲ್ ಹೆಚ್ಚು ಬಳಸಬಾರದು ಎಂದು ತಂದೆ ಹೇಳಿದ್ದಕ್ಕೆ ಮನನೊಂದ ಬಾಲಕಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ತಾಲ್ಲೂಕಿನ ಡಿಗ್ಗಿ ಗ್ರಾಮದಲ್ಲಿ ನಡೆದಿದೆ. ಸೋನಿ ಸಂತೋಷ ಬನವಾಸೆ (15) ಮೃತ ಬಾಲಕಿ. ಬುಧವಾರ ಘಟನೆ ನಡೆದಿದೆ.

'ಮೊಬೈಲ್‌ನಲ್ಲಿ ಹೆಚ್ಚಿನ ಸಮಯ ಕಾಲಾಹರಣ ಮಾಡಬಾರದು' ಎಂದು ಸಂತೋಷ ಅವರು ಮಗಳಿಗೆ ಬುದ್ಧಿಮಾತು ಹೇಳಿದ್ದಾರೆ.

ಇದರಿಂದ ಮನನೊಂದ ಸೋನಿ ನೇಣು ಹಾಕಿಕೊಂಡು ಜೀವ ತ್ಯಜಿಸಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ. ಕಮಲನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಕ್ರಮ ಮರಳು ದಂಧೆ ತಡೆಯುವಲ್ಲಿ ತಾಲೂಕಾಡಳಿತ ವಿಫಲ : ಆರೋಪ



ಮಲ್ಲಮ್ಮನುಡಿವಾರ್ತೆ ಚಿಟಗುಪ್ಪ:ಮಾ.27: ತಾಲ್ಲೂಕಾದ್ಯಂತ ಅನಧಿಕೃತ ಮರಳು ಸಾಗಾಟ, ಅಕ್ರಮ ಗಣಿಗಾರಿಕೆ, ಅಕ್ರಮ ಮಣ್ಣು, ಸೇರಿದಂತೆ ಇತರರೆ ಅಕ್ರಮ ಚಟುವಟಿಕೆಗಳು ರಾಜಾರೋಷವಾಗಿ ನಡೆಯುತ್ತಿದರೂ ಇಲ್ಲಿನ ತಾಲೂಕ ಆಡಳಿತ ಕಣ್ಣಿದು ಕುರುಡರಂತೆ ವರ್ತಿಸುತ್ತಿದೆ ಎಂಬ ಆರೋಪ ಸಾರ್ವಜನಿಕ ವಲಯದಿಂದ ಕೇಳಿ ಬರುತ್ತಿದೆ. ಈ ಕುರಿತು ತಾಲೂಕ ಆಡಳಿತದ ವಿರುದ್ಧ ಕಂದಾಯ ಸಚಿವರಿಗೆ ಕೆಲವರು ಹೆಸರು ಹೇಳದೆ ಇಚ್ಛ್ಯಯಿಸದವರು ಸಚಿವರಿಗೆ ದೂರನ್ನು ನೀಡಿದ್ದಾರೆ ಎಂಬ ಮಾಹಿತಿ ಪತ್ರಿಕೆಗೆ ತಿಳಿಸಿದ್ದಾರೆ. ಇದೆ ರೀತಿ ಅಕ್ರಮ ಮರಳು ಸಾಗಾಟ, ಅಕ್ರಮ ಮಣ್ಣು, ಅಕ್ರಮ ಕಲ್ಲು ಗಣಿಗಾರಿಕೆ ಇವುಗಳಿಂದ ಸರ್ಕಾರಕ್ಕೆ ಕೋಟಿ ಗಟ್ಟಲೆ ಹಾನಿಯಾಗುತ್ತಿದ್ದು, ಹಾಗೂ ಪರಿಸರ ನಾಶವಾಗುತ್ತಿದೆ ಇದರ ಬಗ್ಗೆ ಜಿಲ್ಲಾಡಳಿತ ಮಧ್ಯಸ್ಥಿಕೆ ವಹಿಸಿ ಅಕ್ರಮ ಗಣಿಗಾರಿಕೆಗಳು ತಡೆಯಬೇಕು ಎಂಬ ಒತ್ತಾಯ ಸಾರ್ವಜನಿಕರದಾಗಿದೆ.

## ರಾಜ್ಯ ಮಾಹಿತಿ ಆಯೋಗದ ಆಯುಕ್ತ ರವೀಂದ್ರ ಡಾಕಪ್ಪ ಲೋಕಾ ಬಲೆಗೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಮಾ.27: ಆರ್.ಟಿ.ಐ ಕಾರ್ಯಕರ್ತರೊಬ್ಬರಿಂದ ಲಂಚ ಸ್ವೀಕರಿಸಿದ ರಾಜ್ಯ ಮಾಹಿತಿ ಆಯೋಗದ ಆಯುಕ್ತ ರವೀಂದ್ರ ಗುರುನಾಥ ಡಾಕಪ್ಪ ಲೋಕಾಯುಕ್ತರ ಬಲೆಗೆ ಬಿದ್ದಿದ್ದಾರೆ.

ಆರ್.ಟಿ.ಐ ಕಾರ್ಯಕರ್ತ ಸಾ.ಶಿ.ಬೆನಕನಳ್ಳಿ ಅವರಿಂದ ರೂ. 3 ಲಕ್ಷಕ್ಕೆ ಬೇಡಿಕೆ ಇಟ್ಟು, ಮುಂಗಡವಾಗಿ ಒಂದು ಲಕ್ಷ ರೂ. ಸ್ವೀಕರಿಸುತ್ತಿದ್ದಾಗ ಲೋಕಾಯುಕ್ತರು ಬೀಸಿದ ಬಲೆಗೆ ಬಿದ್ದಿದ್ದಾರೆ.

ಕಲಬುರಗಿಯ ತಮ್ಮ ಕಚೇರಿಯಲ್ಲಿ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿರುವ ರವೀಂದ್ರ ಗುರನಾಥ ಡಾಕಪ್ಪ ಅವರು ಕಪ್ಪುಪಟ್ಟಿಗೆ ಸೇರಿಸಲಾಗಿದ್ದ ಆರ್.ಟಿ.ಐ ಕಾರ್ಯಕರ್ತರನ್ನು ಆ ಪಟ್ಟಿಯಿಂದ ತೆಗೆದು ಹಾಕುವುದಾಗಿ ಮಾಹಿತಿ ಆಯೋಗದ ಆಯುಕ್ತ ರವೀಂದ್ರ ಡಾಕಪ್ಪ ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಈ ಕುರಿತು ಬೆನಕನಳ್ಳಿ ಲೋಕಾಯುಕ್ತ ಪೊಲೀಸರಿಗೆ ದೂರು ಸಲ್ಲಿಸಿದ ಬಳಿಕ ದಾಳಿಗೆ ಅಗತ್ಯ ಸಿದ್ದತೆ ಮಾಡಿಕೊಂಡಿದ್ದರು. ಇಂದು ಬೆನಕನಳ್ಳಿ ಅವರಿಂದ ಫೋನ್ ಪೇ ಮೂಲಕ ಹಣ ಸ್ವೀಕರಿಸುತ್ತಿದ್ದಂತೆಯೇ

ಲೋಕಾಯುಕ್ತ ಡಿವೈಎಸ್ ಪಿ ಗೀತಾ ಬೇನಾಳ್ ನೈತೃತ್ವದಲ್ಲಿ ದಾಳಿ ನಡೆಸಲಾಗಿದೆ.

## ಒಲವಿನ ಕ್ಷೇತ್ರ ಆಯ್ಕೆ ಮಾಡಿಕೊಳ್ಳಿ



ಮಲ್ಲಮ್ಮನುಡಿವಾರ್ತೆಬೀದರ್:ಮಾ.27: ವಿದ್ಯಾರ್ಥಿಗಳು ಜೀವನದಲ್ಲಿ ಸಾಧನೆಗೆ ಒಲವು ಇರುವ ಕ್ಷೇತ್ರವನ್ನೇ ಆಯ್ಕೆ ಮಾಡಿಕೊಳ್ಳಬೇಕು ಎಂದು ಹೈದರಾಬಾದನ ಪ್ರೇರಕ ಭಾಷಣಕಾರ ಪಿ. ರಂಗಾರೆಡ್ಡಿ ಹೇಳಿದರು.

ನಗರದ ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನಲ್ಲಿ ಗುರುವಾರ ನಡೆದ ವೃತ್ತಿ ಮಾರ್ಗದರ್ಶನ ಹಾಗೂ ಸಮಾಲೋಚನೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಕೇವಲ ವೈದ್ಯಕೀಯ ಹಾಗೂ ಎಂಜಿನಿಯರಿಂಗ್‌ಗೆ ಸೀಮಿತರಾಗಬಾರದು. ಎಲ್ಲ ಕ್ಷೇತ್ರಗಳಲ್ಲೂ ಪಸರಿಸಬೇಕು. ಯು.ಪಿ.ಎಸ್.ಸಿ. ಹಾಗೂ ಕೆ.ಪಿ.ಎಸ್.ಸಿ. ಪರೀಕ್ಷೆಗಳಲ್ಲೂ ಯಶ ಗಳಿಸಲು ಪ್ರಯತ್ನಿಸಬೇಕು ಎಂದು ತಿಳಿಸಿದರು.

ಯಶಸ್ಸು ಹಾಗೂ ಪರಿಶ್ರಮ ಒಂದೇ ನಾಣ್ಯದ ಎರಡು ಮುಖಗಳಾಗಿವೆ. ಪ್ರಯತ್ನಪಟ್ಟರೆ ಯಶಸ್ಸು ಸಿಕ್ಕೇ ಸಿಗುತ್ತದೆ ಎಂದು ಹೇಳಿದರು.

ಚಿಂತಕ ವೆಂಕಟ ವಾವಿಲಾಲ್ ಮಾತನಾಡಿ, ಕೌಶಲ ಇದ್ದವರಿಗೆ ಅವಕಾಶಗಳ ಕೊರತೆ ಇಲ್ಲ ಎಂದು ತಿಳಿಸಿದರು. ವೃತ್ತಿ ಮಾರ್ಗದರ್ಶನ ಹಾಗೂ ಸಮಾಲೋಚನೆ ವಿದ್ಯಾರ್ಥಿಗಳಿಗೆ ಅತ್ಯಗತ್ಯ ಅಂಶಗಳಾಗಿವೆ. ವಿದ್ಯಾರ್ಥಿಗಳು ವೃತ್ತಿ ಅರಿವು, ಕೌಶಲ ಹಾಗೂ ಸಮಯ ಪ್ರಜ್ಞೆ ಹೊಂದಿರಬೇಕು ಎಂದು ಅಧ್ಯಕ್ಷತೆ ವಹಿಸಿದ್ದ ಕಾಲೇಜು ಪ್ರಾಚಾರ್ಯ ಡಾ. ಪಿ. ವಿಠ್ಠಲರೆಡ್ಡಿ ಹೇಳಿದರು.

ಹೈದರಾಬಾದನ ಎಸ್.ಎನ್. ಕಮ್ಯುನಿಕೇಷನ್ಸ್ ಮುಖ್ಯಸ್ಥ ಶಂಕರ ಜಾಧವ್, ಉಪ ಪ್ರಾಚಾರ್ಯ ಅನಿಲಕುಮಾರ ಆಣದೂರೆ ಮಾತನಾಡಿದರು.

ಪ್ರಾಣಿಶಾಸ್ತ್ರ ವಿಭಾಗದ ಮುಖ್ಯಸ್ಥೆ ಪೂಜಾ. ಎಂ. ಸ್ವಾಗತಿಸಿದರು. ನಾಗರಾಣಿ ಪಾಲಂ ನಿರೂಪಿಸಿದರು. ಪ್ರಿಯದರ್ಶಿನಿ ವಂದಿಸಿದರು.

ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು ಹಾಗೂ ಹೈದರಾಬಾದನ ಧ್ರುವ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

## ಭಕ್ತಾದಿಗಳ ಮನೆಬಾಗಿಲಿಗೆ ದೇವರ ಪ್ರಸಾದ ತಲುಪಿಸಲು 'ಇ-ಪ್ರಸಾದ' ಲೋಕಾರ್ಪಣೆ : ರಾಮಲಿಂಗಾರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು: ಮಾ. 27:ಧಾರ್ಮಿಕ ದತ್ತಿ ಇಲಾಖೆಯ ಪ್ರಮುಖ ದೇವಾಲಯಗಳಲ್ಲಿ ಭಕ್ತಾದಿಗಳಿಗೆ ವಿತರಿಸುವ ಪ್ರಸಾದವನ್ನು ಭಕ್ತಾದಿಗಳ ಮನೆ ಬಾಗಿಲಿಗೆ ತಲುಪಿಸಬೇಕು ಎನ್ನುವ ಉದ್ದೇಶದಿಂದ 'ಇ-ಪ್ರಸಾದ' ಲೋಕಾರ್ಪಣೆ ಮಾಡಲಾಗಿದೆ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಇಲಾಖೆ ಮತ್ತು ಸಿ.ಎಸ್.ಇ ಆಡಳಿತ ಇವರ ಸಹಯೋಗದೊಂದಿಗೆ ಇಂದು ಬಿ.ಎಂ.ಟಿ.ಸಿ ಸಾರಿಗೆ ಆಯುಕ್ತರ ಕಚೇರಿಯಲ್ಲಿ ಹಮ್ಮಿಕೊಂಡಿದ್ದ 'ಇ-ಪ್ರಸಾದ' ಕಾರ್ಯಕ್ರಮದ ಉದ್ಘಾಟನೆ ಹಾಗೂ ವೆಬ್‌ಸೈಟ್‌ಗೆ ಚಾಲನೆ ನೀಡಿ ಮಾತನಾಡಿದರು.

ಭಾರತ ದೇಶದಲ್ಲೇ ಪ್ರಪ್ರಥಮವಾಗಿ ಮನೆಮನೆಗೆ ದೇವರ ಪ್ರಸಾದವನ್ನು ತಲುಪಿಸುವ ವಿನೂತನ ಕಾರ್ಯಕ್ರಮವನ್ನು ಜಾರಿಗೆ ತರಲಾಗಿದೆ. ರಾಜ್ಯದಲ್ಲಿ ಮುಜರಾಯಿಗೆ ಸೇರಿದ ಸುಮಾರು 34,556 ದೇವಸ್ಥಾನಗಳಿದ್ದು, ಎ, ಬಿ ಗ್ರೇಡ್‌ಗೆ ಸೇರಿದ 398 ದೇವಸ್ಥಾನಗಳಿವೆ. ಅವುಗಳಲ್ಲಿ ಶ್ರೀ ಹುಲಿಗಮ್ಮ, ಶ್ರೀ ರೇಣುಕಾ ಯಲ್ಲಮ್ಮ, ಕುಕ್ಕೆ ಶ್ರೀ ಸುಬ್ರಮಣ್ಯ ದೇವಾಲಯಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಭೇಟಿ ನೀಡುತ್ತಾರೆ ಎಂದರು.

ಭಕ್ತಾದಿಗಳಿಗೆ ದೇವಸ್ಥಾನಕ್ಕೆ ಹೋಗಲು ಇಚ್ಚೆ ಇದ್ದರೂ ಕೆಲವೊಮ್ಮೆ ಎಲ್ಲರಿಗೂ ಭೇಟಿ ನೀಡಲು ಸಾಧ್ಯವಾಗುವುದಿಲ್ಲ. ವಯೋವೃದ್ಧರಿಗೆ, ವಿಕಲಚೇತನರಿಗೆ, ಒಂಟಿಯಾಗಿ ವಾಸಿಸುವರಿಗೆ, ದೂರ ದೇಶದಲ್ಲಿ ಇರುವವರಿಗೆ ಹೋಗಲು ಅವಕಾಶ ಸಿಗುವುದಿಲ್ಲ. ಅಂತಹವರು ಹಾಗೂ ಮನೆಯಲ್ಲಿ ಶುಭಕಾರ್ಯ ಮಾಡುವವರು ದೇವರ ಪ್ರಸಾದ ತರಿಸಿಕೊಂಡು ಪೂಜೆ ಮಾಡಬಹುದು ಎನ್ನುವ ಉದ್ದೇಶದಿಂದ "csc e-Governance Servicess India Limited"

(2ನೇ ಪುಟ ನೋಡಿ)

## ಒಳಮೀಸಲಾತಿ : ನಾಗಮೋಹನ್ ದಾಸ್ ಆಯೋಗ ಮಧ್ಯಂತರ ವರದಿ ಅಂಗೀಕಾರ



ಮಲ್ಲಮ್ಮನುಡಿವಾರ್ತೆ ಬೆಂಗಳೂರು, ಮಾ 27:ನಿವೃತ್ತ ನ್ಯಾಯಮೂರ್ತಿಗಳಾದ ಗೌರವಾನ್ವಿತ ಹೆಚ್.ಎನ್.ನಾಗಮೋಹನ್ ದಾಸ್ ಅವರ ಅಧ್ಯಕ್ಷತೆಯಲ್ಲಿ ಪರಿಶಿಷ್ಟ ಜಾತಿಗಳಲ್ಲಿ ಒಳಮೀಸಲಾತಿ ಕಲ್ಪಿಸುವ ಸಂಬಂಧ ರಚಿಸಲಾಗಿದ್ದ ಏಕಸದಸ್ಯ ಆಯೋಗ ನೀಡಿದ ಮಧ್ಯಂತರ ವರದಿಯನ್ನು ಸಚಿವ ಸಂಪುಟ ಅಂಗೀಕರಿಸಿರುವುದಾಗಿ ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್ ಅವರು ತಿಳಿಸಿದರು.

ಅವರು ಇಂದು ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದ ಕುರಿತು ವಿಧಾನಸೌಧದ ಸಮ್ಮೇಳನದ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಸಚಿವರ ಹೆಚ್.ಸಿ. ಮಹಾದೇವಪ್ಪ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಶರಣಪ್ರಕಾಶ ಪಾಟೀಲ್ ಅವರೊಂದಿಗೆ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದರು.

ನಾಲ್ಕು ಪ್ರಮುಖ ಶಿಫಾರಸ್ಸುಗಳನ್ನು ಮಾಡಿದೆ. ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿಯಲ್ಲಿರುವ ಉಪಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ಹೊಸದಾದ ಸಮೀಕ್ಷೆ ನಡೆಸಿ ದತ್ತಾಂಶವನ್ನು ಸಂಗ್ರಹಿಸಬೇಕು. ಆಧುನಿಕ ವಿಜ್ಞಾನ ಮತ್ತು ತಂತ್ರಜ್ಞಾನದ ಸಾಧನಗಳನ್ನು ಬಳಸಿ 30 ರಿಂದ 40 ದಿವಸಗಳೊಳಗೆ ಹೊಸ ಸಮೀಕ್ಷೆಯನ್ನು ನಡೆಸಬಹುದೆಂದು ತಜ್ಞರು ಅಭಿಪ್ರಾಯ ಪಡುತ್ತಾರೆ. ಹೊಸದಾದ ಸಮೀಕ್ಷೆ ನಡೆಸಲು ಅಗತ್ಯವಿರುವ ಪ್ರಶ್ನಾವಳಿಯನ್ನು ಸಿದ್ದಪಡಿಸಬೇಕು. ಯಾವ ಸಂಸ್ಥೆಯಿಂದ ಸಮೀಕ್ಷೆ ನಡೆಸಬೇಕು . ಸಮೀಕ್ಷೆಗೆ ಅಗತ್ಯವಿರುವ ತರಬೇತಿ, ಸಂಪನ್ಮೂಲ ಕ್ರೋಢೀಕರಣಗಳ ಉಸ್ತುವಾರಿಗಾಗಿ ಉನ್ನತ ಮಟ್ಟದ ಸಮಿತಿಯನ್ನು ರಚಿಸುವುದು ಸೂಕ್ತವೆಂದು ಆಯೋಗವು ಅಭಿಪ್ರಾಯಪಟ್ಟಿದೆ ಎಂದರು.

ಹೊಸ ಸಮೀಕ್ಷೆಯಿಂದ ಸಂಗ್ರಹಿಸಿದ ದತ್ತಾಂಶದ ಆಧಾರದ ಮೇಲೆ ಈ ವರದಿಯಲ್ಲಿ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## 'ಇ-ಪ್ರಸಾದ' ಲೋಕಾರ್ಪಣೆ : ರಾಮಲಿಂಗಾರೆಡ್ಡಿ

ಸಂಸ್ಥೆಯ ಸಹಯೋಗದೊಂದಿಗೆ ಈ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದರು.

ಪ್ರಾಯೋಗಿಕವಾಗಿ ಪ್ರಮುಖ 14 ದೇವಸ್ಥಾನಗಳಾದ ಬೆಂಗಳೂರು ಜಯನಗರದ ಶ್ರೀ ವಿನಾಯಕ ಸ್ವಾಮಿ ದೇವಾಲಯ, ಮಂಡ್ಯ ಜಿಲ್ಲೆಯ ಚೆಲುವನಾರಾಯಣ ಸ್ವಾಮಿ ದೇವಾಲಯ, ಮೈಸೂರು ಜಿಲ್ಲೆಯ ನಂಜನಗೂಡಿನ ಶ್ರೀ ಶ್ರೀ ಕಂಠೇಶ್ವರ ಸ್ವಾಮಿ ದೇವಾಲಯ, ಕೋಲಾರ ಜಿಲ್ಲೆಯ ಮಾಲೂರು ಶ್ರೀ ಪ್ರಸನ್ನ ವೆಂಕಟರಮಣ ಸ್ವಾಮಿ ದೇವಾಲಯ, ಬೆಂಗಳೂರಿನ ಹಲಸೂರು ಶ್ರೀ ಸೋಮೇಶ್ವರ ಸ್ವಾಮಿ ದೇವಾಲಯ, ಉಡುಪ ಜಿಲ್ಲೆಯ ಕೊಲ್ಲೂರು ಶ್ರೀ ಮೂಕಾಂಬಿಕಾ ದೇವಾಲಯ, ಬೆಂಗಳೂರು ಗವೀಪುರಂ ಶ್ರೀ ಗವಿಗಂಗಾಧರೇಶ್ವರ ಸ್ವಾಮಿ ದೇವಾಲಯ, ಶ್ರೀ ಕ್ಷೇತ್ರ ಝರಣಿ ನರಸಿಂಹ ದೇವಸ್ಥಾನ ಬೀದರ್, ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಯಲ್ಲಮ್ಮನಗುಡ್ಡ ಬೆಳಗಾವಿ. ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಾಲಯ, ಸುಳ್ಯ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ. ಬಳ್ಳಾರಿ ಶ್ರೀ ಕನಕದುರ್ಗಮ್ಮ ದೇವಾಲಯ, ವಿಜಯನಗರ ಜಿಲ್ಲೆಯ ಹೂವಿನ ಹಡಗಲಿ ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನ. ಕೊಪ್ಪಳ ಜಿಲ್ಲೆಯ ಹುಲಿಗಿ ಶ್ರೀ ಹುಲಿಗಮ್ಮ ದೇವಾಲಯ, ಗುಲ್ಬರ್ಗ ಜಿಲ್ಲೆಯ ಗಾಣಗಾಪುರ ಶ್ರೀ ಗುರುದತ್ತಾತ್ರೇಯ ಸ್ವಾಮಿ ದೇವಾಲಯಗಳ ಪ್ರಸಾದ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಸದರಿ ದೇವಾಲಯಗಳಲ್ಲಿ ಕಲ್ಲು ಸಕ್ಕರೆ, ಬಾದಾಮಿ, ಗೋಡಂಬಿ, ದ್ರಾಕ್ಷಿ, ಭಸ್ಮ ಅಥವಾ ಭಂಡಾರ, ಕುಮಕುಮ, ಬಿಲ್ವಪತ್ರೆ, ಹೂವು, ತುಳಸಿ ಹಾಗೂ ಪ್ಯಾಕೆಟ್ ಅಳತೆಯ ಲ್ಯಾಮಿನೇಟೆಡ್ ಭಾವಚಿತ್ರ, ಡಾಲರ್, ದಾರ, ಸ್ತೋತ್ರವನ್ನು ಪ್ರಿಂಟ್ ಮಾಡಿಸಿ ಭಕ್ತಾದಿಗಳಿಗೆ ತಲುಪಿಸಲಾಗುವುದು ಎಂದರು.

ಭಕ್ತಾದದಿಗಳು ಈ ದೇವಾಲಯಗಳಿಂದ ಸಿಎಸ್‌ಸಿ ಸಂಸ್ಥೆಯ ಮುಖಾಂತರ ಪ್ರಸಾದಗಳನ್ನು ಪಡೆಯಬಹುದು. ಮುಜರಾಯಿ ದೇವಸ್ಥಾನಗಳಲ್ಲಿ ಸರ್ಕಾರಿ ವೇತನ ಪಡೆಯುವ ಅರ್ಚಕರಿಗಿಂತ ಅನುವಂಶಿಕ ಅರ್ಚಕರು ಸುಮಾರು 34 ಸಾವಿರ ಇದ್ದಾರೆ. ಇವರು ನಿಧನರಾದರೆ ಒಬ್ಬರಿಗೆ 2 ಲಕ್ಷ ರೂ.ಗಳನ್ನು ನೀಡಲಾಗುವುದು. ಇವರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ 5 ಸಾವಿರದಿಂದ 1 ಲಕ್ಷ ರೂ.ಗಳವರೆಗೆ ವಿದ್ಯಾರ್ಥಿ ವೇತನ ನೀಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಧರ್ಮಿಕ ದತ್ತಿ ಇಲಾಖೆಯ ಆಯುಕ್ತ ಎಂ.ವಿ.ವೆಂಕಟೇಶ್, ರಾಜ್ಯ ಧಾರ್ಮಿಕ ಪರಿಷತ್ತು ಸದಸ್ಯೆ ಶ್ರೀಮತಿ ಮಲ್ಲಿಕಾ ಪ್ರಶಾಂತ ಪಕ್ಕಲಾ, ಸಿಎಸ್‌ಸಿ ಮುಖ್ಯಸ್ಥ ಷಫಿಕ್ ಮಹಮ್ಮದ್ ಉಪಸ್ಥಿತರಿದ್ದರು.

## ಬೆಲೆ ೨ ರೂ. ಏರಿಕೆ : ಸುರೇಶ್ ಕುಮಾರ್

ಹಾಲನ್ನು ಬಳಸಬಾರದೇ? ಹಾಲು ಹಾಲಾಹಲವಾಗುವ ಪರಿಸ್ಥಿತಿಗೆ ತಂದು ನಿಲ್ಲಿಸಿದೆ ಈ ಸರ್ಕಾರ.

ಗ್ಯಾರಂಟಿ ಉಚಿತ, ಬೆಲೆ ಏರಿಕೆ ಖಚಿತ ಎಂಬ ಈ ನಿಲುವು ರಾಜ್ಯದ ಆರ್ಥಿಕ ವ್ಯವಸ್ಥೆ ದಿಕ್ಕೆಟ್ಟಿರುವ ದ್ಯೋತಕವಾಗಿದೆ. ಈಗ ಹಾಲಿನ ದರ, ಮುಂದೆ ನೀರಿನ ದರ, ಆಮೇಲೆ ವಿದ್ಯುತ್ ದರ, ಬಹುಶಃ ಸೇವಿಸುವ ಗಾಳಿಗೂ ಬೆಲೆ ನಿಗದಿ ಪಡಿಸುವ ದಿನ ಬಹಳ ದೂರ ಇಲ್ಲ.ರಾಜ್ಯ ಕಾಂಗ್ರೆಸ್ ಸರ್ಕಾರದ ನಿರಂತರ ಬೆಲೆ ಏರಿಕೆಯ ಬರೆಯಿಂದ ಬಳಲುತ್ತಿರುವ ಜನಸಾಮಾನ್ಯರಿಗೆ ಇಂದು ಹಾಲಿನ ದರ ಏರಿಕೆ ಮಾಡಿ ಮತ್ತೆ ಸುಲಿಗೆ ಮಾಡುವ ಕಾರ್ಯ ಮುಂದುವರೆಸಿದೆ ಸಿದ್ದರಾಮಯ್ಯ ನೇತೃತ್ವದ ಸರ್ಕಾರ. ಬೆಲೆಏರಿಕೆ ಕಾಂಗ್ರೆಸ್ ಅಘೋಷಿತ ಗ್ಯಾರಂಟಿ ಎಂಬುದು ಪ್ರತಿನಿತ್ಯ ರುಜುವಾತು ಆಗುತ್ತಿದೆ. ನಿಜಕ್ಕೂ ರಾಜ್ಯದ ಜನರ ಪಾಲಿಗೆ ಬೆಲೆ ಏರಿಕೆಯ ಗ್ಯಾರಂಟಿ ಕೊಟ್ಟಿರುವ ಅತ್ಯಂತ ಅಮಾನವೀಯ ಹಾಗೂ ಖಂಡನೀಯ.

## ಧರ್ಮಶಾಲೆಯಲ್ಲ : ಅಮಿತ್ ಶಾ

ಎಂದು ಅಮಿತ್ ಶಾ ಹೇಳಿದ್ದಾರೆ.ಮಸೂದೆಯ ಮೇಲಿನ ಚರ್ಚೆಗೆ ಉತ್ತರಿಸಿದ ಅವರು, ಪ್ರಸ್ತಾವಿತ ಮಸೂದೆಯು ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಗಳನ್ನು ಉತ್ತೇಜಿಸುವುದರ ಜೊತೆಗೆ ದೇಶದ ಭದ್ರತೆಯನ್ನು ಬಲಪಡಿಸುತ್ತದೆ. ಆರ್ಥಿಕತೆ ಮತ್ತು ವ್ಯವಹಾರವನ್ನು ಹೆಚ್ಚಿಸುತ್ತದೆ ಎಂದರು.ಭಾರತಕ್ಕೆ ಭೇಟಿ ನೀಡುವ ಪ್ರತಿಯೊಬ್ಬ ವಿದೇಶಿಯರ ಬಗ್ಗೆ ದೇಶ ನವೀಕೃತ ಮಾಹಿತಿ ಪಡೆಯುವುದನ್ನು ಈ ಮಸೂದೆ ಖಚಿತಪಡಿಸುತ್ತದೆ. ಯಾರೂ ಬೇಕಾದ್ರೂ ಬಂದು ಇಲ್ಲಿರಲು ಈ ದೇಶ ಧರ್ಮಶಾಲೆಯಲ್ಲ. ಯಾರು ಬರುತ್ತಾರೆ, ಯಾವಾಗ ಏಕೆ ಬರುತ್ತಾರೆ ಮತ್ತು ಎಲ್ಲಿ ಉಳಿದುಕೊಳ್ತಾರೆ ಎಂಬುದನ್ನು ತಿಳಿಯುವ ಹಕ್ಕು ಈ ದೇಶಕ್ಕೆ ಇದೆ ಎಂದು ಅಮಿತ್ ಶಾ ಹೇಳಿದರು. ಕಳೆದ 10 ವರ್ಷಗಳಲ್ಲಿ ಭಾರತದ ಆರ್ಥಿಕತೆ 11ನೇ ಸ್ಥಾನದಿಂದ 5ನೇ ಸ್ಥಾನಕ್ಕೆ ಏರಿದೆ. ಭಾರತ ಉತ್ಪಾದನಾ ಕೇಂದ್ರವಾಗುತ್ತಿದೆ. ಇಂತಹ ಸಂದರ್ಭದಲ್ಲಿ ವಿದೇಶಿಯರು ಇಲ್ಲಿಗೆ ಬರುವುದು ಸಹಜ. ಆದರೆ ದೇಶದ ವ್ಯವಸ್ಥೆಗೆ ಕೊಡುಗೆ ನೀಡಲು ಬರುವವರಿಗೆ ಸ್ವಾಗತವಿದೆ. ಆದರೆ ರೋಹಿಂಗ್ಯಾ ಅಥವಾ ಬಾಂಗ್ಲಾದೇಶಿಗಳು ಅಶಾಂತಿ ಸೃಷ್ಟಿಸಲು ಬಂದರೆ, ಅವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು' ಎಂದು ಅಮಿತ್ ಶಾ ತಿಳಿಸಿದರು.

ವಲಸೆ ಮತ್ತು ವಿದೇಶಿಯರಿಗೆ ಸಂಬಂಧಿಸಿದ ವಿವಿಧ ಸೇವೆಗಳನ್ನು ಸುಗಮಗೊಳಿಸಲು ಯತ್ನಿಸುವ ಈ ಮಸೂದೆಯ ಕೆಲವು ನಿಬಂಧನೆಗಳು ವಲಸೆ ಅಧಿಕಾರಿಗಳಿಗೆ "ಅನಿಯಂತ್ರಿತ ಅಧಿಕಾರ" ನೀಡುತ್ತದೆ ಎಂದು ವಿರೋಧ ಪಕ್ಷದ ಸಂಸದರು ಆರೋಪಿಸಿದರು ಮತ್ತು ಅದನ್ನು ವಿವರವಾದ ಪರಿಶೀಲನೆಗಾಗಿ ಜಂಟಿ ಸಂಸದೀಯ ಸಮಿತಿಗೆ ಕಳುಹಿಸಬೇಕೆಂದು ಒತ್ತಾಯಿಸಿದರು.ವಲಸೆ ಮತ್ತು ವಿದೇಶಿಯರ ಮಸೂದೆ, 2025 ಅನ್ನು ಈ ತಿಂಗಳ ಆರಂಭದಲ್ಲಿ ಲೋಕಸಭೆಯಲ್ಲಿ ಮಂಡಿಸಲಾಗಿತ್ತು.

## ಆಯೋಗ ಮಧ್ಯಂತರ ವರದಿ ಅಂಗೀಕಾರ

ತಿಳಿಯಪಡಿಸಿರುವ ಮಾನದಂಡಗಳಂತೆ ಪರಿಶಿಷ್ಟ ಜಾತಿಯಲ್ಲಿರುವ ಉಪಜಾತಿಗಳ ವರ್ಗೀಕರಣಗೊಳಿಸಿ ಲಭ್ಯವಿರುವ ಮೀಸಲಾತಿ ಪ್ರಮಾಣವನ್ನು ಆದ್ಯತೆ ಮೇಲೆ ಹಂಚಿಕೆ ಮಾಡಬೇಕು ಎಂದು ಸಮಿತಿ ಶಿಫಾರಸ್ಸು ಮಾಡಿರುವ ಬಗ್ಗೆ ಸಚಿವರು ವಿವರಿಸಿದರು.

ನಾಗಮೋಹನ್ ದಾಸ್ ಆಯೋಗದವರ ಮಧ್ಯಂತರ ವರದಿಯನ್ನು ಸಚಿವ ಸಂಪುಟ ಅಂಗೀಕರಿಸಿದೆ. ಒಳಮೀಸಲಾತಿ ವರ್ಗೀಕರಣವನ್ನು ಶೀಘ್ರಗತಿಯಲ್ಲಿ ಕೈಗೊಳ್ಳುವ ಸಂಬಂಧ, ಹೊಸ ಸಮೀಕ್ಷೆ ನಡೆಸುವ ಕಾರ್ಯವನ್ನು ನಾಗಮೋಹನ್ ದಾಸ್ ಸಮಿತಿಗೆ ವಹಿಸಲು ಸಚಿವ ಸಂಪುಟ ನಿರ್ಣಯಿಸಿದೆ. ಸಮೀಕ್ಷಾ ಕಾರ್ಯವನ್ನು 60 ದಿನದೊಳಗೆ ಪೂರ್ಣಗೊಳಿಸಿ ವರದಿ ಸಲ್ಲಿಸಲು ಅನುಕೂಲವಾಗುವಂತೆ ಸಮಿತಿಯ ಅವಧಿಯನ್ನು ಎರಡು ತಿಂಗಳವರೆಗೆ ವಿಸ್ತರಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಸಮಿತಿಯ ಶಿಫಾರಸ್ಸುಗಳಲ್ಲಿ ಹೊಸ ವಿಷಯಗಳೇನಿದೆ ಹಾಗೂ ಎರಡು ತಿಂಗಳ ಕಾಲಾವಧಿಯಲ್ಲಿ ಸಮೀಕ್ಷೆ ಕೈಗೊಳ್ಳಲು ಸಾಧ್ಯವೇ ಎಂಬ ಪತ್ರಕರ್ತರ ಪ್ರಶ್ನೆ ಪ್ರತಿಕ್ರಿಯೆ ನೀಡಿದ ಸಚಿವರು, ರಾಜ್ಯದಲ್ಲಿ ಆರು ಸಾವಿರ ಪಂಚಾಯತಿ ಹಾಗೂ 300 ಕ್ಕೂ ಹೆಚ್ಚು ವಾರ್ಡ್ಗಗಳಿವೆ. ಈ ಕಾರ್ಯವನ್ನು ಸರ್ಕಾರದ ಮುಖ್ಯಕಾರ್ಯ ದರ್ಶಿಗಳ ಉಸ್ತುವಾರಿಯಲ್ಲಿ ಆಧುನಿಕ ತಂತ್ರಜ್ಞಾನ ಬಳಸಿ ತೀವ್ರಗತಿಯಲ್ಲಿ ಕೈಗೊಳ್ಳಲು ಸಚಿವಸಂಪುಟ ಸೂಚನೆ ನೀಡಿದೆ. ಆಯೋಗವು ಸಮೀಕ್ಷೆ ಕೈಗೊಳ್ಳಲು ಬೇಕಿರುವ ಎಲ್ಲ ಸೌಲಭ್ಯಗಳನ್ನು ಒದಗಿಸಲಾಗುವುದು. ಇದಕ್ಕೆ ಸಂಬಂಧಿಸಿದಂತೆ ಕಾರ್ಯದರ್ಶಿಗಳ ಸಭೆ ನಡೆಸಲಾಗುವುದು ಎಂದು ತಿಳಿಸಿದರು.

ಕಾಂಗ್ರೆಸ್ ಸರ್ಕಾರವು ಮೀಸಲಾತಿ ಸೌಲಭ್ಯ ನೀಡಲು ಬದ್ಧವಾಗಿದ್ದು, ಭವಿಷ್ಯದಲ್ಲಿ ಯಾವುದೇ ಗೊಂದಲಗಳಾಗದಂತೆ ದತ್ತಾಂಶಗಳು ಕರಾರುವಕ್ಕಾಗಿ ಪಡೆಯಲು ಹಾಗೂ ಹಾಗೂ ಜನರಿಗೆ ಮೀಸಲಾತಿಯ ಅನುಕೂಲ ಕಲ್ಪಿಸುವ ಉದ್ದೇಶವನ್ನು ಸರ್ಕಾರ ಹೊಂದಿರುವುದಾಗಿ ಸಚಿವರು ಹೇಳಿದರು.

ಈ ಹಿಂದೆ ನಡೆಸಲಾಗಿರುವ ಜನಗಣತಿಯಲ್ಲಿ ಆದಿ ಕರ್ನಾಟಕ, ಆದಿ ದ್ರಾವಿಡ , ಆದಿ ಆಂಧ್ರ,ಎಸ್ ಸಿ ವರ್ಗಗಳ ಮಾಹಿತಿಗಳು ವರದಿಯಲ್ಲಿ ಇರುವುದಿಲ್ಲ. ಈ ದತ್ತಾಂಶಗಳಿಲ್ಲದೇ ಹೋದರೆ ಕಾನೂನಿನಡಿ ಮಾನ್ಯವಾಗಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಎರಡು ತಿಂಗಳ ಕಾಲಾವಧಿಯಲ್ಲಿ ಹೊಸ ಸಮೀಕ್ಷೆ ಮಾಡಲು ನಿರ್ಧರಿಸಲಾಗಿದೆ ಎಂದು ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹಾದೇವಪ್ಪ ವಿವರಿಸಿದರು.

## ಗುರುನಾನಕ ಆಸ್ಪತ್ರೆಯಿಂದ ಇಂದು ಉಚಿತ ವೈದ್ಯಕೀಯ ತಪಾಸಣೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಮಾ.27: ತಾಲೂಕಿನ ಮನ್ನಾಎಖೇಳ್ಳಿ ಗ್ರಾಮದ ಪಾಟೀಲ ಪಾಲಿಕ್ಲಿನಿಕನಲ್ಲಿ ಬೀದರನ ಗುರುನಾನಕ ಆಸ್ಪತ್ರೆ ವತಿಯಿಂದ ಇಂದು ಶುಕ್ರವಾರ ಬೆಳಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆವರೆಗೆ ಉಚಿತ ವೈದ್ಯಕೀಯ ಶಿಬಿರ ಜರುಗಲಿದೆ. ಡಾ. ನೀತಾ ಕೌರ ನೇತೃತ್ವದ ವೈದ್ಯರ ತಂಡದಿಂದ ಕಿವಿ ಮತ್ತು ಶ್ರವಣ, ಮೂಗಿನ ಸಮಸ್ಯೆ ಗಂಟಲಿನ ಸಮಸ್ಯೆ, ಸೈನಸ್ ಸಮಸ್ಯೆ ಎಲ್ಲಾ ಇಎನಟಿ ಸಂಬಂಧಿತ ಉಚಿತ ವೈದ್ಯಕೀಯ ಶಿಬಿರ ಜರುಗಲಿದೆ. ಸಾರ್ವಜನಿಕರು ಉಚಿತ ತಪಾಸಣೆ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕೆಂದು ಪಾಟೀಲಪಾಲಿಕ್ಲಿನಿಕನ ಡಾ. ರಾಜಕುಮಾರ ಪಾಟೀಲ ತಿಳಿಸಿದ್ದಾರೆ.

## ಕ್ಯಾನ್ಸರ ನಿಯಂತ್ರಣ ಉಚಿತ ಲಸಿಕೆ



ಮಲ್ಲಮ್ಮನುಡಿವಾರ್ತೆಬೀದರ:ಮಾ.27: ಕೇಶವ ಕಾರ್ಯಸಂವರ್ಧನ ಸಮಿತಿ, ಬೀದರ,ಜೀವನ ಆಧಾರ ಫೌಂಡೇಷನ್ ಕಲಬುರ್ಗಿ ಹಾಗೂ ಸರಸ್ವತಿ ಶಿಕ್ಷಣ ವಿಕಾಸ ಸಮಿತಿ (ರಿ) ಬೀದರ ಸಹಯೋಗದಲ್ಲಿ 9 ರಿಂದ 19ರ ವಯೋಮಾನದ ಹುಡುಗಿಯರಿಗೆ ಕ್ಯಾನ್ಸರ ನಿಯಂತ್ರಣ ಉಚಿತ ಲಸಿಕೆ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.ಈಕಾರ್ಯಕ್ರಮದ ಕುರಿತು ಪ್ರಸ್ತಾವಿಕ ಮಾತುಗಳನ್ನು ಆಡಿದಸಂಸ್ಥೆಯಕಾರ್ಯದರ್ಶಿಗಳಾದ ಶ್ರೀ ಹನುಮಂತರಾವ ಪಾಟೀಲ ಅವರು ಕಲಬುರ್ಗಿಯ ರಾಷ್ಟ್ರೀಯ ಸ್ವಯಂಸೇವಕ ಸಂಘದ ವತಿಯಿಂದ ಈ ವ್ಯವಸ್ಥೆಯನ್ನು ಮಾಡಲಾಗಿದ್ದು, ನಾಲ್ಕು ದಿವಸಗಳ ಹಿಂದೆ ಬೀದರನ ವೈದ್ಯಾಧಿಕಾರಿಗಳ ಜೊತೆ ಸಂಪರ್ಕಿಸಿ, ಅನುಮಯನ್ನು ಪಡೆಯಲಾಗಿದೆ. ಹಾಗೂ ಈ ಲಸಿಕೆ ಕುರಿತು ಪೂರ್ಣ ತಯ್ಯಾರಿಯನ್ನುಮಾಡಲಾಗಿದೆಎಂದು ತಿಳಿಸಿದರು. ನಮ್ಮ ಸಂಸ್ಥೆಯು ಈ ರೀತಿಯ ಸಮಾಜಮುಖಿಯಾದ ಅನೇಕ ಚಟುವಟಿಕೆಗಳನ್ನು ಮಾಡುತಲಿದೆ. ಇದಕ್ಕೆ ಎಲ್ಲರ ಸಹಕಾರ, ಸಹಯೋಗ ಇದ್ದು, ಎಲ್ಲರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಜೀವನ ಆಧಾರ ಫೌಂಡೇಷನ್‌ನ ಅಧ್ಯಕ್ಷರಾದ ಡಾ॥ ಮಂಜುನಾಥ ಅವರು ಮುಖ್ಯಅತಿಥಿಗಳಾಗಿ ಆಗಮಿಸಿ, ಎಚ್.ಪಿ.ವಿ. ಲಸಿಕೆ-ಯ ವಿಶೇಷ ಮಾಹಿತಿಯನ್ನು ತಿಳಿಸಿದರು. ಎಚ್.ಪಿ.ವಿ. ಲಸಿಕೆಯು ಸ್ತ್ರೀಯರ ಗರ್ಭಕೋಶದ ಕ್ಯಾನ್ಸರ ನಿಯಂತ್ರಣ ಮಾಡುವ ಲಸಿಕೆ-ಯಾಗಿದೆ. ಹಾಗಾಗಿ 9 ರಿಂದ 19ರ ವಯೋಮಾನದ ಹುಡುಗಿಯರು ಈ ಲಸಿಕೆಯನ್ನು ಪಡೆದುಕೊಂಡರೆ ಮುಂದಿನ ಜೀವನದಲ್ಲಿ ಕ್ಯಾನ್ಸರ ತಡೆಗಟ್ಟಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಅಲ್ಲದೇ ಈ ಲಸಿಕೆಯಿಂದ ಯಾವುದೇ ಅಡ್ಡ ಪರಿಣಾಮಗಳು ಆಗುವುದಿಲ್ಲ ಹಾಗಾಗಿ ಯಾರು ಭಯ ಪಡುವ ಅವಶ್ಯಕತೆ ಇಲ್ಲ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷ ಸ್ಥಾನ ವಹಿಸಿದರುವ ಸಂಸ್ಥೆಯ ಅಧ್ಯಕ್ಷರಾದ ಪ್ರೊ॥ ಎಸ್.ಬಿ. ಸಜ್ಜನಶೆಟ್ಟಿ ಅವರು ಮಾತನಾಡುತ್ತ ಇಂದಿನ ದಿನಮಾನಗಳಲ್ಲಿ ಕ್ಯಾನ್ಸರ ರೋಗವು ಹೆಚ್ಚಾಗುತ್ತಿದೆ. ಹಾಗಾಗಿ ಸ್ತ್ರೀಯರು ಇಂತಹ ಲಸಿಕೆಗಳನ್ನು ತೆಗೆದುಕೊಳ್ಳುವುದು ಅತ್ಯಾವಶ್ಯಕವಾಗಿದೆ. ಈ ಲಸಿಕೆಯನ್ನು ವಯೋಮಾನಕ್ಕೆ ತಕ್ಕಂತೆ ಎರಡರಿಂದ ಮೂರು ಸಲ ನೀಡಲಾಗುತ್ತದೆ. ಹಾಗಾಗಿ ವೈದ್ಯರು ನೀಡುವ ದಿನಾಂಕದಂದು ತಪ್ಪದೇ ಲಸಿಕೆಯನ್ನು ತೆಗೆದುಕೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಬ್ರಿಮ್ಸ್ ವೈದ್ಯರಾದ ಡಾ॥ ಶಿವಶಂಕರ ಅವರು, ಕಲಬುರ್ಗಿಯ ವೈದ್ಯರಾದ ಡಾ॥ ಮಾರಿಯಾ ಅವರು, ಕಲಬುರ್ಗಿ ವಿಭಾಗದ ವಿಭಾಗ ಪ್ರಚಾರಕರಾದ ಶ್ರೀ ವಿಜಯ ಮಾಂತೇಶಜಿ ಅವರು, ಸಂಸ್ಥೆಯ ಕೋಶಾಧ್ಯಕ್ಷರಾದ ಶ್ರೀ ಕೃಷ್ಣಾರೆಡ್ಡಿ ಅವರು ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಶ್ರೀಮತಿ ಪಾರ್ವತಿ ಸೋನಾರೆ ಅವರು, ಜಿಲ್ಲಾ ಪ್ರಚಾ-ಕರಾದ ಕಿರಣಜಿ ಅವರು, ಶ್ರೀಮತಿ ಪ್ರತಿಭಾ ಚಾಮಾ ಅವರು, ಶ್ರೀ ವಿಜಯಕುಮಾರ ಕರಂಜಿ ಅವರು, ಶ್ರೀ ವಿಶ್ವನಾಥ ಹುಲಸೂರೆ ಅವರು ಹಾಗೂ ಬಂಡೆಪ್ಪಾ ಎಕ್ಲಾರೆ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಶ್ರೀಮತಿ ಉರ್ಮಿಳಾ ಬಕ್ಷಿ ಸ್ವಾಗತ ಕೋರಿದರೆ, ಶ್ರೀಮತಿ ಶ್ರೀದೇವಿ ಅವರು ವಂದಿಸಿದರು. ಶ್ರೀ ನಾಮದೇವ ರಾಠೋಡ ಅವರು ಕಾರ್ಯಕ್ರಮವನ್ನು ನಿರೂಪಿಸಿದರು.

148 ಹುಡುಗಿಯರು ಎಚ್.ಪಿ.ವಿ. ಲಸಿಕೆಯನ್ನು ತೆಗೆದುಕೊಂಡರು.

## ಮಾ.೨೯ ರಂದು ಹೊನ್ನಿಕೇರಿ ಪರಿಸರ ಪ್ರವಾಸೋದ್ಯಮ ಶಂಕುಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ ಬೀದರ : ಮಾ.27: ಬೀದರ ಜಿಲ್ಲೆಯ ಹೊನ್ನಿಕೇರಿ ಮೀಸಲು ಅರಣ್ಯ ಮತ್ತು ಇತರೆ ಜೀವವೈವಿದ್ಯ ಪ್ರದೇಶಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಯೋಜನೆಯಡಿ ಪರಿಸರ ಪ್ರವಾಸೋದ್ಯಮ ಮತ್ತು ಸಂರಕ್ಷಣಾತ್ಮಕ ಕಾಮಗಾರಿಗಳ ಶಂಕುಸ್ಥಾಪನೆ ಕಾರ್ಯಕ್ರಮವು ಮಾರ್ಚ.29 ರಂದು ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಶಂಕುಸ್ಥಾಪನೆ ಕಾರ್ಯಕ್ರಮ ನೇರವೇರಿಸಲಿದ್ದಾರೆ.

## ಮದ್ಯಪಾನ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮ ಕುರಿತು ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ ಬೀದರ : ಮಾ.27: ಮದ್ಯಪಾನ ಮತ್ತು ಮಾದಕ ವಸ್ತುಗಳ ಚಟುವಟಿಕೆಗಳಿಗೆ ಯುವ ಸಮೂಹ ಬಲಿಯಾಗುತ್ತಿದ್ದು, ಇದನ್ನು ನಿಯಂತ್ರಣ ಮಾಡುವ ನಿಟ್ಟಿನಲ್ಲಿ ಸರಕಾರ, ವಿವಿಧ ಇಲಾಖೆಗಳು, ಸಂಘ ಸಂಸ್ಥೆಗಳು, ಜನಪ್ರತಿನಿಧಿಗಳ ಸಹಕಾರ ಮತ್ತು ಸಂಘಟಿತ ಪ್ರಯತ್ನದಿಂದ ಮಾತ್ರ ಇರುವಗಳನ್ನು ನಿಯಂತ್ರಣಕ್ಕೆತರಲು ಸಾಧ್ಯವಾಗುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಬನಸೋಡೆ ಹೇಳಿದರು.

ಅವರು ಗುರುವಾರದಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಕರ್ನಾಟಕರಾಜ್ಯಮದ್ಯಪಾನಸಂಯಮ ಮಂಡಳಿ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಜಮಗಿ ಔರಾದಲ್ಲಿ ಹಮ್ಮಿಕೊಂಡಿದ್ದ "ಮದ್ಯಪಾನ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮ" ಕುರಿತು ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರತಿಯೊಬ್ಬರು ಜೀವನದಲ್ಲಿ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಂಡು ಮಾದಕ ವಸ್ತುಗಳು ಸೇವನೆ ಬೇಡವೆಂದು ನಿರ್ಧಾರ ಕೈಗೊಂಡು ತಮ್ಮ ಪರಿಚಯದವರಿಗೂ ಕೂಡಾ ಇವುಗಳನ್ನು ಸೇವನೆ ಮಾಡದಂತೆ ಜಾಗೃತರನ್ನಾಗಿ ಮಾಡಿ ಮಾದಕ ವಸ್ತುಗಳ ದುಷ್ಚಟಗಳಿಗೆ ಒಳಗಾಗದಂತೆ ನೋಡಿಕೊಳ್ಳಬೇಕೆಂದರು.

ಅಬಕಾರಿ ಉಪ ಆಯುಕ್ತರು ರವಿಶಂಕರ. ಎ, ಔರಾದ ತಾಲ್ಲೂಕ ಕಾನೂನು ಸೇವೆಗಳ ಸಮಿತಿಯ ಅಧ್ಯಕ್ಷರು ಹಾಗೂ ಸಿವಿಲ್ ನ್ಯಾಯಾಧೀಶರಾದ ಹಾಜಿ ಹುಸೇನಸಾಬ ಯಾದವಾಡ, ಸಿವಿಲ ನ್ಯಾಯಧೀಶರು ಜೆ.ಎಂ. ಎಫ್.ಸಿ. ಹಾಗೂ ಸದಸ್ಯ ಕಾರ್ಯದರ್ಶಿಗಳು ತಾಲೂಕ ಕಾನೂನು ಸೇವೆಗಳ ಸಮಿತಿ, ಔರಾದ ಅಭಿನಯ ಅವರುಗಳು ಮದ್ಯಪಾನದ ದುಷ್ಪರಿಣಾಮ ಬಗ್ಗೆ ಮಾತನಾಡಿದ್ದರು.ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಜಿ .ಡಿ ಶ್ರೀಮಾಳೆ ರವರು ಮದ್ಯಪಾನ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮ ಕುರಿತು ಮಾತನಾಡಿದ್ದರು.

ಇದೇ ಸಂದರ್ಭದಲ್ಲಿ ನಂದೀಶ್ವರ ನಾಟ್ಯ ಸಂಘ ಚಿಮಕೋಡ ಇವರಿಂದ ಮಾದಕ ವಸ್ತುಗಳ ದುಷ್ಪರಿಣಾಮ ಮತ್ತು ಮದ್ಯಪಾನ ಬೀದಿ ನಾಟಕ ಪ್ರದರ್ಶನವನ್ನು ಮಾಡಲಾಯಿತು.

ಈ ಕಾರ್ಯಕ್ರಮದಲ್ಲಿ ಔರಾದ ತಾಲೂಕ ವಕೀಲರ ಸಂಘದ ಅಧ್ಯಕ್ಷರಾದ ಸಂದೀಪ ಮೇತ್ರೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂದಿಯಾದ ಆಕಾಶ ಸಜ್ಜನಶೆಟ್ಟಿ, ಅಬಕಾರಿ ಇಲಾಖೆಯ ಸಿಬಂಧಿ ವರ್ಗದವರು ಹಾಗೂ ಸಂತಪೂರ ಪೊ?ಲಿಸ ಠಾಣೆಯ ಸಿಬ್ಬಂದಿ ವರ್ಗದವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ: ಏ.೩ ರೊಳಗಾಗಿ ಹೆಸರು ನೋಂದಣಿ ಮಾಡಿಕೊಳ್ಳಲು ಸೂಚನೆ

ಬೀದರ :ಮಾ.27: 2024-25ನೇ ಸಾಲಿನ ಬೀದರ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟವನ್ನು ಏಪ್ರೀಲ್. 5 ಹಾಗೂ 6 ರಂದು ಬೆಳಿಗ್ಗೆ 10 ಗಂಟೆಯಿಂದ ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿರುತ್ತದೆ ಎಂದು ಬೀದರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕ್ರೀಡಾಕೂಟದಲ್ಲಿ ಭಾಗವಹಿಸಲು ಆಸಕ್ತರಿರುವ ಖಾಯಂ (ಕೆಜಿಐಡಿ ಸಂಖ್ಯೆ ಹೊಂದಿರುವ) ಸರ್ಕಾರಿ ನೌಕರರು ಗೂಗಲ್ ಫಾರ್ಮ್ https://forms.gle/DyiTmQErnphNc3fR8 ದಲ್ಲಿ ದಿನಾಂಕ: 03-04-2025 ರೊಳಗಾಗಿ ನೋಂದಣಿ ಮಾಡಿಕೊಳ್ಳಬೇಕು. ಗೂಗಲ್ ಫಾರ್ಮರ ಮೂಲಕ ನೋಂದಣಿ ಮಾಡಿಕೊಂಡ ನೌಕರರಿಗೆ ಮಾತ್ರ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಲು ಅವಕಾಸ ನೀಡಲಾಗುತ್ತದೆಂದು ಅವರು ತಿಳಿಸಿದ್ದಾರೆ.

## ಸಂತ ಶರಣರ ಜಯಂತಿಗಳನ್ನು ಅಚ್ಚು ಕಟ್ಟಾಗಿ ಆಚರಿಸಿ : ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮಾ.27:ಏಪ್ರಿಲ್ 2 ರಂದು ದೇವರ ದಾಸಿಮಯ್ಯ ಜಯಂತಿ ಹಾಗೂ ಏಪ್ರಿಲ್ 10 ರಂದು ಭಗವಾನ್ ಮಹಾವೀರ ಜಯಂತಿ ಆಚರಿಸಲಾಗುತ್ತಿದ್ದು ಈ ಸಂತ, ಶರಣರ ಜಯಂತಿಗಳನ್ನು ಅಚ್ಚುಕಟ್ಟಾಗಿ ಆಚರಣೆ ಮಾಡಬೇಕೆಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಛೇರಿ ವಿ.ಸಿ ಹಾಲ್‌ನಲ್ಲಿ ಕರೆದ ದೇವರ ದಾಸಿಮಯ್ಯ ಹಾಗೂ ಭಗವಾನ್ ಮಹಾವೀರ ಜಯಂತಿಗಳ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಏಪ್ರಿಲ್ 2 ರಂದು ಬೆಳಿಗ್ಗೆ 10:30 ಗಂಟೆಗೆ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಶ್ರೀ ದೇವರ ದಾಸಿಮಯ್ಯನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಗುವುದು ಈ ಸಂದರ್ಭದಲ್ಲಿ ಜಿಲ್ಲಾಡಳಿತ ಭವನದ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿರಬೇಕು. ದೇವರ ದಾಸಿಮಯ್ಯನವರ ಕುರಿತು ಸಮಾಜದ ಮುಖಂಡರು ಮಾತನಾಡಬಹುದಾಗಿದೆ ಎಂದು ಹೇಳಿದರು.

ಶ್ರೀ ಭಗವಾನ್ ಮಹಾವೀರ ಜಯಂತಿ ಕಾರ್ಯಕ್ರಮ ಏಪ್ರಿಲ್ 10 ರಂದು ಕೊಪ್ಪಳ ನಗರದ ಜೈನ ಮಂದಿರದಲ್ಲಿ ಅಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಬೆಳಿಗ್ಗೆ 8:30 ಗಂಟೆಗೆ ಕೊಪ್ಪಳ ನಗರದ ಅಶೋಕ ವೃತ್ತದಿಂದ ಜವಾಹರ ರಸ್ತೆ. ಗಡಿಯಾರ ವೃತ್ತದ ಮಾರ್ಗವಾಗಿ ಜೈನ ಮಂದಿರದವರೆಗೆ ಭಗವಾನ್ ಮಹಾವೀರರ ಭಾವಚಿತ್ರದ ಮರವಣಿಗೆ ನಡೆಯಲಿದ್ದು ಇದರಲ್ಲಿ ಹೆಚ್ಚಿನ ಜನರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಈ ಕಾರ್ಯಕ್ರಮದಲ್ಲಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ವಹಿಸಿದ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಜಯಂತಿಗಳ ಆಚರಣೆ ಮಾಡುವ ಉದ್ದೇಶ ಆ ಮಹಾನ್ ವ್ಯಕ್ತಿಗಳ ತತ್ವ ಮತ್ತು ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕಿದೆ ಎಂದು ಹೇಳಿದರು.

ಈ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕೊಟ್ರೇಶ ಮರಬನಳ್ಳಿ, ಪ್ರವಾಸೋಧ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ಡಿ.ನಾಗರಾಜ್, ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಪುಷ್ಪಲತಾ, ಕೊಪ್ಪಳ ಜಿಲ್ಲಾ ದೇವಾಂಗ ಸಮಾಜದ ಅಧ್ಯಕ್ಷರಾದ ಶಿವಶಂಕರ್ ಚನ್ನಿ, ಜಿಲ್ಲಾ ಉಪಾಧ್ಯಕ್ಷರಾದ ನಾರಾಯಣಪ್ಪ ಕೊಳ್ಳಿ, ದೇವಾಂಗ ಸಮಾಜದ ಮುಖಂಡರಾದ ಪ್ರಹ್ಲಾದ್ ಗೌಡ ಮೇದಿಕೇರಿ, ಚಂದ್ರಕಾಂತ್ ಬೆಟಗೇರಿ, ಮತ್ತು ಕೊಪ್ಪಳ ದಿಗಂಬರ ಜೈನ್ ಸಮಾಜದ ಜಿಲ್ಲಾಧ್ಯಕ್ಷರಾದ ಪದ್ಮಗೌಡ ಹೀರೆಗೌಡ, ದಿಗಂಬರ ಜೈನ್ ಸಮಾಜದ ಮುಖಂಡರಾದ ಭರತೇಶ ಪಾಟೀಲ್, ಸೋಮನಾಥ ಪಾಟೀಲ್, ಶಂಕರ್ ಗೌಡ್ ಪಾಟೀಲ್, ಅಭಿನಂದನ ಜೈನ್, ಹನುಮಾನ್ ಜೈನ್, ಹಿತೇಶ ಜೈನ್ ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

## ರಂಗಭೂಮಿಯ ಮಹತ್ವ ಸಾರಿದ ಬಿ.ಆರ್. ಪಾಟೀಲ




ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಮಾ.27:ರಂಗಭೂಮಿಯು ಸಾಮಾಜಿಕ ಮೌಲ್ಯಗಳನ್ನು ಕಟ್ಟಿಕೊಡುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಕಲಾವಿದರನ್ನು ಸನಿಹದಿಂದ ನೋಡಿ ಕಣ್ತುಂಬಿಕೊಳ್ಳುವ ಅದ್ಭುತ ಅವಕಾಶ ರಂಗಭೂಮಿ ಒದಗಿಸುತ್ತದೆ. ಬಹುಪಾಲು ಹಿಂದಿನ ಚಿತ್ರತಾ-ರೆಯರು ರಂಗಭೂಮಿಯಿಂದಲೇ ಬೆಳೆದವರಾಗಿದ್ದಾರೆ ಎಂದು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ ಹೇಳಿದ್ದಾರೆ.

ನಗರದ ಪತ್ರಕರ್ತರ ಸಂಸ್ಕೃತಿಕ ಭವನದಲ್ಲಿ ನಡೆದ ವಿಶ್ವರಂಗಭೂಮಿ ದಿನಾಚರಣೆಯನ್ನು ಕರ್ನಾಟಕ ನಾಟಕ ಅಕಾಡೆಮಿ ಹಾಗೂ ಪಾಳಾದ ಶ್ರೀ ಸುಭಾಶ್ಚಂದ್ರ ಪಾಟೀಲ್ ಸ್ಮಾರಕ ಜನ ಕಲ್ಯಾಣ ಟ್ರಸ್ಟ್ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಈ ಮಾತನಾಡಿದರು. ಇದೇ ಸಂದರ್ಭದಲ್ಲಿ ರಂಗಭೂಮಿ ಸಾಧಕರಿಗೆ ವಿಶ್ವ ರಂಗ ಗೌರವ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಡಾ. ಕೆ. ಗಿರಿಮಲ್ಲ ಅವರು ರಂಗಭೂಮಿಯ ಇತಿಹಾಸ ಹಾಗೂ ಅದರ ಪ್ರಭಾವವನ್ನು ಸ್ವಾರಸ್ಯಕರವಾಗಿ ಉಪನ್ಯಾಸ ನೀಡಿದರು.

ಕೊನೆಯ ಅಂಕ ನಾಟಕವನ್ನು ಅಭಿಷೇಕ್ ಎಸ್. ಕೆ ಅವರು ಏಕವ್ಯಕ್ತಿ ಅವರು ಉತ್ತಮ ಅಭಿನಯ ಪ್ರದರ್ಶನ ನೀಡಿದರು. ನಂತರ ಕಲಾವಿದರು ರಂಗಗೀತೆಗಳನ್ನು ಹಾಡಿದರು.

ಕರ್ನಾಟಕ ನಾಟಕ ಅಕಾಡೆಮಿಯ ಮಾಜಿ ಅಧ್ಯಕ್ಷರಾದ ಬಿ.ಎಲ್.ಶೇಖ್, ಹಿರಿಯ ಪತ್ರಾಗಾರ ಇಲಾಖೆಯ ನಿರ್ದೇಶಕರಾದ ಡಾ.ವೀರಶೆಟ್ಟಿಗಾರಂಪಳ್ಳಿ, ರಂಗಕರ್ಮಿ ಶಾಂತಾ ಭೀಮಸೇನ್ ರಾವ್, ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಸಿದ್ದಲಿಂಗಯ್ಯ ಸ್ವಾಮಿ ಮಲಕೂಡ, ರಂಗ ನಿರ್ದೇಶಕ ಡಾ. ವಿಶ್ವರಾಜ ಪಾಟೀಲ್, ರಂಗ ಸಂಘಟಕ ಡಾ.ಕೆ ಲಿಂಗಪ್ಪ ಇವರು ಕಾರ್ಯಕ್ರಮದಲ್ಲಿಮುಖ್ಯಅತಿಥಿಗಳಾಗಿ ಭಾಗವಹಿಸಿದ್ದರು.

ಶ್ರೀ ಸುಭಾಶ್ಚಂದ್ರ ಪಾಟೀಲ ಸ್ಮಾರಕ ಜನಕಲ್ಯಾಣ ಟ್ರಸ್ಟ್,ಅಧ್ಯಕ್ಷರಾದ ಶರಣಗೌಡ ಪಾಟೀಲ ಪಾಳಾ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು.ಕಾರ್ಯಕ್ರಮದಲ್ಲಿ,ಅಮರ ಪ್ರಿಯ ಹಿರೇಮಠ , ಅಶೋಕ್ ತೋಟ್ನಳ್ಳಿ, ಮಲ್ಲಣರಾಕ, ಲವಕುಶ ತೇಕೂರ, ರಂಗಕರ್ಮಿ ಪ್ರಮೀಳಾ ಪಾಟೀಲ,ನಾನಾಗೌಡ, ಪರಮೇಶ್ವರ ದಂಡಿನ,ಸಂಗಮೇಶಪಾಳಾ,ಡಾ.ಶ್ರೀಶೈಲ ಬಿರಾದಾರ,ಜಗದೇವಪ್ಪ ಹತ್ತರಕಿ, ಸಿದ್ದಪ್ಪಾ ತಳ್ಳೊಳ್ಳಿ , ನಾಗರಾಜ ಗಂದಿಗುಡಿ, ಇದ್ದರು ರಂಗ ನಿರ್ದೇಶಕರಾದ ಸಿದ್ರಾಮ ರಾಜಮಾನೆ ಅವರು ಪ್ರಸ್ತಾವಿಕವಾಗಿ ಮಾತನಾಡಿದರು, ಅಂಬಾರಾಯ ಕೋಣೆ ಸ್ವಾಗತಿಸಿದರು,ಜಲೀಲ್ ಪಟೇಲ್ ಅವರುನಿರೂಪಿಸಿದರು.ಬಸವಂತರಾಯ ಕೋಳಕೂರ ವಂದಿಸಿದರು.

ಜನ ಕಲಾವಿದರಿಗೆ ರಂಗಗೌರವ ಪುರಸ್ಕಾರಗಳನ್ನು ನೀಡಿ ಗೌರವಿಸಿದರು

1. ಶ್ರೀ ಶಿವಯ್ಯ ಸ್ವಾಮಿ ಬಿಬ್ಬಳ್ಳಿ ಸೇಡಂ.2.ಶ್ರೀಮಲ್ಲಿನಾಥ ಆಲೇಗಾಂವ ಮಾಶಾಳ ಅಫಜಲಪುರ.
3. ಚಂದ್ರಶೇಖರ ಲಗಶೆಟ್ಟಿ, ಚಿಂಚೋಳಿ.
4. ಬಿ.ಎಸ್ ಪ್ಯಾಟಿಮಠ ಕಾಳಗಿ
5. ರಾಮಕೃಷ್ಣ ಮನೋಹರ ಕರದಳ್ಳಿ ಚಿತ್ತಾಪೂರ
6. ಶರಣಪ್ಪರಾಮಯ್ಯನರಬೋಳಿ,. ಜೇವರ್ಗಿ
7. ?ಬಸವರಾಜ್ ಗುರುಶಾಂತಪ್ಪ ಪೊಲೀಸ್ ಪಾಟೀಲ್ ನಂದೂರ್ (ಬಿ)
8. ?ಶಾಂತಗೌಡ ಶಿವಶಂಕರ ಗೌಡ ಹಂಚಿನಾಳ ' (ನಿವೃತ್ತ ಶಿಕ್ಷಕರು)
9. ? ಚಾಂದ್ ಪಾಷಾ ಇಮಾಮ್ ಸಾಬ್ ಮುಲ್ಲಾ ಶಿವಪುರ, ಯಡ್ರಾಮಿ
10. ? ರೇವಣರಾಜ್ ಎಸ್ ಮಾಲಿ ಪಾಟೀಲ್ ನಂದೂರ (ಕೆ )
11. ?ಶರಣಬಸಪ್ಪ ಎಸ್ ಮಡಿವಾಳ ನಿಂಬರ್ಗಿ
12. ಶರಣಮ್ಮ ಶಾಮರಾಯ ಭಜಂತ್ರಿ ಕಾಳಗಿ ಅನೇಕ ಗಣ್ಯರು, ಕಲಾವಿದರು, ಮತ್ತು ಕಲಾಸಕ್ತರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ರಸ್ತೆ ಮೇಲೆ ಚರಂಡಿ ನೀರು, ಸಂಚಾರಕ್ಕೆ ಸಂಕಟ

ಮಲ್ಲಮ್ಮ ನುಡಿ ವಾರ್ತೆ
(ಪರಮೇಶ ರಾಂಪುರೆ)
ಕಮಲನಗರ:

ಕಮಲನಗರ ಗ್ರಾಮ ಪಂಚಾಯತ ಅಡಿಯಲ್ಲಿ ಬರುವ ವಾರ್ಡ ನಂ:–01 ರ ಚನ್ನಬಸವ ಕಾಲೋನಿಯಲ್ಲಿ ರಸ್ತೆ ಮೇಲೆ ಚರಂಡಿ ನೀರು, ಸಂಚಾರಕ್ಕೆ ಸಂಕಟವಾಗುತ್ತಿದು ಬಗ್ಗೆ ಗ್ರಾಮ ಪಂಚಾಯತ ಅಧಿಕಾರಿಗಳಿಗೆ ಮನವಿ ಪತ್ರ ಮೂಲಕ ಸೂಕ್ತ ಚರಂಡಿ ಮಾಡಿಸುವ ಕೂರಿತು ಕಾಲೋನಿ ನಿವಾಸಿಗಳು ಮನವಿ ಸಲ್ಲಿಸಿದ್ದಾರೆ.

ಪಟ್ಟಣದ ವಾರ್ಡ ನಂ:–01 ರಲ್ಲಿ ಚನ್ನಬಸವ ಕಾಲೋನಿಯಲ್ಲಿ ಚರಂಡಿ ಇಲ್ಲದೆ ಪರದಾಡುವಂತಾಗಿದೆ. ಹಾಗು ಪ್ರತಿನಿತ್ಯ ಎಲ್ಲರ ಮನೆಯ ಬಚ್ಚಲಿನ ನೀರು ಸಹ ರಸ್ತೆ ಮೇಲೆ ಹಾದು ಹೋಗುತ್ತಿವೆ. ನಡೆಯಲು ಓಡಾಡಲು ತೊಂದರೆ ಆಗುತ್ತಿದೆ. ಅಲ್ಲದೆ ಈ ನೀರು ಒಂದು ಕಡೆ ನಿಂತು ರೋಗ ರುಜಿನಗಳಿಗೆ ದಾರಿ ಮಾಡಿಕೊಡುತ್ತಿದೆ ಎಂದು ಕಲೋನಿಯ ನಿವಾಸಿಗಳು ದೂರಿದರು.

ಒಂದು ಯೋಜನೆ ಮಾಡುವುದೆ ಅಷ್ಟೇ ಅಭಿವೃದ್ಧಿಯಲ್ಲ ಅದರ ಮಾರಕ ಪೂರಕ ಬಗ್ಗೆ ಪೂರ್ವ ಯೋಜನೆ ಮಾಡಿ ಕೆಲಸ ಮಾಡಿದ್ದಾರೆ ಈ ರೀತಿ



ಸಮಸ್ಯೆಗಳು ಉದ್ಭವಿಸುವುದಿಲ್ಲ, ತಾಲೂಕಿನಲ್ಲಿ ವಿವಿಧ ಹಳ್ಳಿಗಳ್ಲಿ ಕೂಡ ಜೆ.ಜೆ.ಎಮ್. ಎಂಬ ಕಾಮಗಾರಿ ಹೆಸರಿನಡಿ ಹೊಸದಾಗಿ ನಿರ್ಮಿಸಿದ ಸುಂದರವಾದ ರಸ್ತೆಗಳ್ನು ಅಗೆದು ಪೈಪಲೈನ್ ಮಾಡಲಾಗಿದೆ. ಭವಿಷ್ಯದಲ್ಲಿ ಮನೆ ಮನೆಗೆ ನೀರು ಬರುತ್ತೆ ಎಂದು ಏನು ಸಮಾಧಾನ ಮಾಡಿ ಕೊಂಡ ಜನ, ಇವಾಗ ಹಲವು ಕಡೆ ಒಂದು ಹನಿ ನೀರು ಬರುತ್ತಿಲ್ಲ, ಮತ್ತು ಅಗೇದ ರಸ್ತೆ ಹಾಗೆ ಇಟ್ಟು ಚರಂಡಿಗೆ ನೀರು ನಿಲ್ಲುವಂತೆ ಆಗಿದೆ.

> "ತಾಲುಕಾ ಪಂಚಾಯತ ಅನುದಾನದಲ್ಲಿ 2024–25 ರ ಅನುದಾನದಲ್ಲಿ ಕಾಲೊನಿಗೆ ಹೋಗುವ ದಾರಿಯಲ್ಲಿ ಹೊಸದಾಗಿ ರಸ್ತೆ ಮಾಡಿದ್ದಾರೆ. ಆದರೆ ಅವರು ರಸ್ತೆಗೆ ಚರಂಡಿ ವ್ಯವಸ್ತೆ ಮಾಡಿರುವುದಿಲ್ಲಾ. ಹೀಗೆ ಅರ್ಧ ಕೆಲಸ ಮಾಡಿ ನಮ್ಮ ಸಮಸ್ಯೆಯನ್ನು ಹೆಚ್ಚು ಮಾಡಿದ್ದಾರೆ.ಪ್ರತಿ ದಿನ ಗಬ್ಬು ನಾರುತ್ತಿರುವ ಕೊಳಕು ನೀರಿನ ಮೇಲಿಂದ ಹೋಗುವ ಅನಿವರ್ಯಾ ತಂದೊಡ್ಡಿದ್ದಾರೆ.
>
> **–ರಾಮೇಶ್ವರ ವಿನಾಯಕ,**
> **ಕಾಲೋನಿ ನಿವಾಸಿ.**

ಇಂತಹ ಅಪೂರ್ವ ಯೋಜನೆಗಳಿಂದ ಜನರ ಸಮಸ್ಯೆ ಹೆಚ್ಚಾಗುತ್ತಿದೆ. ವಾರಕೊಮ್ಮೆ ಅಧಿಕಾರಿಗೊಳಂದಿಗೆ ಸಭೆ ಮಾಡುವ ತಾಲೂಕ ಅಧಿಕಾರಿಗಳು ಇಂತಹ ಸಮಸ್ಯೆ ಬಗ್ಗೆ ಚರ್ಚೆ ಮಾಡಿ ಸೂಕ್ತ ಕ್ರಮ ಕೈಗೊಂಡು ಜನ ಸಾಮಾನ್ಯರ ಕಷ್ಟಗಳಿಗೆ ಸ್ಪಂದನೆ ನೀಡಿದರೆ ಜನರಿಗೆ ಅನುಕೂಲವಾಗುತ್ತದೆ.

ವಾರ್ಡ:– 01 ಕಾಲೋನಿ ಸಮಸ್ಯೆಗೆ ತಾವುಗಳು ಆದಷ್ಟು ಬೇಗ ಕಾಲೋನಿಯ ಮುಖ್ಯ ರಸ್ತೆಗೆ ಚರಂಡಿ ನೀರು ಹೋಗುವಂತೆ ನಾಲಾ ಮಾಡಿ, ಕಾಲೋನಿಯ ಉಪರಸ್ತೆಯಿಂದ ಬರುವ ನೀರು ಹೋಗುವಂತೆ ಪರಿಹಾರ ನೀಡಿ ನಮಗೆ ಆಗುತ್ತಿರುವ ತೊಂದರೆ ನಿವಾರಿಸಬೇಕಾಗಿ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ರಾಮೇಶ್ವರ ವಿನಾಯಕ, ಬಸವರಾಜ ಸಾವಳೆ, ಸಂತೋಷ ಪಾಟೀಲ,

ಶಿವಕುಮಾರ ಹಣಮಶೇಟ್ಟಿ, ಸಿದ್ಧರಾಮೇಶ್ವರ ನವಾಡೆ, ಸದಾನಂದ ಜಾಧವ, ರಾಹುಲ, ಮಹೇಶ ಖೇಡ, ಶಿವಾನಂದ ಬೆಲ್ಲೆ, ವೈಜಿನಾಥ ಚಿಮ್ಮ, ಭೀಮರಾವ ಬಚ್ಚಣ್ಣ, ಉಮಾಕಾಂತ ಹೂಗಾರ, ಶಿವಕುಮಾರ ಡೋಂಗ್ರೆ, ರಾಜಕುಮಾರ ನಾಗಶೆಟ್ಟಿ, ಪ್ರಕಾಶ, ರಾಮಚಂದ್ರರೆಡ್ಡಿ, ಮಾಣಿಕ ಗುರಪ್ಪ ಸೇರಿದಂತೆ ಕಾಲೋನಿ ನಿವಾಸಿಗಳು ಇದ್ದರು.

# ಹೈನುಗಾರಿಕೆಯಿಂದ ಆರ್ಥಿಕ ಸ್ಥಿತಿಯನ್ನು ಉತ್ತಮವಾಗಿಸುತ್ತದೆ: ಡಾ.ನರಸಪ್ಪ ದೇವಗೊಂಡ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ತನಕರುಗಳಿಂದ ಅನೇಕ ಲಾಭದಾಯಕಗಳಿಕೆ ರೈತರು ಪಡೆದುಕೊಳ್ಳಬಹುದು, ಹೈನುಗಾರಿಕೆಯಿಂದ ಆರ್ಥಿಕ ಸ್ಥಿತಿಯನ್ನು ಉತ್ತಮವಾಗಿಸುತ್ತದೆ,

ಜಾನುವಾರು ನಮ್ಮ ಸಂಪತ್ತು, ದೇಶದ ಸಂಪತ್ತು ಎಂದು ಬೀದರ ಜಿಲ್ಲಾ ಪಶು ವೈದ್ಯಕೀಯ ಸೇವಾ ಇಲಾಖೆ ಜಿಲ್ಲಾ ಉಪನಿರ್ದೇಶಕರು ಡಾ ನರಸಪ್ಪ ದೇವಗೊಂಡ ಹೇಳಿದರು.

ತಾಲೂಕಿನ ಹೊಳಸಮುದ್ರ ಗ್ರಾಮದಲ್ಲಿ ಮಹಾದೇವ ಮಂದಿರದ ಆವರಣದಲ್ಲಿ ಜಿಲ್ಲಾ ಪಂಚಾಯತ್ ಬೀದರ್ ಪಶು ಪಾಲನಾ ಪಶುವೈದ್ಯಕೀಯ ಸೇವಾ ಇಲಾಖೆ ಬೀದರ್ ಹಾಗೂ ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘ ನಿಯಮಿತ ಹೊಳೆಸಮುದ್ರ ಸಂಯುಕ್ತಾಶ್ರಯದಲ್ಲಿ 2024–2025ನೇ ಸಾಲಿನ ವಿಸ್ತರಣಾ ಚಟುವಟಿಕೆಗಳು ಬಲಪಡಿಸುವ ಕಾರ್ಯಕ್ರಮ ಹಾಗೂ ಹಾಲು ಕರೆಯುವ ಸ್ಪರ್ಧೆ ಕಾರ್ಯಕ್ರಮಕ್ಕೆ ಅವರು ಚಾಲನೆ ನೀಡಿ ಮಾತನಾಡಿದರು.

ರೈತರು ಹೈನುಗಾರಿಕೆಯಿಂದ ಆರ್ಥಿಕ ಸ್ಥಿತಿಯನ್ನು ಉತ್ತಮ ಸಾಧನೆ ಮಾಡಬಹುದು ಈ ಸಾಧನೆಗೆ ರೈತರು ಹೊಲಗದ್ದೆ ಜೊತೆಗೆ ಜಾನುವಾರಗಳನ್ನು ಸಾಕ್ಕಿ ಸಲುವಿ ಅದರಿಂದ ಅನೇಕ ಲಾಭ ಪಡೆದು ಆರ್ಥಿಕ ಬೆಳವಣಿಗೆ ಉತ್ತಮ ರೀತಿಯಿಂದ ಸಾಧನೆ ಮಾಡಬಹುದು.

ಇಂತಹ ವೇದಿಕೆ ಕಾರ್ಯಕ್ರಮಗಳು ಹಮ್ಮಿಕೊಂಡಿದ್ದು ತಮ್ಮೂರಿನ ಡಾಕ್ಟರ್ ಅಚ್ಯೂತ ಬಿರಾದಾರ್ ಅವರ ಸಹಕಾರದೊಂದಿಗೆ ಈ ಕಾರ್ಯಕ್ರಮವು ನೆರವೇರಿದು ಆನಂದವಾಗಿದೆ ಎಂದು ಹೇಳಿದರು.

ಹೆಚ್ಚಿನ ಸಂಖ್ಯೆಯಲ್ಲಿ ರೈತರು ಪ್ರತಿಯೊಬ್ಬರ ಮನೆಯಲ್ಲಿ ದನಕರುಗಳ ಸಾಕಣೆ ಮಾಡುವಂತೆ ತಾವುಗಳು ಮುಂದೆ ಬರಬೇಕು ತಮ್ಮ ಕೆಲಸ ತಾವು ಮಾಡಲು ಹಿಂದೇಟು ಹಾಕಬೇಡಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗೋಪಾಲರಾವ್ ಪಾಟೀಲ್, ಅಂಕೋಶ ಗಾಯಕವಾಡ, ರಾಹುಲ್ ಪಾಟೀಲ, ಪಾಂಡುರಂಗ ಪಾಟೀಲ್, ಪ್ರದೀಪ್ ಪಾಟೀಲ್, ಮಧನ ಜಾಧವ, ಸುಧಾಕಾರ ಮುಗಳೆ, ಮಾರುತಿ ಆಳಂದೆ, ಶ್ರೀಕಾಂತ್ ಬೀರಾದಾರ , ನಾಗೇಶ್ ಗುರು, ಸಂಜು ಕುಮಾರ್ ಪಾಟೀಲ್, ಹಾಗೂ ಅಧಿಕಾರಗಳಾದ ಸುರೇಶ ದಿನಕರ, ಸಂಗಮೇಶ್ , ಸಿದ್ದಾರ್ಥ್ ಜಡೇಶ ಭಜಂತ್ರಿ , ಶ್ರೀನಿವಾಸ್ ಸಂತೋಷ ಸಿದ್ರಾಮ ಪ್ರದೀಪ್ ಉಪಸ್ಥಿತರಿದ್ದರು.

ಕಾರ್ಯಕ್ರಮ ಡಾ. ನೀಲಕಂಠ ಚನ್ನಶೆಟ್ಟಿ ನಿರೂಪಣೆ ಮಾಡಿದರು, ಡಾ. ಅಚ್ಯುತ ಬೀರಾದಾರ ವಂದನಾರ್ಪಣೆ ಮಾಡಿದರು.

**ಸ್ಪರ್ಧೆಯಲ್ಲಿ ವಿಜೇತರಿಗೆ ವಿಶೇಷ ಬಹುಮಾನ:**

ಹಾಲು ಕರೆಯುವ ಸ್ಪರ್ಧೆಗಳಲ್ಲಿ ಪ್ರಥಮ ದ್ವಿತೀಯ ತೃತೀಯ ಬಹುಮಾನಗಳನ್ನು ನೀಡುವುದರೊಂದಿಗೆ ಇನ್ನುಳಿದ ರೈತರಿಗೆ ಖನಿಜ ಮಿಶ್ರಣ ಔಷಧಿಗಳನ್ನು ವಿತರಿಸಲಾಯಿತು. ಸುಧಾಕಾರ ಮುಗಳೆ ಮಹಾದೇವ ವಾಡಿ ಕೆ ಎಂ ಎಫ್ ಇವರ ವತಿಯಿಂದ ನಗದು ಬಹುಮಾನ ಕೊಡಲಾಗಿತ್ತು.

1.ಪ್ರಥಮ ಬಹುಮಾನ ಹರಿದೇವ್ ಸಿಂದೆ
2.ಎರಡನೇ ಬಹುಮಾನ ಸುಷ್ಮಾ ರಾಜಕುಮಾರ ಪಾಡೊದೆ.
3.ಮೂರನೇ ಬಹುಮಾನ ದಯಾನಂದ್ ಪ್ರಕಾಶ್ ಕದಂ.

ವಿಜೇತರಿಗೆ ಸನ್ಮಾನ ಮಾಡಿ ಬಹುಮಾನ ವಿತರಣೆ ಮಾಡಲಾಯಿತು.

# ಮಾದಕ ದ್ರವ್ಯ ದುಷ್ಪಪರಿಣಾಮಗಳ ಕುರಿತು ಯುವ ಸಮೂಹಕ್ಕೆ ಅರಿವು ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮಾ.27– ಮಾದಕ ದ್ರವ್ಯ ಮುಕ್ತ ಜಿಲ್ಲೆಯನ್ನಾಗಿಸಲು ಸುಲಭವಾಗಿ ನಶೆಗೆ ಮಾರು ಹೋಗುವ ವಿದ್ಯಾರ್ಥಿ ಸಮೂಹದಲ್ಲಿ ಅರಿವು ಮೂಡಿಸುವ ಅಗತ್ಯವಿದ್ದು, ಮುಂಬರುವ ಜೂನ್ ತಿಂಗಳಲ್ಲಿ ಪ್ರೌಢ ಶಾಲೆ, ಪಿ.ಯು. ಕಾಲೇಜು, ಪದವಿ ಕಾಲೇಜು, ಇಂಜಿನಿಯರಿಂಗ್ ಮತ್ತು ಮೆಡಿಕಲ್ ಕಾಲೇಜುಗಳಲ್ಲಿ ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಕುರಿತು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಬುಧವಾರ ಸಂಜೆ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಾದಕ ದ್ರವ್ಯ ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದ ಮಾದಕ ದ್ರವ್ಯ ಸಮನ್ವಯ ಸಮಿತಿಯ (ಓಅಔಖಅ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಾದಕ ದ್ರವ್ಯ ಮುಕ್ತ ಜಿಲ್ಲೆಯನ್ನಾಗಿಸಲು ಅಬಕಾರಿ, ಆರೋಗ್ಯ, ಪೊಲೀಸ್ ಸೇರಿದಂತೆ ಸಂಬಂಧಿತ ಇಲಾಖೆಗಳ ಸಂಯೋಗದಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು, ಸಮಾಜಿಕ ಜಾಲತಾಣದಲ್ಲಿ ವ್ಯಾಪಕ ಪ್ರಚಾರ ಕಾರ್ಯ ಕೈಗೊಳ್ಳಬೇಕು ಎಂದರು.

ಕಳೆದ ಓಅಔಖಅ ಸಭೆಯಲ್ಲಿ ಮಾದಕ ವಸ್ತುಗಳ ಸೇವನೆ ದುಷ್ಪಾರಿಣಾಮಗಳ ಬಗ್ಗೆ ಎಲ್ಲಾ ತಾಲೂಕುಗಳಲ್ಲಿ ಅರಿವು ಮೂಡಿಸುವ ಕಿಟ್ ಲಭ್ಯವಿರುವಂತೆ ನಿರ್ದೇಶಿಸಲಾಗಿತ್ತು, ಪ್ರಸ್ತುತ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಕಿಟ್ ಗಳು ಲಭ್ಯವಿರುವ ಬಗ್ಗೆ ಕ್ರಮಕೈಗೊಳ್ಳಲು ತಿಳಿಸಿದರು.

ಅಬಕಾರಿ ಇಲಾಖೆಯಲ್ಲಿ ಮಾದಕ ವಸ್ತುಗಳ ಮಾರಾಟ ನಿಯಂತ್ರಣ ಕುರಿತು ವಿಶೇಷ ಜಾಗೃತಿ ದಳವನ್ನು ಸ್ಥಾಪನೆ ಮಾಡಿ ಹೆಚ್ಚೆಚ್ಚು ಪ್ರಕರಣಗಳನ್ನು ದಾಖಲಿಸಬೇಕು. ಅರಣ್ಯ ಇಲಾಖೆಯ ವ್ಯಾಪ್ತಿಯಲ್ಲಿ ಮಾದಕ ವಸ್ತುಗಳ ಅಕ್ರಮ ಸಾಗಾಟ ಮಾಡುವವರ ಬಗ್ಗೆ ಮಾಹಿತಿ ಕಲೆಹಾಕಿ ಅಂತವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಡಿ.ಸಿ ಅವರು ತಿಳಿಸಿದರು.

ಸಭೆಯಲ್ಲಿ ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಡಿ.ಸಿ.ಪಿ ಕನಿಕಾ ಸಿಕ್ರಿವಾಲ್ ಡಿ.ಸಿ.ಎಫ್ ಸುಮಿತ್ ಪಾಟೀಲ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳಿದ್ದರು.

# ಬೀದಿನಾಯಿಗಳ ಹಾವಳಿ ತಡೆ ಯಾವಾಗ ?



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ನಗರದ ರಸ್ತೆಗಳಲ್ಲಿ ಬೀದಿನಾಯಿಗಳ ಹಾವಳಿ ವಿಪರೀತವಾಗಿದು ಸಂಬಂಧ ಪಟ್ಟ ಅಧಿಕಾರಿಗಳು ಇತ್ತ ಕಡೆ ಗಮನ ಹರಿಸಿದೇ ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂದು ಸಾರ್ವಜನಿಕರು ಅಕ್ರೋಶ ವ್ಯಕ್ತಪಡಿಸಿದ್ದಾರೆ. ಅದೇರೀತಿ ವಿವಿಧ ಮುಖ್ಯ ರಸ್ತೆಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದೆ. ಬೀದಿ ನಾಯಿಗಳ ಭಯದಿಂದ ಮಹಿಳೆಯರು ಮಕ್ಕಳು ವೃದ್ಧರು ಹೆದರಿಕೂಂಡು ತಿರುಗಾಡಲು ಹಿಂಜರಿಕೆಯಾಗುತ್ತಿದೆ ಎಂದರು. ಸಂಬಂಧಪಟ್ಟ ಅಧಿಕಾರಿಗಳ ಇತ್ತಕಡೆ ಗಮನ ಹರಿಸಿ ಆದಷ್ಟು ಬೇಗ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ದೂರಿದ್ದಾರೆ.

# ಪಾಡುಪಲ್ಲಿ ರಸ್ತೆ ನಿರ್ಮಾಣ ಕಾಮಗಾರಿಗೆ ಶರಣಗೌಡ ಕಂದಕೂರ್ ಶೀಲಾನ್ಯಾಸ



ಮಲ್ಲಮ್ಮ ನುಡಿ ವಾರ್ತೆ

ಗುರುಮಿಠಕಲ್. ಮಾ. 27. ತಾಲೂಕಿನಲ್ಲಿ 2024–25ನೇ ಸಾಲಿನ ಕಲ್ಯಾಣ ಪಥ ಯೋಜನೆಯಡಿ ಅಂದಾಜು ಮೊತ್ತ 395.70 ಲಕ್ಷಗಳಲ್ಲಿ ಸುಮಾರು 4.68 ಕಿ.ಮಿ ರಸ್ತೆಯ ಕಾಮಗಾರಿ ಅಡಿಗಲ್ಲು ಸಮಾರಂಭ, ಗುರುಮಠಕಲ್ ಮತಕ್ಷೇತ್ರದ ಎಸ್.ಎಚ್.22 ರಾಜ್ಯ ಹೆದ್ದಾರಿ ನಾರಾಯಣ ಪೇಟ್ ಮುಖ್ಯ ರಸ್ತೆ ಯಿಂದ ಕೊಂಕಲ್ ಗ್ರಾಮದ ವರೆಗೆ ವಾಯಾ ಪಾಡಪಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಯ ಅಡಿಗಲ್ಲು ಸಮಾರಂಭವನ್ನು ಗುರುಮಠಕಲ್ ಮತಕ್ಷೇತ್ರದ ಶಾಸಕರಾದ ಶರಣಗೌಡ ಕಂದಕೂರ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಷ್ ಚಂದ್ರ ಕಟಕಟಿ, ಹಿರಿಯ ಮುಖಂಡರಾದ ಲಕ್ಷ್ಮರೆಡ್ಡಿ ಅನಪೂರ, ರಘುನಾಥ್ ರೆಡ್ಡಿ ಗವಿನೋಳ ರೆಡ್ಡಿ ದೇವರಳ್ಳಿ ಬಸಣ್ಣ ಇನ್ನಿತರ ಮುಖಂಡರು, ಕಾರ್ಯಕರ್ತರು ಹಾಗೂ ಅಧಿಕಾರಿಗಳು ಹಾಜರಿದ್ದರು.

## ಮಾನ್ವಿಯಲ್ಲಿ ಕಾನೂನು ಅರಿವು ನೆರವು ಕಾರ್ಯಕ್ರಮ

# ಶಿಕ್ಷಣ ಪಡೆಯುವುದು ಪ್ರತಿಯೊಬ್ಬ ಮಗುವಿನ ಹಕ್ಕು; ರವಿಕುಮಾರ ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.27–ಮಕ್ಕಳನ್ನು ದುಡಿಮೆಯಿಂದ ಬಿಡಿಸಿ ಪ್ರತಿನಿತ್ಯ ಕಡ್ಡಾಯವಾಗಿ ಶಾಲೆಗೆ ಕಳುಹಿಸಬೇಕು. ಶಿಕ್ಷಣ ಪಡೆಯುವುದು ಪ್ರತಿಯೊಬ್ಬ ಮಗುವಿನ ಹಕ್ಕಾಗಿದೆ ಎಂದು ಮಾನ್ವಿ ತಾಲೂಕು ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ರವಿಕುಮಾರ ಪಾಟೀಲ್ ಅವರು ಹೇಳಿದರು.

ಮಾ.26ರ ಬುಧವಾರ ಜಿಲ್ಲೆಯ ಮಾನವಿ ಪಟ್ಟಣದ ಕೋನಾಪೂರ ಪೇಟೆಯಲ್ಲಿ ತಾಲೂಕ ಕಾನೂನು ಸೇವಾ ಸಮಿತಿ, ತಾಲೂಕ ನ್ಯಾಯವಾದಿಗಳ ಸಂಘ, ತಾಲೂಕ ಆಡಳಿತ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ನಡೆದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿಉಪಯೋಜನೆ ಅಡಿಯಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕತೆ ನಿರ್ಮೂಲನೆ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಶಿಕ್ಷಣದಿಂದ ಮಾತ್ರ ಅಭಿವೃದ್ಧಿ ಸಾಧ್ಯ. ಆದ್ದರಿಂದ ಶಿಕ್ಷಣದಿಂದ ಮಕ್ಕಳು ಜ್ಞಾನ ಗಳಿಸುವಂತಾಗಲಿ; ಹಣವನ್ನಲ್ಲ ಎಂದರು.

ಈ ವೇಳೆ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ ಅವರು ಮಾತನಾಡಿ, 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. 14 ವರ್ಷ ಮೇಲ್ಪಟ್ಟು 18 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಅಪಾಯಕಾರಿ ವೃತ್ತಿ ಮತ್ತು ಪ್ರಕ್ರಿಯೆಗಳಲ್ಲಿ ನಿಷೇಧಿಸಲಾಗಿದೆ. ಒಂದು ವೇಳೆ ಅಂತಹ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡಲ್ಲಿ ತಪ್ಪಿತಸ್ಥ ಮಾಲೀಕರ ವಿರುದ್ಧ ಸಂಬಂಧ ಪಟ್ಟ ಪೊಲೀಸ್ ಠಾಣೆಯಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ–1986 ಮತ್ತು ತಿದ್ದುಪಡಿ ಕಾಯ್ದೆ–2016ರಡಿ ಪ್ರಕರಣ ದಾಖಲಿಸಲಾಗುವುದು ಎಂದರು.

ದುಡಿಯುವ ಮಕ್ಕಳು ಎಲ್ಲಿಯಾದರೂ ಕಂಡು ಬಂದಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ 1098/112ಗೆ ಕರೆ ಮಾಡಿ ಮಾಹಿತಿ ನೀಡುವ ಮೂಲಕ ರಾಯಚೂರು ಜಿಲ್ಲೆಯನ್ನು ಬಾಲಕಾರ್ಮಿಕ ಮುಕ್ತ ಜಿಲ್ಲೆ ಹಾಗೂ ಮಕ್ಕಳ ಸ್ನೇಹಿ ಜಿಲ್ಲೆಯನ್ನಾಗಿ ನಿರ್ಮಿಸಲು ಸಾರ್ವಜನಿಕರು ಕೈಜೋಡಿಸಬೇಕು ಎಂದು ತಿಳಿಸಿದರು.

ಈ ವೇಳೆ ನ್ಯಾಯವಾದಿಗಳಾದ ವಿಶ್ವನಾಥ ಪಾಟೀಲ ಅವರು ಮಾತನಾಡಿ, ಗ್ರಾಹಕರು ಪ್ರತಿಯೊಂದು ವಸ್ತುವನ್ನು ಖರೀದಿ ಮಾಡಬೇಕಾದರೆ ಕಡ್ಡಾಯ ರಶೀದಿಯನ್ನು ಪಡೆಯಬೇಕೆಂದರು. ಅಲ್ಲದೆ ಗ್ರಾಹಕರ ಹಕ್ಕುಗಳ ರಕ್ಷಣೆ ಕುರಿತು ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಮಾನವಿ ಕಾರ್ಮಿಕ ನಿರೀಕ್ಷಕರಾದ ಮಲ್ಲಪ್ಪ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮನ್ಸೂರ್ ಅಹ್ಮದ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕಾಧಿಕಾರಿ ರೂಪ ಶ್ರೀನಿವಾಸ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಹುಸೇನ್ ಬಡಿಗೇರ, ತಾಲೂಕು ನ್ಯಾಯವಾದಿಗಳ ಸಂಘದ ಪ್ರಧಾನ ಕಾರ್ಯದರ್ಶಿ ಚನ್ನಬಸವ ನಾಯಕ, ನ್ಯಾಯವಾದಿಗಳಾದ ವಿಶ್ವನಾಥ ಪಾಟೀಲ, ರವಿಕುಮಾರ, ಪುರಸಭೆ ಸದಸ್ಯ ಜಯಪ್ರಕಾಶ್, ಡಿ.ಇ.ಓ ವೀರಣ್ಣ, ಅಂಬರೇಶ, ಅಕೌಂಟೆಂಟ್ ಹುಸೇನ್ ನಾಯ್ಕ ಅವರು ಸೇರಿದಂತೆ ಇತರರು ಇದ್ದರು.

# ಸುಳ್ಳು ವದಂತಿಯ ಬಗ್ಗೆ ಸಾರ್ವಜನಿಕರು ಆತಂಕಕ್ಕೆ ಒಳಗಾಗಬಾರದು

ಮಲ್ಲಮ್ಮ ನುಡಿ ವಾರ್ತೆ

ಸೇಡಂ:ದಿನಾಂಕ:26–03–2025 ರಂದು ಮದ್ಯಾಹ್ನ 1–30 ಗಂಟೆ ಸುಮಾರಿಗೆ ಸೇಡಂ ಪಟ್ಟಣದಲ್ಲಿ ಹಾಡುಹಗಲೆ ಒಬ್ಬ ವೃದ್ದೆಯ ಮನೆ ಹೊಕ್ಕು ಡಕಾಯಿತಿ ನಡೆಸಿರುತ್ತಾರೆ ಎಂಬ ಸುಳ್ಳು ವದಂತಿಯ ಬಗ್ಗೆ ಸಾರ್ವಜನಿಕರು ಆತಂಕಕ್ಕೆ ಒಳಗಾಗಬಾರದು ಎಂದು ತಿಳಿಸಿದ ಸೇಡಂ ಠಾಣೆಯ ಪೊಲೀಸರು.

ದಿನಾಂಕ:26–03–2025 ರಂದು ಮದ್ಯಾಹ್ನ 1–30 ಗಂಟೆಯ ಸುಮಾರಿಗೆ ಸೇಡಂ ಪಟ್ಟಣದ ಸಣ್ಣ ಅಗಸಿಯಲ್ಲಿ ಹಾಡುಹಗಲಲ್ಲಿ ಯಾರೋ 4–5 ಜನ ಡಕಾಯಿತರು ಬಂದು ಒಬ್ಬ ವೃದ್ದೆಯ ಮನೆಯೊಳಗೆ ಹೋಗಿ ಮಾರಕಾಸ್ತ್ರಗಳಿಂದ ಅಂಜಿಸಿ ಅವಳಲ್ಲಿದ್ದ 5–6 ತೊಲೆ ಬಂಗಾರದ ಆಭರಣಗಳು ಮತ್ತು ನಗದು ಹಣ ವನ್ನು ಡಕಾಯಿತಿ ಮಾಡಿಕೊಂಡು ಹೋಗಿರುತ್ತಾರೆ ಎಂಬ ಸುಳ್ಳು ಸುದ್ದಿ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದು, ಸದರಿ ಘಟನೆಗೆ ಸಂಬಂಧಿಸಿದಂತೆ ಸೇಡಂ ಪೊಲೀಸ್ ಠಾಣೆಯ ಅಧಿಕಾರಿ ಮತ್ತು ಸಿಬ್ಬಂದಿಯವರು ಮತ್ತು ಮೇಲಾಧಿಕಾರಿಗಳು ಸದರಿ ವೃದ್ದೆಯ ಮನೆಗೆ ಭೇಟಿಯಾಗಿ ಪರಿಶೀಲಿಸಿ ಕೂಲಂಕುಷವಾಗಿ ವಿಚಾರಿಸಲಾಗಿ ಸದರಿ ವೃದ್ದೆಯು ತನ್ನ ಕೌಟುಂಬಿಕ ಕಾರಣಗಳಿಂದಾಗಿ ಯಾರದೋ ಮಾತು ಕೇಳಿ ನಿನ್ನೆ ರಾತ್ರಿ ಸೇಡಂ ಪಟ್ಟಣದಲ್ಲಿ ಸಂಶಯಾಸ್ಪದ ವ್ಯಕ್ತಿಗಳು ಓಡಾಡಿದ ಬಗ್ಗೆ ಜಾಲತಾಣದಲ್ಲಿ ವಿಡಿಯೋ ಸಾಮಾಜಿಕ ಹರಿದಾಡಿದ್ದರಿಂದ ಅದೇ ಘಟನೆಯನ್ನು ದುರುಪಯೋಗಪಡಿಸಿಕೊಂಡು ನಮ್ಮ ಮನೆಗೆ ಯಾರೋ ಅಪರಿಚಿತರು/ ದುಷ್ಕರ್ಮಿಗಳು ನಮ್ಮ ಮನೆಯೊಳಗೆ ನುಗ್ಗಿ ಮಾರಕಾಸ್ತ್ರಗಳನ್ನು ತೋರಿಸಿ ಅಂಜಿಸಿ ಮನೆಯೊಳಗಿದ್ದ 5–6 ತೊಲೆ ಬಂಗಾರದ ಆಭರಣಗಳು ಮತ್ತು ನಗದು ಹಣ ದೋಚಿ–ಕೊಂಡು ಹೋಗಿರುತ್ತಾರೆ ಅಂತ ಸುಳ್ಳು ಹೇಳಿರುತ್ತೇನೆ. ನನ್ನ ಮನೆಗೆ ಯಾರೂ ದುಷ್ಕರ್ಮಿಗಳಾಗಲಿ ಬಂದಿರುವುದಿಲ್ಲ, ಯಾವುದೆ ಬಂಗಾರದ ಆಭರಣಗಳಾಗಲಿ, ನಗದು ಹಣವಾಗಲಿ ದೋ–ಚಿಕೊಂಡು ಹೋಗಿರುವುದಿಲ್ಲ ಅಂತ ಸೇಡಂ ಪೊಲೀಸ್ ಠಾಣೆಗೆ ಬಂದು ಹೇಳಿಕೆ ನೀಡಿರುತ್ತಾಳೆ. ಆದ್ದರಿಂದ ಸೇಡಂ ಪಟ್ಟಣದಲ್ಲಿ ಯಾವುದೇ ಡಕಾಯಿತಿ, ರಾಬರಿ ನಡೆದಿರುವುದಿಲ್ಲ ಸದರಿ ಘಟನೆಯು ಸುಳ್ಳು ಇರುತ್ತದೆ. ಆದ್ದರಿಂದ ಸಾರ್ವಜನಿಕರು ಆತಂಕಕ್ಕೆ ಒಳಗಾಗಬಾರದು ಎಂದು ಈ ಮೂಲಕ ತಿಳಿಸಲಾಗಿದೆ.

# ಶ್ರೀ ಯಾಡಿ ಪೌಹರಾದೆವಿ , ಸಂತ ಶ್ರೀ ಸೇವಾಲಾಲ್ ಮಾಹಾರಾಜರ್ 18ನೇ ವೃತ್ತ ಅಭಿಯಾನ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ತಲಬಾಂಡಿ ವಜ್ಜಲ್ ತಾಂಡದಲ್ಲಿ 18 ವರ್ಷಗಳಿಂದ ಸಂತ ಸೇವಾಲಾಲ್ ಮಾಹಾರಾಜ ಮಾಲಧಾರಿಗಳು ಇಲ್ಲಿಂದ ಪೂಜ್ಯ ಶ್ರೀ ವಿಠಲ್ ಮಾಹಾರಾಜ ಸಮುಖದಲ್ಲಿ 251 ಕಿಂತ ಹೆಚ್ಚು ಮಾತಾಧರೆಗಳು ಮಾಲೆಯನು ಹಾಕುತ್ತದೆ

ಈ ಮಾಲಧಾರಿಗಳು ಕೆಲವರು 21ದಿನಗಲು ಇನ್ನು ಕೆಲವರು 11ದಿನಗಲು ಮಾಲೆಯನು ಧ–ರೈಸಿ ದಿನಕ್ಕೆ ಒಂದು ದಿನದಲ್ಲಿ ಒಂದೇ ಟೈಮ್ ಊಟ ಮಾಡಿ ಸೇವಾಲಾಲ್ ನೆನೆಸುತ್ತಾ ದಿನಗಳನ್ನು ಕಳೆಯುತ್ತಾನೆ

21ದಿನಗಳ ನಂತರ ಪೌಹರಾದೆವಿ ( ಮಾಹಾರಾಷ್ಟ್ರ ) ಹೋಗಿ ನಾತೆಯನು ಧಾರೆ ಏಳೆಯುತ್ತಾರೆ.

ಇದರಲ್ಲಿ ವಿಶೇಷತೆ ಅಂದರೆ ಮಹಿಳೆಯರು, ಪುರುಷರು , ಮಕ್ಕಳು ಸಹ ಮಾಲೆಯನ್ನು ಧರಿಸುತ್ತಾರೆ

ಮಾಲಾಧರೆಗಳು ತಲಬಾಂಡಿ ವಜ್ಜಲ್ ತಾಂಡದ ಪೂಜ್ಯ ಶ್ರೀ ವಿಠಲ್ ಮಾಹಾರಾಜ ಆಶೀರ್ವಾದದಿಂದ ಅನೇಕರು ಇಲ್ಲಿ ಬಂದು ಬೇಡಿಕೊಂಡವರ ಬೇಡಿಕೆ ಈಡೇರಿದೆ ಹಾಗೆ ಅನೇಕ ಪವಾಡಗಳು ನೆರವೇರುವವು ಎಂದು ಪೂಜ್ಯ ಶ್ರೀ ವಿಠಲ್ ಮಾಹಾರಾಜ ತಿಳಿಸಿದರು. ಉದ್ಘಾಟನೆ ನುಡಿಯು ಬಿಜೆಪಿ ರಾಜ್ಯ ಉಪಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ನರಸಿಂಹ ನಾಯಕ (ರಾಜುಗೌಡ್ರು) ಬಂಜಾರ ಸಮಾಜದಲ್ಲಿ ಅನೇಕ ಜಾತ್ರೆ ಪೂಜೆ ಮಾಡುತ್ತೀರಿ ಅದನ್ನ ಬಿಟ್ಟು ಮಕ್ಕಳಿಗೆ ವಿದ್ಯಾಭ್ಯಾಸ ಮಾಡಬೇಕು ಅವಾಗ ಸಮಾಜದಲ್ಲಿ ಒಂದು ನೆಲೆ ಸಾಧ್ಯತೆ ಇದು ಮನದಾಳದ ಮಾತುನಾಡಿದರು.

ಇದೆ ಸಾಧರ್ಭದಲ್ಲಿ ಶ್ರೀ ವಿಠಲ್ ಮಾಹರಾಜರು , ಪ್ರತಾಪ್ ಮಾಹರಾಜರು, ತೇಜುಸಿಂಗ್ ಮಾಹರಾಜರು, ಉದ್ಘಾಟನೆ ನರಸಿಂಹ ನಾಯಕ್ (ರಾಜು ಗೌಡ್ರು) ಮಾಜಿ ಸಚಿವರು , ಶರಣಗೌಡ ಮಾ ಪಾಟೀಲ್, ಕೃಷ್ಣ ಜಾದವ, ವೆಂಕಟೇಶ್ ಪಿ ನಾಯಕ್, ಶೇಖರ್ ಎಸ್ ನಾಯಕ್, ತಿಪ್ಪಣ್ಣ ನಾಯಕ್, ಮೋತಿರಾಮ್ ರಾಠೋಡ್, ರಾಮು ಚವಾಣ್, ಭೀಮಣ್ಣ, ಶಂಕರ್ ಪಂದುನಾಯಕ್, ಜಗನಾಥ ನಾಯಕ್, ನಾಥಪ್ಪ, ಶೇಖರ್ ಪೂಜಾರಿ, ಇದ್ದರು.

# ಯುವ ಜನರು ದೇಶ ಸೇವೆಗೆ ಮುಂದಾಗಲಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 27 : ಯುವ ಜನರುದೇಶಸೇವೆಗೆಮುಂದಾಗಬೇಕು ಎಂದು ಅಕ್ಕಮಹಾದೇವಿ ಮಹಿಳಾ ಕಾಲೇಜು ಪ್ರಾಚಾರ್ಯೆ ಡಾ. ರಂಜನಾ ಪಾಟೀಲ ಹೇಳಿದರು.

ವಿಜಯಪುರದ ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಸಹಯೋಗದೊಂದಿಗೆ ಇಲ್ಲಿಯ ಅಕ್ಕಮಹಾದೇವಿ ಮಹಿಳಾ ಕಾಲೇಜಿನಲ್ಲಿಗುರುವಾರಆಯೋಜಿಸಿದ್ದ ರಾಷ್ಟ್ರೀಯ ಸೇವಾ ಯೋಜನೆ ಘಟಕಗಳ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ದೇಶದ ಪ್ರಗತಿಗೆ ವೈಯಕ್ತಿಕ ಕೊಡುಗೆ ನೀಡಬೇಕು ಎಂದು ತಿಳಿಸಿದರು.

ಶ್ರಮದಾನದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಕೊಡುಗೆ ಬಹು ದೊಡ್ಡದಾಗಿದೆ ಎಂದು ಹೇಳಿದರು.

ಕಾಲೇಜಿನ ಐಕ್ಯೂಎಸ್‌ಸಿ ಅಧ್ಯಕ್ಷ ಡಾ. ಪ್ರವೀಣಕುಮಾರ ಮಾತನಾಡಿ, ಎನ್.ಎಸ್.ಎಸ್. ಸೇವಾ ಮನೋಭಾವ ಬೆಳೆಸುತ್ತದೆ ಎಂದು ತಿಳಿಸಿದರು.

ಡಾ. ಗಂಗಾಂಬಿಕೆ ಪಾಟೀಲ ಮಾತನಾಡಿ, ಪರಿಸರ ಸಂರಕ್ಷಣೆ ಇಂದಿನ ಅವಶ್ಯಕತೆಯಾಗಿದೆ ಎಂದು ಹೇಳಿದರು.

ಪ್ರೊ. ಶರಣಪ್ಪ ದುಬಲಗುಂಡಿ ಮಾತನಾಡಿ, ಗ್ರಾಮಾಭಿವೃದ್ಧಿ ಚಟುವಟಿಕೆಗಳಿಗೆ ಪ್ರತಿಯೊಬ್ಬರೂ ಸಹಕರಿಸಬೇಕು ಎಂದು ತಿಳಿಸಿದರು.

ವಿದ್ಯಾರ್ಥಿಗಳಾದ ಮುಸ್ಕಾನ್, ಅಂಜಲಿ, ರಾಜೇಶ್ವರಿ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಡಾ. ಮೀನಾ ಗಾಯಕವಾಡ್ ಶಿಬಿರದ ವರದಿ ವಾಚಿಸಿದರು.

ಎನ್.ಎಸ್.ಎಸ್. 'ಬ' ಘಟಕದ ಅಧಿಕಾರಿ ಡಾ. ಶ್ವೇತಾ ಶೇರಿಕಾರ್ ಉಪಸ್ಥಿತರಿದ್ದರು. ಶಿವಾನಿ ವಂದಿಸಿದರು.

# ಸರ್ಕಾರಗಳು ರಂಗಭೂಮಿ ಉಳಿಸಿ ಬೆಳೆಸಬೇಕಾಗಿದೆ : ವಿಜಯಕುಮಾರ ಸೋನಾರೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 27 : ಇಂದು ಆಧುನಿಕತೆಯ ಭರಾಟೆಯಲ್ಲಿ ರಂಗಕಲೆ ನಶಿಸಿ ಹೋಗುತ್ತಿವೆ. ರಂಗಭೂಮಿ ಉಳಿದರೆ ಮಾತ್ರ ಕಲಾವಿದರ ಉಳಿವು ಸಾಧ್ಯ ಸರ್ಕಾರಗಳು ಹೆಚ್ಚು ಅನುದಾನ ನೀಡಿ ರಂಗಭೂಮಿ ಉಳಿಸಿ ಬೆಳೆಸುವ ಕಾರ್ಯ ಮಾಡುವ ಅಗತ್ಯವಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ ತಿಳಿಸಿದರು. ಕರ್ನಾಟಕ ನಾಟಕ ಅಕಾಡೆಮಿ ಬೆಂಗಳೂರು ಹಾಗೂ ಕರ್ನಾಟಕ ಸಾಹಿತ್ಯ ಸಂಘದ ಸಹಯೋಗದೊಂದಿಗೆ ನಗರದ ಗುಂಪಾ ರಸ್ತೆಯಲ್ಲಿರುವ ಶ್ರೀ ಶಿರಡಿ ಸಾಯಿಬಾಬಾ ನಾಟ್ಯ ಸಂಘದ ಥೇಟರ್ ಹತ್ತಿರದ ಗುಂಪಾ ರಿಂಗ್




ರಸ್ತೆ ಮೇಲೆ ಆಯೋಜಿಸಿದ ವಿಶ್ವ ರಂಗಭೂಮಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ನಮ್ಮ ಮುಂದಿನ ಪೀಳಿಗೆಗೆ ರಂಗಭೂಮಿ ಕಲೆ ಪರಿಚಯಿಸಲು, ನಾಟಕಗಳ ಕುರಿತು ತಿಳಿಸಲು ಈ ದಿನವನ್ನು ವಿಶ್ವದ ಹಲವು ದೇಶಗಳಲ್ಲಿ ಆಚರಿಸಲಾಗುತ್ತಿದೆ ಎಂದರು.

01. ಕರ್ನಾಟಕ ಜಾನಪದ ಪರಿಷತ್ತಿನ ಜಿಲ್ಲಾಧ್ಯಕ್ಷ ಡಾ. ಜಗನ್ನಾಥ ಹೆಬ್ಬಾಳೆ ಮಾತನಾಡಿ 1961 ರಲ್ಲಿ ಪ್ಯಾರಿಸ್ ನಲ್ಲಿ ವಿಶ್ವ ರಂಗಭೂಮಿ ದಿನಾಚರಣೆ ಆಚರಿಸಬೇಕೆಂದು ಯುನೆಸ್ಕೋ ಮೊದಲನೇ ಬಾರಿಗೆ ಘೋಷಣೆ ಮಾಡಿತು. ಇಬ್ರಾಹಿಂ ಅಲ್ಕಾಜಿ ಅವರನ್ನು ರಂಗಭೂಮಿ ಪಿತಾಮಹ ಎಂದು ಕರೆಯುತ್ತಾರೆ. ನಾಟಕವಾಡುವ ಸ್ಥಳವನ್ನು ರಂಗಭೂಮಿ ಅಥವಾ ಥೇಟರ್ ಎಂದು ಕರೆಯುತ್ತಾರೆ. ಹಿಂದೆ ಸಮಾಜದಲ್ಲಿ ನಡೆಯುವ ಅನ್ಯಾಯ, ಮೋಸ ಮತ್ತು ವಂಚನೆಗಳನ್ನು ಕಲಾವಿದರು ನಾಟಕದ ಮೂಲಕ ತೋರಿಸುತಿದ್ದರು. ಸಮಾಜದಲ್ಲಿ ವಿವಿಧ ಪಾತ್ರಗಳ ಮೂಲಕ ಜಾಗೃತಿ ಮೂಡಿಸುತಿದ್ದರು. ಫೆಬ್ರವರಿ ನಂತರ ರಾಶಿ ಮುಗಿಸಿ ಮನೋರಂಜನೆಗಾಗಿ ಬೇಸಿಗೆಯಲ್ಲಿ ಪೌರಾಣಿಕ ನಾಟಕ ಮಾಡಿ ನಮ್ಮ ದೇಶದ ಸಂಸ್ಕೃತಿ ಮೇಲೆ ಬೆಳಕು ಚೆಲ್ಲುತಿದ್ದರು ಎಂದು ಪ್ರತಿಪಾದಿಸಿದರು. ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಡಾ. ರಾಜಕುಮಾರ ಹೆಬ್ಬಾಳೆ ಮಾತನಾಡಿ ವಿಶ್ವ ರಂಗಭೂಮಿ ದಿನಾಚರಣೆಯನ್ನು ವಿಶ್ವದ 85 ರಾಷ್ಟ್ರಗಳಲ್ಲಿ ಆಚರಿಸಲಾಗುತ್ತದೆ. ರಾಜ್ಯದಲ್ಲಿಯೂ ನಾಟಕ ಅಕಾಡೆಮಿಯು ರಂಗಭೂಮಿಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಆಚರಿಸುತ್ತಿದೆ. ಇಂದು ಬೀದರನಲ್ಲಿ ಐದು ಜನ ರಂಗಭೂಮಿ ಕಲಾವಿದರನ್ನು ಸನ್ಮಾನಿಸಲಾಗುತ್ತಿದೆ ಎಂದರು. ಇದೇ ವೇಳೆ ದೇವಿದಾಸ ಚಿಮಕೊಡೆ ಹಾಗೂ ತಂಡದವರಿಂದ ಹೆಣ್ಣು ಸಮಾಜದ ಕಣ್ಣು ಬೀದಿ ನಾಟಕ ಪ್ರದರ್ಶನ ಜರುಗಿತು.

ಕಾರ್ಯಕ್ರಮದಲ್ಲಿ ರಂಗಾಯಣ ಮಾಜಿ ನಿರ್ದೇಶಕ ಮಹೇಶ ವಿ.ಪಾಟೀಲ, ಪ್ರೊ. ಪ್ರಭುಶೆಟ್ಟಿ ಮೂಲಗೆ, ಬಸವರಾಜ ಕಟ್ಟಿಮನಿ, ಪವನ ಬಾರೆ, ಲಕ್ಷ್ಮಣ ಮಚಕುರಿ, ಶೇಷಪ್ಪ ಚಿಟ್ಟಾ, ಗಾಯಕ ಶಂಭುಲಿಂಗ ವಾಲದೊಡ್ಡಿ, ಪ್ರೊ. ಉಮಾಕಾಂತ ಪಾಟೀಲ, ವೈಜಿನಾಥ ಪಾಟೀಲ, ಮಲ್ಲಮ್ಮ ಸಂತಾಜಿ, ನಿಜಲಿಂಗಪ್ಪ ತಗಾರೆ, ಬಿ.ಜೆ.ವಿಷ್ಣುಕಾಂತ, ರಾಮಕೃಷ್ಣನ್ ಸಾಳೆ, ಶಿವಶರಣಪ್ಪ ಗಣೇಶಪುರ ಸೇರಿದಂತೆ ಹಲವರಿದ್ದರು.

# ಮಾ.30 ರಂದು ಧಾರವಾಡದಲ್ಲಿ ರಾಜ್ಯ ಕ್ಷತ್ರೀಯ ಮರಾಠ ಸಮಾಜದ ಜಾಗೃತಿ ಮಹಾಸಭೆ ಪಾಲ್ಗೊಳ್ಳಲು ಪ್ರದೀಪ್ ಬಿರಾದಾರ ಕರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 27 : ಮರಾಠಾ ಸಮುದಾಯದ ಒಟ್ಟಾರೆ ಪ್ರಗತಿ ಮತ್ತು ಗುರುಕುಲಗಳ ರಚನೆಗೆ ಅಗತ್ಯವಾದ ಚಿಂತನ ಮಂಥನದ ಗುರಿಯೊಂದಿಗೆ ಭವ್ಯವಾದ ರಾಜ್ಯ ಕ್ಷತ್ರಿಯ ಮರಾಠ ಸಮಾಜ ಜಾಗೃತಿ ಮಹಾಸಭಾವನ್ನು ಆಯೋಜಿಸಲಾಗಿದೆ. ಈ ಐತಿಹಾಸಿಕ ಸಮಾರಂಭವು ಮಾರ್ಚ್ 30, 2025 ರ ಭಾನುವಾರ ಸಂಜೆ 4:00 ಗಂಟೆಗೆ ಧಾರವಾಡದ ಮರಾಠಾ ವಿದ್ಯಾಪ್ರಸಾರ ಮಂಡಲದ ಛತ್ರಪತಿ ಸಂಭಾಜಿರಾಜೆ ಸಭಾಂಗಣದಲ್ಲಿ ನಡೆಯಲಿದೆ. ಜಿಲ್ಲೆಯ ಮರಾಠಾ ಸಮಾಜದ ಪ್ರಮುಖರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಸಕಲ ಮರಾಠಾ ಸಮಾಜದ ಜಿಲ್ಲಾ ಸಂಯೋಜಕ ಪ್ರದೀಪ ಬಿರಾದಾರ ಕರೆ ನೀಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು ಯುಗಾದಿ ಪಾಡ್ವಾದ ಶುಭ ಸಂದರ್ಭದಲ್ಲಿ ಸಮುದಾಯದ ಏಕತೆ ಮತ್ತು ಪ್ರಗತಿಯನ್ನು ಖಚಿತಪಡಿಸಿಕೊಳ್ಳಲು ಸಂಘಟಕರು ಸಮುದಾಯಕ್ಕೆ ಒಗ್ಗೂಡುವಂತೆ ಮನವಿ ಮಾಡಿದ್ದಾರೆ. ಈ ಸಮಾರಂಭವು ಪರಮ ಪೂಜ್ಯ ಜಗದ್ಗುರು ವೇದಾಂತಾಚಾರ್ಯ ಶ್ರೀ ಮಂಜುನಾಥ ಭಾರತಿ ಮಹಾಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಜರುಗಲಿದೆ. ಈ ಸಭೆಯ ಪ್ರಯೋಜನ ಪಡೆಯಬೇಕೆಂದು ಕೋರಿದ್ದಾರೆ. ಈ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರದ ಸಚಿವರಾದ ಸನ್ಮಾನ್ಯ ಶ್ರೀ ಸಂತೋಷ್ ಲಾಡ್ ಉದ್ಘಾಟಿಸಲಿದ್ದು, ಧಾರವಾಡದ ಮರಾಠಾ ವಿದ್ಯಾಪ್ರಸಾರ ಮಂಡಲದ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಮನೋಹರ್ ಮೋರೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಅಲ್ಲದೇ ಹಲವಾರು ಜನಪ್ರತಿನಿಧಿಗಳು, ಬುದ್ಧಿಜೀವಿಗಳು, ಸಾಹಿತಿಗಳು, ಹೋರಾಟಗಾರರು ಈ ಮಹಾಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಪ್ರದೀಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 'ವಚನ ಮಂಟಪ' ಕಾರ್ಯಕ್ರಮ ನಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 27 : ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ಮಾರ್ಚ್ 29 ರಂದು ಸಂಜೆ 5ಕ್ಕೆ ಇಲ್ಲಿಯ ಗಾಂಧಿಗಂಜನ ಬಸವೇಶ್ವರ ದೇವಸ್ಥಾನದಲ್ಲಿ ವಚನ ಮಂಟಪ ಮಾಸಿಕ ಚಿಂತನ–ಮಂಥನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು ಸಾನಿಧ್ಯ, ಹುಲಸೂರಿನ ಶಿವಾನಂದ ಸ್ವಾಮೀಜಿ ನೇತೃತ್ವ, ಬಸವ ಸೇವಾ ಪ್ರತಿಷ್ಠಾನದ ಅಕ್ಕ ಡಾ. ಗಂಗಾಂಬಿಕೆ, ಗೋರ್ಟಾದ ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮೀಜಿ ಸಮ್ಮುಖ ವಹಿಸುವರು. ಸಂಸದ ಸಾಗರ್ ಖಂಡ್ರೆ ಉದ್ಘಾಟಿಸುವರು. ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಅಧ್ಯಕ್ಷತೆ ವಹಿಸುವರು. ಕೌಠಾದ ಬಸವ ಯೋಗಾಶ್ರಮದ ಸಿದ್ಧರಾಮ ಶರಣರು ಬೆಲ್ದಾಳೆ 'ವಚನಗಳಲ್ಲಿ ಅನುಭವ ಮಂಟಪದ ಐತಿಹಾಸಿಕತೆ' ಕುರಿತು ಅನುಭಾವ ಮಂಡಿಸುವರು.

ಜಾಗತಿಕ ಲಿಂಗಾಯತ ಮಹಾಸಭಾ ಕೇಂದ್ರ ಸಮಿತಿಯ ಹಿರಿಯ ಉಪಾಧ್ಯಕ್ಷ ಬಸವರಾಜ ಬುಳ್ಳಾ, ಭಾರತೀಯ ಬಸವ ಬಳಗದ ರಾಜ್ಯ ಅಧ್ಯಕ್ಷ ಬಾಬುವಾಲಿ, ರಾಷ್ಟ್ರೀಯ ಬಸವ ದಳದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಾವಿದ ಸಿದ್ದುಸಾಯಿ ನಾನಕೇರಿ ವಚನ ಗಾಯನ ನಡೆಸಿಕೊಡುವರು.

ಮಹಾಸಭಾದ ಮಾಸಿಕ ಸಭೆಯಲ್ಲಿ ಪ್ರತಿ ತಿಂಗಳ ಅಮಾವಾಸ್ಯೆಯಂದು ವಚನ ಮಂಟಪ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಲಾಗಿತ್ತು. ಅದರಂತೆ ಪ್ರಥಮ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ಆಯೋಜಿಸಲಾಗಿದೆ. ಬಸವಾನುಯಾಯಿಗಳು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಮನವಿ ಮಾಡಿದ್ದಾರೆ.

# ಪೋಲಿಸ್ ಇಲಾಖೆಯಿಂದ ಘೋರ ಅನ್ಯಾಯ: ಅಳಲು ತೋಡಿಕೊಂಡ ನಿವೃತ್ತ ಎ.ಎಸ್.ಐ ಮೇಘರಾಜ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 27 : ಪೋಲಿಸ್ ಇಲಾಖೆಯಲ್ಲಿ ಸುಮಾರು 34 ವರ್ಷಗಳಿಂದ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ದರೂ ಮುಂಬಡ್ತಿ ವಿಚಾರದಲ್ಲಿ ನನಗೆ ಇಲಾಖೆ ಘೋರ ಅನ್ಯಾಯ ಮಾಡಿದೆ ಎಂದು ನಿವೃತ್ತ ಎ.ಎಸ್.ಐ ಮೇಘರಾಜ ಯಲ್ಲಪ್ಪ ತಮ್ಮ ಅಳಲು ತೋಡಿಕೊಂಡರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಉದ್ದೇಶಿಸಿ ಮಾತನಾಡಿರುವ ಅವರು, 1980ರಲ್ಲಿ ತಾನು ಪೋಲಿಸ್ ಸೇವೆಗೆ ತೊಡಗಿದೆ. ಅಲ್ಲಿಂದ 2022ರ ವರೆಗೆ ಸುಧೀರ್ಘ ಸೇವೆ ಮಾಡಿದೆ. ತಾನು ಎ.ಕೆಟೆಗರಿಗೆ ಸೇರಿದ್ದೇನೆ. ಮಂಜುನಾಥ ಎನ್ನುವವರು ಸಹ ಎ ಕೆಟೆಗರಿಗೆ ಸೇರಿರುತ್ತಾನೆ. ಆದರೆ ಅವರು ಚಿಟಗುಪ್ಪ ಶಾಲೆ ಮುಖ್ಯ ಗುರುವಿಗೆ ಹೆದರಿಸಿ ಎಸ್.ಎಸ್.ಎಲ್.ಸಿ ನಕಲಿ ವರ್ಗಾವಣೆ ಪ್ರಮಾಣ ಪತ್ರ ಪಡೆದು ಪೋಲಿಸ್ ಹುದ್ದೆಗೆ ನೇಮಕವಾಗುತ್ತಾರೆ. ನಿಜವಾಗಿ ಕಬ್ಬಲಿಗ ಜಾತಿಗೆ ಸೇರಿರುವ ಇವರು ಕೋಯಾ ಎಂಬ ಜಾತಿ ತೋರಿಸಿ ಎಸ್.ಟಿ ನಕಲಿ ಪ್ರಮಾಣ ಪತ್ರ ಪಡೆದು ಪೋಲಿಸ್ ಹುದ್ದೆಯಲ್ಲಿ ಭರ್ತಿಯಾಗಿ ನನಗೆ ದೊರೆಯಬೇಕಿದ್ದ ಮುಂಬಡ್ತಿ



ಗಿಟ್ಟಿಸಿಕೊಂಡು ನಮ್ಮ ಇಲಾಖೆಯ ಮೇಲಾಧಿಕಾರಿಗಳಿಗೆ ಲಂಚ ನೀಡಿ ಬಡ್ತಿ ಪಡೆದ ಮಂಜುನಾಥ ಹಾಗೂ ಪೋಲಿಸ್ ಇಲಾಖೆ ನನಗೆ ಮೋಸ ಮಾಡಿವೆ ಎಂದು ಆರೋಪಿಸಿದರು. 2016ರಿಂದ ನನಗಾದ ಅನ್ಯಾಯದ ವಿರೂದ್ಧ ಹೋರಾಟ ಮಾಡುತ್ತಿದ್ದರೂ ನನಗೆ ನ್ಯಾಯ ದೊರೆತಿಲ್ಲ. ಈ ವಿಚಾರವಾಗಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು, ಪೋಲಿಸ್ ಮಹಾ ನಿರಿಕ್ಷಕರು, ಪೋಲಿಸ್ ಮಹಾ ನಿರ್ದೇಶಕರು, ಗೃಹ ಸಚಿವರು ಸೇರಿದಂತೆ ಇಲಾಖೆಯ ಎಲ್ಲ ಉನ್ನತಾಧಿಕಾರಿಗಳಿಗೆ ಮನವಿ ಮಾಡಿದರೂ ಯಾರು ಸಹ ನನಗೆ ನ್ಯಾಯ ದೊರಕಿಸಿ ಕೊಡಲಿಲ್ಲವೆಂದು ಹೇಳಿ ಭಾವುಕರಾದರು. ಮಂಜುನಾಥ ಎನ್ನುವವವರ ಜಾತಿ ಪ್ರಮಾಣ ಪತ್ರ ನಕಲಿ ಇದೆ, ನನಗೆ ಇದರಿಂದ ಅನ್ಯಾಯವಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಿಗೆ ದೂರು ಸಲ್ಲಿಸಿದೆ, ಬೀದರ್ ಜೆ.ಎಮ್.ಎಫ್.ಸಿ ನ್ಯಾಯಾಲಯಕ್ಕೂ ದೂರು ದಾಖಲಿಸಿದೆ. ಚಿಟಗುಪ್ಪ ಸೆಸೆನ್ಸ್ ನ್ಯಾಯಾಲದಲ್ಲಿ ಮಂಜುನಾಥನ ವಿರೂದ್ಧ ಖಟ್ಲೆ ಹೂಡಿದೆ. ಜಾತಿ ಪರಿಶಿಲನಾ ಸಮಿತಿಯು ಮಂಜುನಾಥನ ಜಾತಿ ಪ್ರಮಾಣ ಪತ್ರ ನಕಲಿ ಇದೆ ಎಂದು ವರದಿ ನೀಡಿ ಬೀದರ್ ಜಿಲ್ಲಾಧಿಕಾರಿಗಳು ಈ ಕೇಸ್ ಮುಂದುವರೆಸಬೇಕು ಎಂದು ನ್ಯಾಯಾಲಯ ಹೇಳಿದ್ದರಿಂದ ಆಗಿನ ಡಿ.ಸಿ ಗೋವಿಂದರೆಡ್ಡಿ ಅವರು ನನ್ನ ಗಮನಕ್ಕೆ ತರದೆ ನನ್ನ ಪ್ರತಿಸ್ಪರ್ಧಿ ಮಂಜುನಾಥನ ಪರವಾಗಿ ಆದೇಶ ನೀಡಿ ನನಗೆ ಮೋಸ ಮಾಡಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು. ಒಟ್ಟಾರೆ ಪೋಲಿಸ್ ಅಧಿಕಾರಿಗಳು, ಡಿ.ಸಿ ಕಚೇರಿ, ತಹಸಿಲ ಕಚೇರಿ, ನ್ಯಾಯಾಲಯದಲ್ಲಿ ದೂರು ದಾಖಲಿಸಿ ಸುಮಾರು 4 ಚೀಲ ದಾಖಲೆ ಸಂಗ್ರಹಿಸಿದ್ದೇನೆ. ಕಳೆದ ಒಂಬತ್ತು ವರ್ಷಗಳಲ್ಲಿ ಕಚೇರಿ ಕೋರ್ಟ್ ಅಲೆದು ಸುಸ್ತಾಗಿ ಈಗ ಮಾಧ್ಯಮದ ಮುಂದೆ ಬಂದಿದ್ದೇನೆ ಎಂದವರು ಹೇಳಿದರು. ನನ್ನ ಜೀವನ ಹಾಳು ಮಾಡಿದ ಮಂಜುನಾಥ ಹಾಗೂ ತಪ್ಪಿತಸ್ತ ಪೋಲಿಸ್ ಇಲಾಖೆ ಅಧಿಕಾರಿಗಳಿಗೆ ತಕ್ಕ ಶಾಸ್ತಿ ಆಗಬೇಕು, ನನಗೆ ನ್ಯಾಯ ದೊರಕಿಸಿಕೊಡಬೇಕೆಂದು ಹಾಲಿ ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ ಹಾಗೂ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರಿಗೂ ದೂರು ಸಲ್ಲಿಸಿರುವುದಾಗಿ ಮೇಘರಾಜ ಸ್ಪಷ್ಟಪಡಿಸಿದರು. ಮಾರೂತಿ ಕಾಂಬಳೆ ಪತ್ರಿಕಾ ಗೋಷ್ಠಿಯಲ್ಲಿದ್ದರು.

# ಲೆಕ್ಕ ಪರಿಶೋಧನಾ ಇಲಾಖೆ ಡಿ.ಡಿ ವಿಷ್ಣುಗೆ ಕೂಡಲೇ ಅಮಾನತ್ತು ಮಾಡಿ: ಸ್ವಾರಳ್ಕಕರ್



ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 27 : ಲೆಕ್ಕ ಪರಿಶೋಧನಾ ಇಲಾಖೆಯ ಹಿರಿಯ ಉಪ ನಿರ್ದೇಶಕ ವಿಷ್ಣು ಅವರು ವ್ಯಾಪಕ ಭ್ರಷ್ಟಾಚಾರದಲ್ಲಿ ತೊಡಗಿದ್ದು, ಅವರನ್ನು ಈ ಕೂಡಲೇ ಅಮಾನತು ಮಾಡುವಂತೆ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಕಲಬುರಗಿ ವಿಭಾಗಿಯ ಸಂಚಾಲಕ ಉಮೇಶಕುಮಾರ ಸ್ವರಳ್ಳಿಕರ್ ಒತ್ತಾಯಿಸಿದರು.

ಗುರುವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಸಿಸಿ ಮಾತನಾಡಿರುವ ಅವರು, ವಿಷ್ಣು ಅವರು ಮೂಲತಃ ಬೆಂಗಳೂರಿನವರಾಗಿದ್ದು, ಬಹಳಷ್ಟು ಸಮಯದಲ್ಲಿ ತಮ್ಮ ಕಚೇರಿಯಲ್ಲಿ ಲಭ್ಯವಿರುವುದಿಲ್ಲ. ಸ್ವತಂತ್ರ ದಿನಾಚರಣೆ, ಗಾಂಧಿ ಜಯಂತಿ, ಗಣರಾಜ್ಯೋತ್ಸವ ದಿನದಂದು ಇವರು ಕಚೇರಿಗೆ ಬಾರದೇ ಮಹಾತ್ಮರಿಗೆ ಅವಮಾನ ಮಾಡಿರುತ್ತಾರೆ ಎಂದು ಆರೋಪಿಸಿದರು.

ವಿಷ್ಣು ಅವರು ಗ್ರಾಮ ಪಂಚಾಯತಗಳಿಗೆ ಅಡಿಟ್‌ಗೆ ತೆರಳಿದಾಗ ತಲಾ ಗ್ರಾ.ಪಂಗಳಿಂದ 30 ಸಾವಿರ ಹಪ್ತಾ ಕೇಳಿರುವ ಬಗ್ಗೆ ಅನೇಕ ಪಿ.ಡಿ.ಒಗಳು ನಮ್ಮ ಬಳಿ ತಮ್ಮ ಅಳಲು ತೋಡಿಕೊಂಡಿದ್ದಾರೆ. ಇತ್ತಿಚೀಗೆ ಬೆಮಳಖೇಡ ಗ್ರಾಮ ಪಂಚಾಯತಿ ಪಿ.ಡಿ.ಒ ಪಾಶಾ ಅವರಿಗೆ ಲಂಚ ಕೇಳಿದಲ್ಲದೇ ಏರು ಧ್ವನಿಯಲ್ಲಿ ಮಾತನಾಡಿರುವ ಬಗ್ಗೆ ದಾಖಲೆ ಸಹ ಇದೆ. ಲೆಕ್ಕ ಪರಿಶೋಧನೆ ಇಲಾಖೆ ನೇರವಾಗಿ ಮುಖ್ಯಮಂತ್ರಿಗಳ ವ್ಯಾಪ್ತಿಗೆ ಬರುವುದರಿಂದ ಇವರು ತಾನೇ ರಾಜ ಎಂಬ ಭ್ರಮೆಯಲ್ಲಿದ್ದಂತೆ ಕಾಣುತ್ತಿದೆ. ಕಳೆದ ಎಳೆಂಟು ತಿಂಗಳ ಹಿಂದೆ ಇವರ ವಿರೂದ್ಧ ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಇತ್ತಿಚೀಗೆ ಈ ವಿಚಾರವಾಗಿ ರಾಜ್ಯಪಾಲರಿಗೂ ಮನವಿ ಸಲ್ಲಿಸಲಾಗಿದೆ ಆದರೂ ಅದು ಸಹ ಪ್ರಯೋಜನ ಆಗಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸರ್ಕರದ ನಿಯಮದಂತೆ 3 ವರ್ಷಗಳ ಬಳಿಕ ಅವರ ವರ್ಗಾವಣೆ ಆಗಬೇಕು. ಆದರೆ ವಿಷ್ಣು ಕಳೆದ 6 ವರ್ಷಗಳು ಹಾಗೂ 6 ತಿಂಗಳಿನಿಂದ ಇಲ್ಲಿಯೆ ಠಿಕಾಣಿ ಹೂಡಿದ್ದಾರೆ. ಇವರಿಗೆ ಹೇಳುವವರು, ಕೇಳುವವರು ಯಾರು ಇಲ್ಲ ಎಂಬಂತಾಗಿದೆ ಪರಿಸ್ಥಿತಿ. ಇಂಥ ಭಂಡತನ ತೋರುವ ಅಧಿಕಾರಿಯನ್ನು ಕೂಡಲೇ ಅಮಾನತು ಮಾಡಿ ಇಲ್ಲವಾದರೆ ಬೀದರ್ ಜಿಲ್ಲೆ ಸೇರಿದಂತೆ ಇಡೀ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದೆಂದು ಸ್ವರಳ್ಳಿಕರ್ ಎಚ್ಚರಿಸಿದರು.

ಸಮಿತಿಯ ಜಿಲ್ಲಾ ಸಂಚಾಲಕ ಬಾಬುರಾವ ಕೌಠಾ, ಜಿಲ್ಲಾ ಖಜಾಂಚಿ ದೇವರಾಜ ಡಾಕುಳಗಿ, ಜಿಲ್ಲಾ ಸಂಘಟನಾ ಸಂಚಾಲಕ ಅಶೋಕ ಸಂಗಮ, ಜಿಲ್ಲಾ ವಿದ್ಯಾರ್ಥಿ ಒಕ್ಕೂಟದ ಸಮಘಟನಾ ಸಂಚಾಲಕ ಜೈಭೀಮ ಶರ್ಮಾ, ಬೀದರ್ ತಾಲೂಕು ಸಂಚಾಲಕ ಗೋವಿಂದ ಬಡಿಗೇರ, ತಾಲೂಕು ಪದಧಿಕಾರಿ ವಿಜಯಕುಮಾರ ಭಾವಿಕಟ್ಟಿ, ಔರಾದ್ ತಾಲೂಕು ಸಂಚಾಲಕ ಪ್ರಕಾಶ ಬಂಗಾರೆ ಹಾಗೂ ಇತರರು ಪತ್ರಿಕಾ ಗೋಷ್ಠಿಯಲ್ಲಿದ್ದರು.

# ಸಹಕಾರ ಸಂಘ ಆರ್ಥಿಕ ಪ್ರಗತಿಗೆ ಪೂರಕ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.27:ಸಹಕಾರ ಸಂಘಗಳು ಬಡ ಜನರ ಆರ್ಥಿಕ ಪ್ರಗತಿಗೆ ಪೂರಕವಾಗಿವೆ ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ಪಟ್ಟಣದ ಲೆಕ್ಚರ್ ಕಾಲೋನಿಯಲ್ಲಿ ಬುಧವಾರ ಆಯೋಜಿಸಿದ್ದ ಓಂಲಕ್ಷ್ಮಿ ಸೌಹಾರ್ದ ಸಹಕಾರ ಸಂಘ ಉದ್ಘಾಟನಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಸಾಕಷ್ಟು ಸಹಕಾರ ಸಂಘಗಳು ಹುಟ್ಟಿಕೊಳ್ಳುತ್ತಿವೆ. ಕಡಿಮೆ ಬಡ್ಡಿ ದರದಲ್ಲಿ ಸಾಲ ಸೇರಿ ವಿವಿಧ ಸೌಲಭ್ಯಗಳು ನೀಡಲು ಮುಂದೆ ಬರುತ್ತಿವೆ. ಬಡವರು, ಸಣ್ಣ ವ್ಯಾಪಾರಸ್ಥರು ಇಂತವುಗಳ ಸದುಪಯೋಗ ಪಡೆದು ಕೊಂಡು ತಮ್ಮ ಆರ್ಥಿಕ ಪರಿಸ್ಥಿತಿ ಸುಧಾರಿಸಿ ಕೊಳ್ಳಬೇಕು. ಕಾಲಕಾಲಕ್ಕೆ ಪಡೆದ ಸಾಲ ಮರುಪಾವತಿಸಿ ಸಹಕಾರಿ ಸಂಘಗಳು ಉಳಿಯುವಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿದ್ದರು. ಈ ಸಂದರ್ಭದಲ್ಲಿ ಓಂಲಕ್ಷ್ಮಿ ಸೌಹಾರ್ದ ಸಹಕಾರ ಸಂಘದ ಅಧ್ಯಕ್ಷೆ ಲಕ್ಷ್ಮಿ ಓಂಕಾರ, ಉಪಾಧ್ಯಕ್ಷ ಓಂಕಾರ ಕನಶೆಟ್ಟೆ, ವ್ಯವಸ್ಥಾಪಕ ಅಮರ ಸೇರಿದಂತೆ ಹಲವರು ಇದ್ದರು.

# ಸಾಂಸ್ಕೃತಿಕ ನಾಯಕರ ಐಕ್ಯ ಕ್ಷೇತ್ರಕ್ಕೆ ಸೌಕರ್ಯ ಕಲ್ಪಿಸಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 27 : ಬಾಗಲಕೋಟೆ ಜಿಲ್ಲೆಯ ಕೂಡಲಸಂಗಮದಲ್ಲಿ ಇರುವ ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣನವರ ಐಕ್ಯ ಕ್ಷೇತ್ರಕ್ಕೆ ಮೂಲ ಸೌಕರ್ಯ ಕಲ್ಪಿಸಬೇಕು ಎಂದು ಬೀದರನ ಬಸವೇಶ್ವರ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷ ಡಾ. ಅಶೋಕಕುಮಾರ ನಾಗೂರೆ ಆಗ್ರಹಿಸಿದ್ದಾರೆ.

ಈ ಕುರಿತು ಅವರು ಮುಖ್ಯಮಂತ್ರಿ ಹಾಗೂ ರಾಜ್ಯದ ಎಲ್ಲ ಸಚಿವರಿಗೆ ಬರೆದ ಮನವಿ ಪತ್ರವನ್ನು ಗುರುವಾರ ಜಿಲ್ಲಾಧಿಕಾರಿಗೆ ಸಲ್ಲಿಸಿದ್ದಾರೆ.

ಬೇರೆ ರಾಜ್ಯಗಳಲ್ಲಿ ಸಾಂಸ್ಕೃತಿಕ ನಾಯಕರ ಸ್ಮಾರಕಗಳು ಮಾದರಿಯಾಗಿವೆ. ಬಸವಣ್ಣನವರ ಕ್ಷೇತ್ರ ಮಾತ್ರ ಅವ್ಯವಸ್ಥೆಯ ಗೂಡಾಗಿದೆ ಎಂದು ದೂರಿದ್ದಾರೆ.

ದೇಶ, ವಿದೇಶದಿಂದ ನಿತ್ಯ ಸಾವಿರಾರು ಜನ ಭೇಟಿ ನೀಡುವ ಕ್ಷೇತ್ರದಲ್ಲಿ ಸರಿಯಾದ ವಸತಿ ಗೃಹ, ಸ್ನಾನ ಗೃಹ, ಬಟ್ಟೆ ಬದಲಾಯಿಸುವ ಕೋಣೆ, ಡಸ್ಟ್ ಬೀನ್, ಗೈಡ್‌ಗಳು ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ

ನದಿಯ ಮೆಟ್ಟಿಲುಗಳು ಹಾಸುಗಟ್ಟಿ ಭಕ್ತರು ಕಾಲು ಜಾರಿ ಬೀಳುತ್ತಿದ್ದಾರೆ. ಐಕ್ಯ ಮಂಟಪ ಜಾಳು ಹಿಡಿದಿದೆ. ಕ್ಷೇತ್ರದ ಪರಿಸರ ಮಾಲಿನ್ಯದಿಂದ ಕೂಡಿದೆ. ದರ್ಶನಕ್ಕೂ ಶುಲ್ಕ ವಿಧಿಸಲಾಗಿದೆ. ಎಲ್ಲೆಡೆ ಬಸವಣ್ಣನವರ ಭಾವಚಿತ್ರ ಅಳವಡಿಸಿಲ್ಲ ಎಂದು ಹೇಳಿದ್ದಾರೆ.

ಪ್ರಧಾನಿ ಮೋದಿ ಅವರು ಬಸವಣ್ಣನವರ ಕಾರ್ಯಗಳ ಬಗ್ಗೆ ತಮ್ಮ ಅನೇಕ ಭಾಷಣಗಳಲ್ಲಿ ಪ್ರಸ್ತಾಪಿಸಿದ್ದಾರೆ. ವಿಶ್ವವೇ ಬಸವಣ್ಣನವರ ತತ್ವಗಳನ್ನು ಅಪ್ಪಿಕೊಳ್ಳುತ್ತಿದೆ. ಆದರೆ, ಕೂಡಲಸಂಗಮ ಅಭಿವೃದ್ಧಿ ಮಂಡಳಿಯ ನಿರ್ಲಕ್ಷ್ಯದಿಂದಾಗಿ ಅವರ ಐಕ್ಯಕ್ಷೇತ್ರ ಮಾದರಿಯಾಗಿ ರೂಪುಗೊಳ್ಳಲು ಸಾಧ್ಯವಾಗಿಲ್ಲ ಎಂದು ಆರೋಪಿಸಿದ್ದಾರೆ.

ರಾಜ್ಯ ಸರ್ಕಾರ ಐಕ್ಯ ಕ್ಷೇತ್ರದ ಅಭಿವೃದ್ಧಿಗೆ ಕಾಳಜಿ ತೋರಬೇಕು. ಅಂತರರಾಷ್ಟ್ರೀಯ ಪ್ರವಾಸಿ ತಾಣವಾಗಿ ರೂಪಿಸಬೇಕು. ಅಗತ್ಯ ಮೂಲ ಸೌಕರ್ಯ ಒದಗಿಸಬೇಕು. ಕ್ಷೇತ್ರದ ಸ್ವಚ್ಛತೆಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

# ದೇವರ ದಾಸಿಮಯ್ಯ ಜಯಂತಿಯನ್ನು ಅದ್ಧೂರಿಯಾಗಿ ಆಚರಿಸಲು ನಿರ್ಧಾರ :ಎಡಿಸಿ ಶಿವಕುಮಾರ ಶೀಲವಂತ

ಮಲ್ಲಮ್ಮ ನುಡಿ ವಾರ್ತೆ

ಬೀದರ :ಮಾ.27: ಇದೇ ಏಪ್ರಿಲ್.2 ರಂದು ಶ್ರೀ ದೇವರ ದಾಸಿಮಯ್ಯ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ತಿಳಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಏಪ್ರಿಲ್.2 ರಂದು ಶ್ರೀ ದೇವರ ದಾಸಿಮಯ್ಯ ಜಯಂತಿ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಏಪ್ರಿಲ್.2 ರಂದು ಬೆಳಿಗ್ಗೆ 9: 30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ದೇವರ ದಾಸಿಮಯ್ಯ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಗುವುದು. ನಂತರ ರಥ ಮೆರವಣಿಗೆಗೆ ಚಾಲನೆ



ನೀಡಲಾಗುವುದು. ಈ ಮೆರವಣಿಗೆಯು ಜಿಲ್ಲಾಧಿಕಾರಿಗಳ ಕಚೇರಿಯಿಂದ ಶಿವಾಜಿ ಸರ್ಕಲ್, ಬಸವೇಶ್ವರ ಸರ್ಕಲ್, ಅಂಬೇಡ್ಕರ್ ಸರ್ಕಲ್, ಕರಿಯಪ್ಪ ಸರ್ಕಲ್ ಮೂಲಕ ಹಾದು ಪೂಜ್ಯಶ್ರೀ ಚನ್ನಬಸವ ಪಟ್ಟದೇವರು ರಂಗಮಂದಿರಕ್ಕೆ ತಲುಪಲಿದೆ. ನಂತರ 11: 30ಕ್ಕೆ ವೇದಿಕೆ ಕಾರ್ಯಕ್ರಮವನ್ನು ನಡೆಯಲಿದೆ ಎಂದು ತಿಳಿಸಿದರು. ಜಿಲ್ಲೆಯ ಎಲ್ಲಾ ಇಲಾಖೆಗಳ ಕಛೇರಿಗಳಲ್ಲಿ ಶ್ರೀ ದೇವರ ದಾಸಿಮಯ್ಯ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲು ಜಿಲ್ಲಾಡಳಿತದಿಂದ ಆದೇಶ ನೀಡಲಾಗುವುದು. ಎರಡು ದಿವಸ ನಗರದ ಎಲ್ಲಾ ಸರ್ಕ???ಗಳಿಗೆ ದೀಪಾಲಂಕಾರ ಮಾಡಬೇಕು ಹಾಗೂ ಜಯಂತಿಗೆ 3 ಕಲಾ ತಂಡಗಳು ನೀಡಲಾಗುವುದು. ಪೊ?ಲಿಸ್ ಇಲಾಖೆಯಿಂದ ಸೂಕ್ತಪೊಲೀಸ್ ಬಂದೋಬಸ್ತ್ ಮಾಡಲು ಪೊಲೀಸ್ ಇಲಾಖೆಗೆ ತಿಳಿಸಿದರು. ಈ ಸಭೆಯಲ್ಲಿ ಮುಖಂಡರಾದ ಸೋಮಶೇಖರ ಅಮಲಾಪೂರೆ, ರಾಮಕೃಷ್ಣ ಸಾಳೆ, ಮೋಹನ್ ಬಾಚಾ, ಮಾಹದೇವ ಚೌಡೆಕರ, ಶರಣಪ್ಪ ಹಾವಗೊಂಡ, ಪ್ರಶಾಂತ್ ಸಿಂದ್ರೆ, ಅಶೋಕ ಎಲಿ, ಬಸವರಾಜ ನೇಕಾರ, ಬಾಬುರಾವ್ ಕ್ಯಾಡೆ ಮತ್ತು ಇತರೆ ಸಮಾಜದ ಮುಖಂಡರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಏ,15ರವರೆಗೂ ಕಾಲುವೆಗೆ ನೀರು ಬಿಡಲು ಆಗ್ರಹಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ರೈತರು ಬಿತ್ತನೆ ಮಾಡಿದ ಕಟಾವು ಬರಬೇಕಾದರೆ ಇನ್ನೂ ಏ,15ರವರಗೂ ಅವಧಿ ಕಳೆಯುತ್ತದೆ, ಹಿಂಗಾರು ಬಿತ್ತನೆ ಪೈರು ರೈತರ ಪಾಲಿಗೆ ಜೀವಾಳವಾಗಿದೆ, ಸರ್ಕಾರ ಕೂಡಲೆ ನೀರು ಬಿಡುಗಡೆಯ ಮಾರ್ಗಸೂಚಿ ಪ್ರಕಟ ಮಾಡಬೆಕು ಎಂದು ಆಗ್ರಹಿಸಿ, ಕರ್ನಾಟಕ ರೈತ ಸಂಘ, ಹಸಿರು ಸೇನೆ ಯಾದಗಿರಿ ಜಿಲ್ಲಾಧ್ಯಕ್ಷರಾದ ಮಹೇಶಗೌಡ ಸುಬೇದಾರವರು ಒತ್ತಾಯ ಮಾಡಿದರು, ಅವರು ಭೀ,ಗುಡಿ ಕೆ,ಬಿ,ಜೆ,ಎನ್,ಎಲ್, ಕಚೇರಿ ಮುಂದೆ ಧರಣಿ ಸತ್ಯಾಗ್ರಹ ಹಮ್ಮಿಕೊಂಡು ಮಾತನಾಡಿದರು, ಬೇಳೆ ಕಳೆಯನ್ನು ಕಿತ್ತಿಕೊಂಡು ಪ್ರತಿಭಟನೆ ಮುಂದುವರೆಸಿದ್ದಾರೆ, ಈ ಪ್ರತಿಭಟನೆಯಲ್ಲಿ ಮಲ್ಲಣಗೌಡ ಪರಿವಾಣ, ಶಾಂತವೀರಪ್ಪಗೌಡ ಪಟೀಲ್, ಚಂದನಗೌಡ ಧರ್ಮಣ್ಣತಹಿಸಲ್ದಾರ, ಸೇರಿದಂತೆ ಅನೇಕ ಗ್ರಾಮಗಳಿಂದ ರೈತರು ಆಗಮಿಸಿದ್ದರು.

# ಬಿಜೆಪಿ ಮುಖಂಡರಿಂದಲೇ ನಿರಾಶ್ರೀತರಿಗೆ ಗೊಂದಲ ಸೃಷ್ಟಿ-ಸುರುಪುರಕರ್

ಮಲ್ಲಮ್ಮ ನುಡಿ ವಾರ್ತೆ



ಶಹಾಪುರ,ಬಿಜೆಪಿ ಮುಖಂಡರು ಸಣ್ಣ ಕೈಗಾರಿಕಾ ಸಾರ್ವಜನಿಕ ಉದ್ಯಮಗಳ ಮಂತ್ರಿ ಶರಣಬಸ್ಸಪ್ಪಗೌಡ ದರ್ಶನಾಪುರವರ ಅಭಿವೃದ್ದಿಯನ್ನು ಅರಗಿಸಿಕೊಳ್ಳದ ಹಿನ್ನಲೆಯಲ್ಲಿ, ನಗರದ ಪಿಲ್ಬರ್ ಬೆಡ್ ಕಾಲೋನಿ ಫಲಾನುಭವಿಗಳಿಗೆ ದಿಕ್ಕು ತಪ್ಪಿಸುವ ಉನ್ನಾರದಲ್ಲಿ ಹಕ್ಕುದೃಡಿಕರಣವನ್ನು ವಿಷಯನ್ನಾಗಿಸಿಕೊಂಡು ನಿರಾಶ್ರೀತರನ್ನು ಗೊಂದಲಕ್ಕೀಡು ಮಾಡುತ್ತಿದ್ದಾರೆ, ಎಂದು ನಗರ ಆಶ್ರೆಯ ಸಮಿತಿ ಅಧ್ಯಕ್ಷರಾದ ವಸಂತ ಸುರುಪುಕರ್,ವರು ಪ್ರತಿಕ್ರೀಯ ವ್ಯಕ್ತಪಡಿಸಿದ್ದಾರೆ, ಈ ಕುರಿತು ಪತ್ರಿಕೆ ಹೆಳಿಕೆಯೊಂದನ್ನು ನೀಡಿದ ಅವರು,ದೂರು ನೀಡಿದ್ದನ್ನು ಮನಗಂಡ ಪಲಾನುಭವಿಗಳು ಮಾನಸಿಕವಾಗಿ ಗೊಂದಲದಿಂದ ದೂರದಾರರ ಮನೆಯ ಹತ್ತಿರಕ್ಕೆ ಹೋದ ಫಲಾನುಭವಿಗಳಿಗೆ ರಾಜಕೀಯ ಬಣ್ಣ ಬಳಿವುದು ಸಮಂಜಸವಲ್ಲ, ಏಕಾಎಕಿ ಪತ್ರಿಕಾಗೋಷ್ಠಿ ಕರೆದು ಇಲ್ಲಸಲ್ಲದ ಮಾತುಗಳನ್ನಾಡಿದ್ದು ಖಂಡನೀಯವಾಗಿದೆ, ಸಚಿವರು ಅಭಿವೃದ್ದಿ ವಿಷಯದಲ್ಲಿ ರಾಜಕೀಯ ಮಾಡಿದವರಲ್ಲ ಎನ್ನುವದನ್ನು ಮನವರಿಕೆ ಮಾಡಿಕೊಳ್ಳಬೇಕಿದೆ, ನಿರಾಶ್ರೀತರನ್ನು ಎತ್ತಿಕಟ್ಟುವದನ್ನು ಬಿಜೆಪಿ ಮುಖಂಡರು ಬಿಡಬೇಕಾಗಿದೆ, ಎಂದ ಅವರು, ಬಿಜೆಪಿ ಪಕ್ಷದಲ್ಲೆ ನಿಯಂತ್ರಣವಿಲ್ಲದೆ ಕಮಲಗಾಳಿಯಲ್ಲಿ ತೇಲಾಡುತ್ತಿದೆ, ಜಿಲ್ಲಾ ಬಿಜೆಪಿ ಅಧ್ಯಕ್ಷ ಹುದ್ದೆಯನ್ನು ಬಿಟ್ಟು ಬಂದ ಬಿಜೆಪಿ ಮುಖಂಡರು ಅನಾವಶ್ಯಕವಾಗಿ ನಿರಾಶ್ರೀತ ಕುಟುಂಬಗಳನ್ನು ಒಕ್ಕಲೆಬ್ಬಿಸಬಾರದು ಎಂದು ವಸಂತ ಸುರುಪುರಕರ್ ವರು ಪ್ರತ್ತುರ ನೀಡಿದರು,ಯಾದಗಿರಿ ಜಿಲ್ಲಾ ಬಿಜೆಪಿ ಅಧ್ಯಕ್ಷರು ಹಣ ಪಡೆದುಕೊಂಡು ನಿವೇಶನ ಕೊಡುತ್ತಾರೆ ಎನ್ನುವ ಆರೋಪ ಹಾಸ್ಯಸ್ಪದವಾಗಿದೆ,ಸಮಗ್ರ ಜಿಲ್ಲೆಯ ಪ್ರಗತಿ ಕುರಿತು ಬಿಜೆಪಿ ಅಧ್ಯಕ್ಷರು ಸ್ಪಂಧನೆ ಮಾಡಲಿ ಸಣ್ಣ ರಾಜಕೀಯದಿಂದ ಮುಕ್ತರಾಗಬೆಕು ಎಂದು ವಸಂತ ಸುರುಪುಕರ್ ಬಿಜೆಪಿ ಮುಖಂಡರಿಗೆ ಮತ್ತು ಅಧ್ಯಕ್ಷರಿಗೆ ಪತ್ರಿಕೆ ಪ್ರಕಟಣೆಯ ಮುಖಾಂತರ ತಿರುಗೇಟು ನೀಡಿದರು, ಈ ಸಂಧರ್ಭದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಜರಿದ್ದರು,

# ಏ.10 ರವರೆಗೆ ಕಾಲುವೆಗೆ ನೀರು ಹರಿಸಿದಿದ್ದಲ್ಲಿ 60 ಸಾವಿರ ಹೆಕ್ಟರ್, ಬೇಳೆ ನಷ್ಟ, - ಸಲಾದಪುರ,



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಹಿಂಗಾರು ಬಿತ್ತನೆ ಮಾಡಿಕೊಂಡ ರೈತರು ಸೆಂಗಾ, ಭತ್ತ,ಸಜ್ಜೆ,ಮೆಣಸಿಕಾಯಿ ಸೇರಿದಂತೆ ಇತರೆ ವಾಣಿಜ್ಯ ಬೇಳೆಗಳನ್ನು ಬಿತ್ತನೆ ಮಾಡಿದ್ದು, ಏ,10 ರವರೆಗೆ ಕೃಷ್ಣ ಮೆಲ್ದಂಡೆ ಯೋಜನೆಯ ಕಾಲುವೆಗೆ ನೀರು ಹರಿಸದಿದ್ದಲ್ಲಿ ಜಿಲ್ಲೆಯಲ್ಲಿ ಒಟ್ಟು ಬೇಳೆ 60ಸಾವಿರ ಹೆಕ್ಟರ್ ಪ್ರದೇಶದಲ್ಲಿ ಬೆಳೆ ನಷ್ಟ ಉಂಟಾಗಿ, ಲಕ್ಷಾಂತರ ರೂ,ಗಳನ್ನು ಸಾಲ ಮಾಡಿಕೊಂಡ ರೈತರು ಸರಣಿ ಆತ್ಮಹತ್ಯೆಗಳ ಸರಮಾಲೆ ನಡೆದಿತು? ಎಂದು ರೈತ ನಾಯಕ ಕಾಂಗ್ರೆಸ್ ಮುಖಂಡ ಶರಣಪ್ಪ ಸಲಾದಪುರ ಆತಂಕ ವ್ಯಕ್ತಪಡಿಸಿದರು, ಅವರು, ಭೀ,ಗುಡಿ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಟಿನಡೆಸಿ ಮಾತನಾಡಿದರು, ಮುಂದುವರೆದು ಮಾತನಾಡಿದ ಅವರು, ರೈತರು ಬಿತ್ತನೆ ಮಾಡಿದ ಪ್ರತಿ ಬೆಳೆ ಪೈರು ಅವಧಿ ಮೂರವರೆ ತಿಂಗಳಿದ್ದು, ನೀರನ್ನೆ ನೆಂಬಿಕೊಂಡು ತಮ್ಮ ಹೊಲಗದ್ದೆಗಳನ್ನು ಬಿತ್ತನೆ ಮಾಡಿದ್ದಾರೆ, ಸರ್ಕಾರ ನೀರು ಬಿಡಲು ನಿರಾಕರಿಸಿದಲ್ಲಿ ರೈತರಿಗೆ ಒಟ್ಟು 10 ಸಾವಿರ ಕೊಟಿ ಮೌಲ್ಯದ ಬೆಳೆ ನಷ್ಟವಾಗಿ ಆತಂಕದಲ್ಲಿ ಕಾಲ ಕಳೆಯಬೇಕಾಗುತ್ತಿದೆ, ಎಂದು ಸಲಾದಪುರವರು.ರೈತರಿಗೆ ಮಾರಕವಾಗದಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಅವರು ಮನವಿ ಮಾಡಿಕೊಂಡರು,ಜಲಾಶೆಯ ಭರ್ತಿ ಎಂದು ಹೆಳಿಕೆ ನೀಡಿದ್ದ ಅಧಿಕಾರಿಗಳು ಇಂದು ನೆರೆಯ ತೆಲಂಗಾಣಕ್ಕೆ 2 ಟಿ,ಎಮ್,ಸಿ,ಎಂದು ನಾಲ್ಕಾರು ದಿನಗಳ ಕಾಲ ಅಂದಾಜು 10 ಟಿ,ಎಮ್,ಸಿ, ನೀರು ಬಿಟ್ಟಿದ್ದು ನಮ್ಮ ಬೆಳೆಗಳಿಗೆ ನೀರಿನ ಕೊರತೆಗೆ ಕಾರಣವಾಗಿದೆ,ಎಂದುತಿಳಸಿದರು,ಜಿ,ಪಂ, ಮಾಜಿ ಉಪಾಧ್ಯಕ್ಷರಾದ ಶಂಕ್ರಣ ವಣಿಕ್ಯಾಳರವರು ಮಾತನಾಡಿ,ರೈತರು ನಿಷೇದಿತವಾಗಿದ್ದರೂ ಭತ್ತ ಬೆಳೆದು ಆತಂಕದಲ್ಲಿದ್ದಾರೆ, ಮುಂದಿನ ದಿನಮಾನಗಳಲ್ಲಿ ಪರ್ಯಾವಾಗಿ ಆಲೋಕನಗಳಾಗಬೆಕಾಗಿದೆ, ಬೇಳೆ ಪರಿಹಾರ ಸೂಕ್ತವಾಗಿ ಹಂಚಿಕೆಯಾಗಬೇಕು, ಎಂದರು, ರೈತ ಮುಖಂಡರಾದ ಮಲ್ಲಣಗೌಡ ಪರಿವಾಣ ಸೇರಿದಂತೆ ಅನೇಕ ಹಳ್ಳಿಗಳಿಂದ ರೈತ ಮುಖಂಡರು ಭಾಗವಹಸಿದ್ದರು,

# ಐ.ಎ.ಎಸ್, ಕೆ.ಎ.ಎಸ್ ಪರೀಕ್ಷೆಗಳ ತರಬೇತಿಗೆ ಹೆಸರು ನೊಂದಾಯಿಸಿಕೊಳ್ಳಲು ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 27 ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಕೇಂದ್ರ ಲೋಕ ಸೇವಾ ಆಯೋಗದವರು ನಡೆಸಲಿರುವ ಐ.ಎ.ಎಸ್, ಕೆ.ಎ.ಎಸ್ ಪರೀಕ್ಷೆಗಳಿಗೆ ತರಬೇತಿ ಪಡೆಯಲು 2025ರ ಏಪ್ರಿಲ್ 2ರ ಬೆಳಗ್ಗೆ 10 ರಿಂದ ಸಂಜೆ 4.30 ಗಂಟೆಯ ಒಳಗೆ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು ಎಂದು ಮೈಸೂರು ಮುಕ್ತಗಂಗೋತ್ರಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ ಅವರು ತಿಳಿಸಿದ್ದಾರೆ.

# ಸಮಾಜದಲ್ಲಿ ಹಿರಿಯ ನಾಗರಿಕರ ರಕ್ಷಣೆ, ಹಕ್ಕುಗಳ ಬಗ್ಗೆ ಜಾಗೃತಿ, ನಗರ ಪ್ರದೇಶಗಳಲ್ಲಿ ಒತ್ತಡ ಜೀವನದ ನೆಪವೊಡ್ಡಿ ಪ್ರತಿ ಕುಟುಂಬಗಳಲ್ಲಿಯೂ ಹಿರಿಯ ನಾಗರಿಕರನ್ನು ಕಡೆಗಣಿಸುತ್ತಿರುವುದು ನಿಜಕ್ಕೂ ಶೋಚನಿಯ

ಮಲ್ಲಮ್ಮ ನುಡಿ ವಾರ್ತೆ




ಯಾದಗಿರಿ : ಮಾರ್ಚ್ 26–: ಇಂದಿನ ಕಾಲದಲ್ಲಿ ಹೆಚ್ಚಾಗಿ ನಗರ ಪ್ರದೇಶಗಳಲ್ಲಿ ಒತ್ತಡ ಜೀವನದ ನೆಪವೊಡ್ಡಿ ಪ್ರತಿ ಕುಟುಂಬಗಳಲ್ಲಿಯೂ ಹಿರಿಯ ನಾಗರಿಕರನ್ನು ಕಡೆಗಣಿಸುತ್ತಿರುವುದು ನಿಜಕ್ಕೂ ಶೋಚನಿಯ,ಇಳಿವಯಸ್ಸಿನ ವ್ಯಕ್ತಿಗಳಿಗೆ ಮನೆಯಲ್ಲಿನ ವಾತವರಣ ಉತ್ತಮ ಸ್ಥಿತಿಯಲ್ಲಿದ್ದಾಗ ಮಾತ್ರ ನೆಮ್ಮದಿಯ ಬದುಕು ಬದುಕಲು ಸಾಧ್ಯ ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರು ಗೌರವಾನ್ವಿತ ಶ್ರೀ ಮರಿಯಪ್ಪ ಅವರು ಹೇಳಿದರು.

ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಅಂಗವಿಕಲ ಮತ್ತು ಹಿರಿಯ ನಾಗರೀಕರ ಇಲಾಖೆ, ಸೇವಾ ಇಲಾಖೆ ಸಂಯುಕ್ತಾಶ್ರಯದಲ್ಲಿ 2025ರ ಮಾರ್ಚ್ ಇತ್ತೀಚಿನ ನಡೆದ ಹಿಂದಿ ಪ್ರಚಾರ ಸಭೆಯಲ್ಲಿ ಓಂಐಖಂದ ಹಿರಿಯ ನಾಗರಿಕರ ಕಾನೂನು ಸೇವೆಗಳ ಯೋಜನೆ 2016ರ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

NALSAದ ಹಿರಿಯ ನಾಗರಿಕರ ಕಾನೂನು ಸೇವೆಗಳ ಯೋಜನೆ 2016 ಇದು ಒಂದು ರಾಷ್ಟ್ರೀಯ ಯೋಜನೆಯಾಗಿದೆ, ನಮ್ಮ ಸಮಾಜದಲ್ಲಿ ತುಳಿತಕ್ಕೊಳಗಾದ ಜನರಿಗೆ ಕಾನೂನುನಾತ್ಮಕ ಹಕ್ಕುಗಳನ್ನು ಕೊಡಿಸಬಹುದು,ಸಮಾಜದಲ್ಲಿ ಹಿರಿಯ ನಾಗರಿಕರ ರಕ್ಷಣೆ ಮತ್ತು ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸಬೇಕಾಗಿದೆ, ಪ್ರಸ್ತುತ ದಿನಗಳಲ್ಲಿ ಪ್ರತಿಯೊಂದು ಮನೆಯಲ್ಲಿಯೂ ಹಿರಿಯ ನಾಗರಿಕರಿಗೆ ಪ್ರೀತಿ, ಸಹಾನುಭೂತಿ ಸಿಗುತ್ತಿಲ್ಲ, ಮನೆಯಲ್ಲಿ ಅಥವಾ ಸಾರ್ವಜನಿಕ ಸ್ಥಳದಲ್ಲಿ ವಯಸ್ಸಾದ ಹಿರಿಯ ನಾಗರಿಕರಿಗೆ ಸಹಾನುಭೂತಿ ಹಾಗೂ ಪ್ರೀತಿ ನೀಡಿದಲ್ಲಿ ನೆಮ್ಮದಿ ಜೀವನ ಮಾಡಲು ದೃಢರಾಗುತ್ತಾರೆ, ಎಲ್ಲಾ ಮನೆಗಳಲ್ಲೂ ಹಲವರು ಒತ್ತಡಗಳಿಂದ ತಂದೆ,ತಾಯಿ,ಅಜ್ಜ, ಅಜ್ಜಿ ಹಾಗೂ ಇತರೆ ಹಿರಿಯರ ಕಡಗಣನೆ ಸಾಮಾನ್ಯವಾಗಿದೆ, ಇದ–ರಿಂದ ಅವರು ಖಿನ್ನತೆಗೊಳಗಾಗಿ ಹಲವಾರು ಸಮಸ್ಯೆಗಳಿಗೀಡಾಗುತ್ತಿದ್ದಾರೆ, ಇವನ್ನು ದೂರ ಮಾಡುವ ಕೆಲಸ ಪ್ರತಿಯೊಬ್ಬರಿಂದ ನಡೆಯಬೇಕಿದೆ ಎಂದು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ದಿನಪತ್ರಿಕೆಗಳಲ್ಲಿ ಹಿರಿಯ ನಾಗರಿಕರು ತಬ್ಬಲಿಗಳಾಗುತ್ತಿರುವ ಬಗ್ಗೆ ಹಲವಾರು ಲೇಖನಗಳನ್ನು ನೊಡುತ್ತಿದ್ದೇವೆ, ಇಂದಿನ ಕಾಲದಲ್ಲಿ ಹೆಚ್ಚಾಗಿ ನಗರ ಪ್ರದೇಶಗಳಲ್ಲಿ ಒತ್ತಡ ಜೀವನದ ನೆಪವೊಡ್ಡಿ ಪ್ರತಿ ಕುಟುಂಬಗಳಲ್ಲಿಯೂ ಹಿರಿಯ ನಾಗರಿಕರನ್ನು ಕಡೆಗಣಿಸುತ್ತಿರುವುದು ನಿಜಕ್ಕೂ ಶೋಚನಿಯ, ಇಳಿವಯಸ್ಸಿನ ವ್ಯಕ್ತಿಗಳಿಗೆ ಮನೆಯಲ್ಲಿನ ವಾತವರಣ ಉತ್ತಮ ಸ್ಥಿತಿಯಲ್ಲಿದ್ದಾಗ ಮಾತ್ರ ನೆಮ್ಮದಿಯ ಬದುಕು ಬದುಕಲು ಸಾಧ್ಯ. ಈ ಸತ್ಯವನ್ನು ಪ್ರತಿ ಕುಟುಂಬದ ಸದಸ್ಯರು ಅರಿಯಬೇಕಿದೆ, ಹಿರಿಯ ನಾಗರಿಕರಿಗೆ ಮೂಲ ಸೌಲಭ್ಯಗಳಾದ ವೃದ್ಧಾ ಪ ವೇತನ, ಉಚಿತ ಚಿಕಿತ್ಸೆ ಉಚಿತ ಬಸ್ ಪ್ರಯಾಣ, ನ್ಯಾಯಾಲಯಗಳಲ್ಲಿ ಹಿರಿಯ ನಾಗರಿಕರ ವ್ಯಾಜ್ಯಗಳನ್ನು ಬೇಗನೆ ವಿಲೇವಾರಿ ಮಾಡಲು ಅವಕಾಶ ಮಾಡಲಾಗುತ್ತಿದೆ, ಹಿರಿಯ ನಾಗರಿಕರು ತಮ್ಮ ಹಕ್ಕುಗಳನ್ನು ಕಾನೂನುಬದ್ಧವಾಗಿ ಚಲಾಯಿಸಲು ಕಾನೂನು ಸೇವೆಗಳ ಪ್ರಾಧಿಕಾರ ಎಲ್ಲ ರೀತಿಯ ಸಹಾಯ ಸಹಕಾರ ನೀಡುತ್ತದೆ, ಅದರೆ ಸದುಪಯೋಗವನ್ನು ಪ್ರತಿಯೊಬ್ಬ ಹಿರಿಯರು ಪಡೆದುಕೊಳ್ಳಬೇಕು, ಅಲ್ಲದೇ ಪೋಷಕರು ಹಾಗೂ ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ 2007ರ ಕುರಿತು ವಿವರಿಸಿದರು ತಿಳಿಸಿದರು.

ಯಾದಗಿರಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಶರಣಪ್ಪ ಪಾಟೀಲ್ ಅವರು ಮಾತನಾಡಿ, ಮನುಷ್ಯನಿಗೆ ದಿನನಿತ್ಯ ಯೋಗ ಮಾಡುವುದರಿಂದ ಆರೋಗ್ಯ ಉತ್ತಮ ಸ್ಥಿತಿಯಲ್ಲಿ ಕಾಪಾಡಿಕೊಳ್ಳಬಹುದು, ಹಿರಿಯ ನಾಗರಿಕರಿಗೆ ಹಲವಾರು ಸೌಲಭ್ಯಗಳನ್ನು ಸರ್ಕಾರ ಜಾರಿ ಮಾಡಿದೆ ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮಕ್ಕೆ ಅಥಿತಿಯಾಗಿ ಆಗಮಿಸಿದ ಯಾದಗಿರಿ ಜಿಲ್ಲಾ ಸರಕಾರಿ ನಿವೃತ್ತ ಅಧಿಕಾರಿ ಸಿ.ಎಮ್ ಪಟ್ಟೆದಾರ ಅವರು ಮಾತನಾಡಿ, ಹಿರಿಯ ನಾಗರಿಕರಿಗೆ ಸರಕಾರ ಹಿರಿಯ ನಾಗರಿಕರಿಗೆ ಅನುಕೂಲವಾಗುವಂತೆ ಪ್ರತ್ಯೇಕ ಕಾನೂನು ರಚಿಸಿದ್ದು, ಈ ಕಾನೂನಿನ ಮುಖಾಂತರ ಹಲವು ಹಕ್ಕುಗಳನ್ನು ಹಿರಿಯ ನಾಗರಿಕರಿಗೆ ನೀಡಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮತ್ತೋರ್ವ ಅಥಿತಿಯಾಗಿ ಆಗಮಿಸಿದ ಯಾದಗಿರಿ ವೈದ್ಯರು ಡಾ.ಭಗವಂತ ಅನವಾರ ಅವರು ಮಾತನಾಡಿ, ಹಿರಿಯ ನಾಗರಿಕರು ದೈಹಿಕವಾಗಿ ಹಾಗೂ ಮಾನಸಿಕವಾಗಿ ಸದೃಢರಾಗಿರಬೇಕು ಹಾಗೂ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು, ಇದರ ಜೊತೆಗೆ ಇನ್ನಿತರ ಚಟುವಟಿಕೆಗಳನ್ನು ಅಂ–ದರೆ ಪುಸ್ತಕ ಓದುವುದು, ಸಂಗೀತಾ ಕೇಳುವುದು ಹಾಗೂ ಕಾರ್ಯಕ್ರಮಗಳಲ್ಲಿ ಭಾಗಿಯಾಗುವುದು ಮಾಡಬೇಕಾಗಿದೆ ಅಲ್ಲದೇ ನಿರಂತರ ಚಟುವಟಿಕೆಗಳಲ್ಲಿ ಭಾಗಿಯಾಗುವುದರಿಂದ ಮಾನಸಿಕ ಖಿನ್ನತೆ ದೂರ ತಳ್ಳಬಹುದಾಗಿದೆ ಅಲ್ಲದೇ ಆರೋಗ್ಯ ಪೂರ್ಣ ಜೀವನ ಮಾಡಬಹುದಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಯಾದಗಿರಿ ಶ್ರೀ ಸಾಯಿ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ ಶ್ರೀ ಅಜೀತ್ ಜೈನ್, ಹಿರಿಯ ನಾಗರಿಕರು, ವಿಕಲಚೇತನರು, ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಪತ್ರಕರ್ತರಿಗೆ ಮಾಧ್ಯಮ ಕಿಟ್ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾ.26: 2024–25 ನೇ ಸಾಲಿನ ಪರಿಶಿಷ್ಟ ಜಾತಿ ವಿಶೇಷ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಡಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಮಾಧ್ಯಮ ಮಾನ್ಯತೆ ಪಡೆದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಪತ್ರಕರ್ತರಿಗೆ ಮಾಧ್ಯಮ ಕಿಟ್ ಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಅಧಿಕೃತ ನಿವಾಸ ಕಾವೇರಿಯಲ್ಲಿ ಸಾಂಕೇತಿಕವಾಗಿ ವಿತರಿಸಿದರು.

ಮಾಧ್ಯಮ ಪ್ರತಿನಿಧಿಗಳ ವೃತ್ತಿಪರ ಚಟುವಟಿಕೆಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ರಾಜ್ಯದ ವಿವಿಧ ಜಿಲ್ಲೆಗಳ 168 ಪರಿಶಿಷ್ಟ ಜಾತಿ ಹಾಗೂ 32 ಪರಿಶಿಷ್ಟ ಪಂಗಡದ ಪತ್ರಕರ್ತರು ಸೇರಿ ಒಟ್ಟು 200 ಜನ ಪತ್ರಕರ್ತರು ಈ ಯೋಜನೆಯಡಿ ಲ್ಯಾಪ್‌ಟಾಪ್ ಹಾಗೂ ಕ್ಯಾಮೆರಾ ಒಳಗೊಂಡ ಮಾಧ್ಯಮ ಕಿಟ್ ಪಡೆಯುತ್ತಿದ್ದಾರೆ.

ಅರಣ್ಯ ಸಚಿವ ಈಶ್ವರ್ ಖಂಡ್ರೆ,ಶಾಸಕ ಹಾಗೂ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಎಂ.ನರೇಂದ್ರ ಸ್ವಾಮಿ,ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್,ವಾರ್ತಾ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಬಿ.ಬಿ.ಕಾವೇರಿ,ಆಯುಕ್ತ ಹೇಮಂತ್ ಎಂ.ನಿಂಬಾಳ್ಕರ್ ಸೇರಿದಂತೆ ಹಲವರು ಇದ್ದರು.

# ಮಾ.28 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.27–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2ರ ವ್ಯಾಪ್ತಿಯಲ್ಲಿ ವಿದ್ಯುತ್ ಕಂಬ ಅಳವಡಿಸುವ ಕಾರ್ಯ ಕೈಗೊಳ್ಳುತ್ತಿರುವುರಿಂದ ಮಾ.28 ರಂದು ಮಧ್ಯಾಹ್ನ 02 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ನಗರದ ಫೀಡರ್–02 ರ ವ್ಯಾಪ್ತಿಯ ಗಾಂಧಿನಗರ 1 ನೇ ಕ್ರಾಸ್ ಮತ್ತು 2ನೇ ಕ್ರಾಸ್ ಏರಿಯಾಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.2 ರಂದು ಪೊಲೀಸ್ ಧ್ವಜ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾರ್ಚ್ 27–ಯಾದಗಿರಿ ಜಿಲ್ಲಾ ಪೊಲೀಸ್ ವತಿಯಿಂದ ಪೊಲೀಸ್ ಧ್ವಜ ದಿನಾಚರಣೆ ಯಾದಗಿರಿ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ 2025ರ ಏಪ್ರಿಲ್ 2ರ ಬುಧವಾರ ರಂದು ಬೆಳಿಗ್ಗೆ 8 ಗಂಟೆಗೆ ಆಯೋಜಿಸಲಾಗಿದೆ.

ಕಾರ್ಯಕ್ರಮದ ವಿವರ : ಬೆಳಿಗ್ಗೆ 8 ಗಂಟೆಯ ಮುಖ್ಯ ಅತಿಥಿಗಳ ಆಗಮನ, ಗೌರವ ವಂದನೆ ಸ್ವೀಕಾರ, ಕವಾಯತು ಪರಿವೀಕ್ಷಣೆ, ಪಥ ಸಂಚಲನ, ಸ್ವಾಗತ ಭಾಷಣೆ, ಪೊಲೀಸ್ ಕಲ್ಯಾಣ ಚಟುವಟಿಕೆಗಳ ವರದಿ, ಸೇವಾ ನಿವೃತ್ತರಿಗೆ ಗೌರವ ಸಮರ್ಪಣೆ, ವಂದನಾರ್ಪಣೆ ನೆರವೇರಿಸುವರು.

ಕೆಂಭಾವಿ ಪೊಲೀಸ್ ಠಾಣೆ ನಿವೃತ್ತ ಆರಕ್ಷಕ ಉಪ ನಿರೀಕ್ಷಕರು ಶ್ರೀ ವೆಂಕಣ್ಣ ಶಹಾಪೂರಕರ್ ಅವರು ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಘಟಕ ಡಿ.ಸಿ.ಆರ್.ಬಿ ನಿವೃತ್ತ ಪಿ.ಎಸ್.ಐ ಶ್ರೀ ಚಂದ್ರಶೇಖರ, ಯಾದಗಿರಿ ನಗರ ಠಾಣೆ ನಿವೃತ್ತ ಎ.ಎಸ್.ಐ ಶ್ರೀ ಹಸನ್ ಪಟೇಲ್, ಗುರುಮಠಕಲ್ ಠಾಣೆ ನಿವೃತ್ತ ಎ.ಎಸ್.ಐ ಶ್ರೀ ತಿಪ್ಪಣ್ಣ, ಯಾದಗಿರಿ ಸಂಚಾರ ಠಾಣೆ ನಿವೃತ್ತ ಎ.ಎಸ್.ಐ ಶ್ರೀ ಕಲ್ಯಾಣಿ, ಘಟಕ ಡಿ.ಎ.ಆರ್ ನಿವೃತ್ತ ಎ.ಪಿ.ಸಿ–164 ಶ್ರೀ ನಿಂಗಣ್ಣ, ಯಾದಗಿರಿ ನಿವೃತ್ತ ಎಫ್.ಡಿ.ಎ ಶ್ರೀ ಬಸವರಾಜ ಸ್ಮರಣೀಯ ಸೇವಾ ಗೌರವ ಸಮರ್ಪಿತರಾಗಿ ಆಗಮಿಸುವರು.

ಕಾರ್ಯಕ್ರಮಕ್ಕೆ ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್, ಯಾದಗಿರಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಧರಣೇಶ ಎಸ್.ಪಿ ಅವರು ಸರ್ವರಿಗೂ ಹಾರ್ದಿಕ ಸುಸ್ವಾಗತವನ್ನು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಪ್ರಾದೇಶಿಕ ಮಟ್ಟದ ಬೃಹತ್ ಉದ್ಯೋಗ ಮೇಳಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 27– ಪ್ರಾದೇಶಿಕಮಟ್ಟದಬೃಹತ್ ಉದ್ಯೋಗ ಮೇಳದಲ್ಲಿ ಹೆಸರು ನೋಂದಣಿ ಮಾಡಿಕೊಂಡು ಉದ್ಯೋಗ ಸೌಲಭ್ಯ ಪಡೆದುಕೊಳ್ಳಬೇಕು ಎಂದು ಯಾದಗಿರಿ ಜಿಲ್ಲಾ ಕೌಶಲ್ಯ ಮಿಷನ್ ಜಿಲ್ಲಾ ಕೌಶಲ್ಯಾಭಿವೃದ್ಧಿ ಹಾಗೂ ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರು ತಿಳಿಸಿದ್ದಾರೆ.

ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಬೆಂಗಳೂರು ವತಿಯಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಯುವಜನತೆಗಾಗಿ ಕಲಬುರಿಗಿಯಲ್ಲಿ "ಪ್ರಾದೇಶಿಕ ಮಟ್ಟದ ಬೃಹತ್ ಉದ್ಯೋಗ ಮೇಳ–2025" ಅನ್ನು ಏಪ್ರಿಲ್–2025ರ ಮಾಹೆಯಲ್ಲಿ ಆಯೋಜಿಸಲು ಉದ್ದೇಶಿಸಲಾಗಿರುತ್ತದೆ. ಅದರಂತೆ ಕಲ್ಯಾಣ ಕರ್ನಾಟಕ ಅಧಿನದಲ್ಲಿ ಬರುವ 07 ಜಿಲ್ಲೆಗಳು ಹಾಗೂ ಇತರೆ ಜಿಲ್ಲೆಗಳಿಂದಲೂ ಅಂದಾಜು 20,000 ಕ್ಕೂ ಹೆಚ್ಚು ಉದ್ಯೋಗಾಕಾಂಕ್ಷಿಗಳು ಹಾಗೂ 200ಕ್ಕೂ ಹೆಚ್ಚು ಉದ್ಯೋಗದಾತರು ಭಾಗವಹಿಸುವ ನಿರೀಕ್ಷೆ ಇರುತ್ತದೆ.

ಯಾದಗಿರಿ ಜಿಲ್ಲೆಯ ಎಲ್ಲಾ ತಾಲೂಕಿನ ಎಸ್.ಎಸ್.ಎಲ್.ಸಿ, ಐ.ಟಿ.ಐ, ಡಿಪ್ಲೋಮಾ, ಯಾವುದೇ ಪದವಿ ಹಾಗೂ ಯಾವುದೇ ಸ್ನಾತಕೋತ್ತರ ಪದವಿಗಳನ್ನು ಪೂರ್ಣಗೊಳಿಸಿದ ನಿರುದ್ಯೋಗ ಯುವಕ ಯುವತಿಯರಿಗೆ ವಿವಿಧ ಪ್ರತಿಷ್ಠಿತ ಕಂಪನಿ, ಸಂಸ್ಥೆಗಳಲ್ಲಿ ಉದ್ಯೋಗ ಪಡೆಯಲು ಇದೊಂದು ಸುವರ್ಣ ಅವಕಾಶವಾಗಿರುತ್ತದೆ, ಪ್ರತಿಯೊಬ್ಬರು ವೆಬ್‌ಸೈಟ್ ತಿತಿತಿ. ಇಟಟಟಭಿಂಟಿಟಜಭಿಣ.ಇಚಿಜ್ಞ– ಚಿಟಇಚಿಡಿ.ಭಿಂಟ ದಲ್ಲಿ ತಮ್ಮ ಹೆಸರನ್ನು ನೋಂದಣಿ ಮಾಡಿಕೊಂಡು, "ಪ್ರಾದೇಶಿಕ ಮಟ್ಟದ ಬೃಹತ್ ಉದ್ಯೋಗ ಮೇಳದಲ್ಲಿ ಭಾಗವಹಿಸಿ, ಉದ್ಯೋಗ ಮೇಳದ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯ ಮಿಷನ್ ಸಹಾಯಕ ನಿರ್ದೇಶಕರು ಶೀ ಬಸಪ್ಪ ತಳವಡಿ ದೂ.ಸಂ.988007269ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೇಡಂ: ಪ್ರಧಾನಮಂತ್ರಿ ಇಂಟರ್ನ್‌ಶಿಫ್ ಯೋಜನೆಯಡಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಮಾ.27. –ಪ್ರಸಕ್ತ 2024–25ನೇ ಸಾಲಿನ ಪ್ರಧಾನಮಂತ್ರಿ ಇಂಟರ್ನ್‌ಶಿಫ್ ಯೋಜನೆ (Prime Minister,s Internship Scheme in Top Companies)ಯಡಿ ಕೌಶಲ್ಯಾಭಿವೃದ್ಧಿ ತರಬೇತಿ ಪಡೆಯಲು ಆಸಕ್ತಿಯುಳ್ಳ ಸೇಡಂ ಪಟ್ಟಣದ ಯುವಕ, ಯುವತಿಯರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸೇಡಂ ಪುರಸಭೆ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಅಭ್ಯರ್ಥಿಗಳ ವಯೋಮಿತಿ 21 ರಿಂದ 24 ವರ್ಷದೊಳಗಿರಬೇಕು. ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ, ಐಟಿಐ, ಪಿಯುಸಿ, ಬಿ.ಎ, ಬಿಎಸ್ಸಿ, ಬಿಕಾಂ, ಬಿಸಿಎ, ಬಿಬಿಎ, ಬಿ.ಫಾರ್ಮ, ಮತ್ತಿತರ ವಿದ್ಯಾರ್ಹತೆ ಹೊಂದಿರಬೇಕು.

ಉನ್ನತಮಟ್ಟದ 500 ಕಂಪನಿಗಳಲ್ಲಿ ಒಂದು ಕೋಟಿ ಯುವಕರಿಗೆ ಇಂಟರ್ನ್‌ಶಿಫ್ (ಖಟಣಜಡಿಟ–ಖಿ) ಮೂಲಕ ಕೌಶಲ್ಯವನ್ನು ವೃದ್ಧಿಸಲು ಯುವಕ/ಯುವತಿಯರು ಅವಶ್ಯಕ ದಾಖಲಾತಿಯೊಂದಿಗೆ 2025ರ ಮಾರ್ಚ್ 31ರೊಳಗಾಗಿ ರೊಳಗಾಗಿ ತಿತಿತಿ.ಟಿಟುಟಿ–ಣಜಡಿಟಿಖಿ.ಟಭಿಜ.ರಠತ. ಬಟಿ/ಟಠರುಟಿ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಬೇಕು. ಅರ್ಹತೆ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಸೇಡಂ ಪುರಸಭೆ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಡಾ.ಬಾಬು ಜಗಜೀವನರಾಂ, ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ವಿಜೃಂಭಣೆಯಿಂದ ಆಚರಣೆ – ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್

ಕಲಬುರಗಿ.ಮಾ.26–ಹಸಿರು ಕ್ರಾಂತಿಯ ಹರಿಕಾರ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನರಾಂ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತ್ಯೋತ್ಸವನ್ನು ಕಲಬುರಗಿ ನಗರ ಹಾಗೂ ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಕ್ರಮವಾಗಿ 2025ರ ಏಪ್ರಿಲ್ 5 ಮತ್ತು 14 ರಂದು ವಿಜೃಂಭಣೆಯಿಂದ ಆಚರಿಸುವಂತೆ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ತಿಳಿಸಿದರು.ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಸದರಿ ಜಯಂತಿಗಳ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡುತ್ತಾ, ಶಾಲಾ ಕಾಲೇಜುಗಳಲ್ಲಿ ಕಚೇರಿಗಳಲ್ಲಿ ನಾಡಕಚೇರಿಗೆ ತಾಲೂಕು ಪಂಚಾಯತ್, ಗ್ರಾಮಪಂಚಾಯತ್‌ಗಳಲ್ಲಿ ಜಯಂತಿಗಳ ಆಚರಣೆ ಮಾಡಬೇಕೆಂದು ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.ಡಾ.ಬಾಬುಜಗಜೀವನರಾಂ ಅವರ 118ನೇ ಜಯಂತ್ಯೋತ್ಸವದ ಅಂಗವಾಗಿ ಏಪ್ರಿಲ್ 5 ರಂದು ಬೆಳಿಗ್ಗೆ 9 ಗಂಟೆಗೆ ಟೌನ್ ಹಾಲ್‌ನಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ತಂದ ನಂತರ ಮೆರವಣಿಗೆ ಮಾಡಬಹುದು ಎಂದರು.ಡಾ. ಬಾಬಾಸಾಹೇಬ ಅಂಬೇಡ್ಕರ್ 134ನೇ ಜಯಂತ್ಯೋತ್ಸವದ ಅಂಗವಾಗಿ ಏಪ್ರಿಲ್ 14ರಂದು ಬೆಳಿಗ್ಗೆ 8.30 ಗಂಟೆಗೆ ಜಗತ್ ವೃತ್ತದ ಬಳಿ ಇರುವ ಡಾ. ಬಾಬಾಸಾಹೇಬ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು ಎಂದರು.ಮೆರಣಿಗೆ ಎಲ್ಲ ರೀತಿಯ ಸಕಲಸಿದ್ಧತೆಗಳನ್ನು ಮಾಡಲಾಗುವುದು ಎಂದು ಅವರು ಹೇಳಿದರು. ಮೆರವಣೆಗೆ ಸಮಯದಲ್ಲಿ ಪೋಲಿಸ್ ಬಂದೋಬಸ್ತ್ ನೀಡಲಾಗುವುದು ಹೆಣ್ಣು ಮಕ್ಕಳು ಮೆರವಣೆಗೆಯಲ್ಲಿ ಭಾಗವಹಿಸುತ್ತಿದ್ದು, ಅವರಿಗೆ ಸಹ ಯಾವುದೇ ತೊಂದರೆ ಆಗದಂತೆ ಪೋಲಿಸ್ ತಂಡಗಳನ್ನು ರಚಿಸಲಾಗುವುದು ಎಂದರು. ಸಮಾಜದ ಮುಖಂಡರ ಮನವಿ ಮಾಡಿದಾಗ ಮದ್ಯಪಾನ ಅಂಗಡಿಗಳ ಮುಚ್ಚಲು ಕ್ರಮಕೈಗೊಳ್ಳಲಾಗುವುದು ಹಾಗೂ ಪ್ರಬಂಧ ಸ್ಪರ್ಧೆಗಳು, ಭಾಷಣ ಸ್ಪರ್ಧೆಗಳು ರಂಗೋಲಿ ಸ್ಪರ್ಧೆಗಳು ಕ್ರೀಡಾಕೂಟಗಳಲ್ಲಿ ಸಹಕಾರ ನೀಡಲಾಗುವುದು ಎಂದರು

ಈ ಎರಡು ಜಯಂತಿಯಗಳ ಆಚರಣೆಗೆ ಸಂಬಂಧಿಸಿದಂತೆ ಎಲ್ಲಾ ಕೆಲಸ–ಕಾರ್ಯಗಳನ್ನು ಕಟ್ಟುನಿಟ್ಟಾಗಿ ತಪ್ಪದೇ ಜವಾಬ್ದಾರಿಯಿಂದ ಕೈಗೊಳ್ಳಬೇಕು. ಹಾಗೂ ಜಯಂತಿ ಆಚರಣೆ ಸಂದರ್ಭದಲ್ಲಿ ಪ್ರತಿ ವರ್ಷದಂತೆ ಮಹಾನಗರ ಪಾಲಿಕೆ ವತಿಯಿಂದ ನಗರದ ಪ್ರಮುಖ ಸ್ಥಳಗಳಲ್ಲಿ ದೀಪಾಲಂಕಾರ, ಸೇರಿದಂತೆ ಎಲ್ಲಾ ರೀತಿಯ ಸೌಕರ್ಯವನ್ನು ಯಾವುದೇ ತೊಂದರೆ ಬಾರದಂತೆ ನೋಡಿಕೊಳ್ಳುವಂತೆ ತಿಳಿಸಿದರು.

ಅದೇ ರೀತಿ ಕುಡಿಯುವ ನೀರು, ವಿದ್ಯುತ್ ಅಲಂಕಾರ, ಧ್ವನಿವರ್ಧಕ, ಸ್ವಚ್ಛತೆ ಮತ್ತು ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಎರಡು ಸಮಾಜದ ಮುಖಂಡರು ತಮ್ಮ ಅನಿಸಿಕೆಗಳು ಜಿಲ್ಲಾಧಿಕಾರಿಗಳು ಸ್ಪಂಧಿಸುವುದಾಗಿ ತಿಳಿಸಿದರು.

ಮಹಾನಗರ ಪಾಲಿಕೆಯ ಆಯುಕ್ತ ಅವಿನಾಶ ಶಿಂಧೆ, ಡಿಸಿಪಿ ಕನಿಕಾ ಸಿಕ್ರಿವಾಲ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹೆಚ್ಚುವರಿ ಪೋಲೀಸ್ ವರಿಷ್ಠಾಧಿಕಾರಿ ಮಹೇಶ ಮೆಗಣ್ಣನ್ವರ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ,.ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಎಂ. ಅಲ್ಲಾಭಕ್ಷ, ಡಾ. ಬಾಬು ಜಗಜೀವನರಾಂ ಜಯಂತ್ಯೋತ್ಸವ ಸಮಿತಿಯ ಅಧ್ಯಕ್ಷರು ಕಲಬುರ್ಗಿ, ಡಾ.ಬಿ.ಆರ್. ಅಂಬೇಡ್ಕರ್ ಜಯಂತೋತ್ಸವ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಹಿರಿಯರಾದ ಅಂಬರಾಯ ಅಷ್ಟಗಿ ರಮೇಶ ಲಂಡನಕರ್, ಎಸ್/ಎಸ್.ಟಿ. ನೌಕರರ ಸಂಘದ ಅಧ್ಯಕ್ಷ ಮಹೇಶ ಹುಬಳಿ ಸುಖೇಂದ್ರ ತಾವಡೆ, ಸುರೇಶ್ ಹಾದಿಮನಿ ಸೇರಿದಂತೆ ಸಮಾಜದ ಇನ್ನಿತರ ಮುಖಂಡರು ಹಾಗೂ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

# ಸವಾಲಿನ ವಿರುದ್ಧವೇ ಕೆಲಸ ಮಾಡುವ ಛಾತಿ ಬೆಳೆಸಿಕೊಳ್ಳಬೇಕು: ಡಾ.ವಿಜಯಾ

## ಮನೆಯಂಗಳದಲ್ಲಿ ಕಾರ್ಯಕ್ರಮದಲ್ಲಿ ಡಾ.ವಿಜಯಾಗೆ ಕೆಯುಡಬ್ಲ್ಯೂಜೆ ಗೌರವ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಸಾಧಿಸುವ ಛಲ, ವೃತ್ತಿ ಬದ್ಧತೆ ಇದ್ದರೆ ಪತ್ರಕರ್ತರಿಗೆ ವಯಸ್ಸು ಅಡ್ಡಿಯಾಗುವುದಿಲ್ಲ. ಸವಾಲಿನ ವಿರುದ್ಧವೇ ಕೆಲಸ ಮಾಡುವ ವೃತ್ತಿ ಬದ್ಧತೆಯ ಛಾತಿ ರೂಢಿಸಿಕೊಳ್ಳಬೇಕು ಎಂದು ಹಿರಿಯ ಪತ್ರಕರ್ತೆ, ರಂಗಕರ್ಮಿ, ಸಾಹಿತಿ ಡಾ.ವಿಜಯಾ ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ಮಹಿಳಾ ದಿನಾಚರಣೆ ಪ್ರಯುಕ್ತ ಮತ್ತು ವಿಶ್ವ ರಂಗಭೂಮಿದಿನಾಚರಣೆಸಂದರ್ಭದಲ್ಲಿ ಏರ್ಪಡಿಸಿದ್ದ ಮನೆಯಂಗಳದಲ್ಲಿ ಮನದುಂಬಿನಮನಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಇತ್ತೀಚೆಗಿನ ದಿನಗಳಲ್ಲಿ ಪತ್ರಿಕಾ ವೃತ್ತಿಯಲ್ಲಿ ಮಹಿಳೆಯರ ಸಂಖ್ಯೆ ಹೆಚ್ಚಾಗುತ್ತಿರುವುದು ನಿಜಕ್ಕೂ ಉತ್ತಮ ಬೆಳವಣಿಗೆ ಎಂದು ಹೇಳಿದರು.

ಪತ್ರಿಕೋದ್ಯಮದ ಜೊತೆಗೆ ಅನ್ಯಾಯಗಳ ವಿರುದ್ಧ ತಾನು ಸಾಕಷ್ಟು ಹೋರಾಟ ಮಾಡಿಕೊಂಡ ಕಾರಣಕ್ಕೆ ಸಮಾಜದ ವ್ಯವಸ್ಥೆಯ ಬಗ್ಗೆ ಪತ್ರಕರ್ತೆಯಾಗಿ ತನಗೆ ಸಂಪೂರ್ಣ ಅರಿವಿದೆ. ಕೆಲವು ಪತ್ರಿಕಾ ಸಂಸ್ಥೆಗಳು ಇತ್ತೀಚೆಗೆ ಕಾರ್ಪೋರೇಟ್ ವ್ಯವಸ್ಥೆಯಿಂದ ಕೂಡಿವೆ, ಅವು ಆ ಯೋಚನೆಯಿಂದ ಹೊರಬಂದು ಪತ್ರಕರ್ತರ ಸ್ವಾತಂತ್ರ್ಯಕ್ಕೆಧಕ್ಕೆಯಾಗದ ರೀತಿಯಲ್ಲಿ ಪತ್ರಕರ್ತರನ್ನು ರೂಪಿಸಿ, ನಡೆಸಿಕೊಳ್ಳಬೇಕು ಎಂದರು.

ಐಟಿಐ ಸಂಸ್ಥೆಯಿಂದ ಸುದ್ದಿಮನೆಗೆ ಪಯಣ:

ದಾವಣಗೆರೆ ಮೂಲದ ಡಾ. ವಿಜಯಾ ಅವರು ಬೆಂಗಳೂರಿನ ಐಟಿಐ ಸಂಸ್ಥೆಯಲ್ಲಿ ವೃತ್ತಿರಂಗಕ್ಕೆ ಪ್ರವೇಶಿಸಿದವರು. ಅಲ್ಲಿ ಆರಂಭವಾದ ಅವರ ಬರವಣಿಗೆಯ ಹವ್ಯಾಸವು ನಾಡಿನ ಹಿರಿಯ ಮತ್ತು ಪ್ರಶಸ್ತಿ ವಿಜೇತ ಪತ್ರಕರ್ತೆಯ ಸಾಲಿನಲ್ಲಿ ತಂದು ನಿಲ್ಲಿಸಿದೆ. ಪ್ರಜಾಮತ ಪತ್ರಿಕೆಯಲ್ಲಿ ಆರಂಭವಾದ ಅವರ ಬರಹಗಳು ಅದೇ ಸಂಸ್ಥೆಯ ಮಯೂರ, ಉದಯವಾಣಿ ಬಳಗದ ತುಷಾರ, ರೂಪತಾರ, ಮಲ್ಲಿಗೆ ಮುಂತಾದ ಪತ್ರಿಕೆಗಳ ಅಂಕಣಕಾರರನ್ನಾಗಿಸಿತು ಹಾಗೂ ಆ ಪತ್ರಿಕೆಗಳ ಸಂಪಾದಕ ಸ್ಥಾನವನ್ನೂ ದೊರಕಿಸಿಕೊಟ್ಟಿತು. ಮಲ್ಲಿಗೆ ಪತ್ರಿಕೆ ಹೆಚ್ಚಿನ ಜನಪ್ರಿಯತೆ ತಂದುಕೊಟ್ಟಿತು. ಆರಂಭದಲ್ಲಿ ಗೋಕಾಕ್ ಚಳುವಳಿಯಲ್ಲಿ ಕಾರಾಗೃಹವಾಸವನ್ನೂ ಅನುಭವಿಸಿರುವ ಡಾ. ವಿಜಯ ಅವರ ಆರಂಭಿಕ ಚಟುವಟಿಕೆಗಳು ಹೋರಾಟ ಮನೋಭಾವಕ್ಕೆ ಮಾತ್ರ ಸೀಮಿತವಾಗಿದ್ದರೂ, ಕ್ರಮೇಣ ರಂಗಭೂಮಿಯತ್ತ ಅವರು ಮನಸ್ಸನ್ನು ಹೊರಳಿಸಿ ಬೀದಿ ನಾಟಕ ಎಂಬ ಕಲ್ಪನೆಯನ್ನು ಹುಟ್ಟುಹಾಕಿ, ಬಳಿಕ ಸಾವಿರಾರು ಸಿನಿಮಾ ಲೇಖನಗಳನ್ನು ಬರೆದು ಕನ್ನಡದ ಖ್ಯಾತ ಸಿನಿಮಾ ಪತ್ರಕರ್ತೆ ಎಂದೆನಿಸಿಕೊಂಡವರು. ಕೇಂದ್ರ ಸಾಹಿತ್ಯ ಅಕಾಡೆಮಿ ಸೇರಿದಂತೆ ಹತ್ತಾರು ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿರುವ ಅವರು, 'ವಿಜಯಮ್ಮ' ಎಂದೇ ಪತ್ರಕರ್ತರ ವಲಯದಲ್ಲಿ ಗುರುತಿಸಿಕೊಂಡಿದ್ದಾರೆ. ತಮಗೆ ದೊರೆತ ಪ್ರಶಸ್ತಿಗಳ ಜೊತೆ ಬಂದ ನಗದು ಬಹುಮಾನಗಳನ್ನೆಲ್ಲಾ ಮರಳಿ ನೀಡಿದವರು, ಇಲ್ಲವೇ ಸಾಮಾಜಿಕ ಸೇವಾ ಕಾರ್ಯಕ್ಕೆ ವಿನಿಯೋಗಿಸಿಕೊಂಡವರು. ಯಾರ ಹಂಗಿನಲ್ಲೂ ಇರದೆ, ಸ್ವಾಭಿಮಾನಿ ಗುಣವನ್ನು ಮೈಗೂಡಿಸಿಕೊಂಡ ಸ್ವಭಾವ ಅವರದ್ದಾಗಿದೆ.

ಅನನ್ಯವಾದ ಸೇವೆಯ ಅಮ್ಮ:

ಇದೇ ಸಂದರ್ಭದಲ್ಲಿ ಡಾ. ವಿಜಯಾ ಅವರ ಸಾಧನೆಯ ಬಗ್ಗೆ ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ತಮ್ಮ ಸುದೀರ್ಘ ಅವಧಿಯ ವೃತ್ತಿ ಜೀವನದ ಅವರ ಕೊಡುಗೆ ಪತ್ರಿಕಾ ರಂಗಕ್ಕೆ ನಿಜಕ್ಕೂ ಬಹುದೊಡ್ಡ ಕೊಡುಗೆ. 90ರ ದಶಕದ ಬಾಗೂರು ಚಳುವಳಿಗಾರರಿಗೂ ಅವರು ಸಹಕಾರ ನೀಡಿದ ದೂರದೃಷ್ಟಿಯ ಚಿಂತನೆಯ ಸಹಕಾರವೂ ಸ್ಮರಣೀಯ. ಅವರ ಆದರ್ಶ ಇಂದಿನ ಯುವ ಪತ್ರಕರ್ತರಿಗೆ ನಿಜಕ್ಕೂ ಮಾದರಿ ಎಂದರು. ಪತ್ರಕರ್ತೆಯಾಗಿ, ಸಂಘಟಕಿಯಾಗಿ, ಸಾಹಿತಿಯಾಗಿ, ರಂಗಕರ್ಮಿಯಾಗಿ ವಿಜಯಮ್ಮ ಅವರ ಸೇವೆ ಅನನ್ಯ ಎಂದು ಶ್ಲಾಘಿಸಿದರು.

ಅಮ್ಮನಭಾವ ತುಂಬಿದ ವಿಜಯಮ್ಮ:

ಹಿರಿಯ ಪತ್ರಕರ್ತ ಜಿ.ಎನ್.ಮೋಹನ್ ಮಾತನಾಡಿ, ಸಮಾಜದಲ್ಲಿ ಸಾಮಾಜಿಕ ಬದ್ಧತೆ ಏನೆಂಬುದನ್ನು ತೋರಿಸಿದ ದಿಟ್ಟ ಪತ್ರಕರ್ತೆ ಡಾ. ವಿಜಯಾ ಅವರು ಎಂದು ಉದಾಹರಣೆ ಸಹಿತ ಶ್ಲಾಘಿಸಿದರು. ಒಬ್ಬೊಬ್ಬರನ್ನು ಒಂದೊಂದು ರೀತಿಯಲ್ಲಿ ಪ್ರಭಾವಿಸಿ, ಅವರಿಗೆ ನೆರವಾಗಿರುವ ಕಾರಣಕ್ಕೆ ಅವರಿಗೆ ಅಮ್ಮ ಪಟ್ಟ ದೊರೆತಿ–ದೆ. ಸಮಾಜಕ್ಕೆ ಮೊದಲು ಬೀದಿ ನಾಟಕಗಳ ಪರಿಕಲ್ಪನೆಯನ್ನು ಬಿತ್ತಿದ್ದನ್ನು ಮರೆಯುವಂತಿಲ್ಲ. ಪ್ರತಿಯೊಂದು ಸಮಸ್ಯೆಗೂ ಸ್ಪಂದಿಸುವ ಅವರ ಮಾತೃಹೃದಯ ಇಡೀ ಸಮಾಜಕ್ಕೆ ಮಾದರಿ ಎಂದರು.

ಹೊಸಭಾಷ್ಯ ಬರೆದರು:

ಚಲನಚಿತ್ರ ಪತ್ರಿಕೋದ್ಯಮದಲ್ಲಿ ಹೊಸ ಭಾಷ್ಯ ಬರೆದ ಹೆಗ್ಗಳಿಕೆಗೆ ಡಾ. ವಿಜಯಾ ಅವರು ಪಾತ್ರರಾಗಿದ್ದು, ಅವರ ಬರವಣಿಗೆಯ ಮಾರ್ಗದರ್ಶನ ಇಂದಿನ ಪತ್ರಕರ್ತರಿಗೂ ದೊರೆತಿದೆ ಎಂದು ಹಿರಿಯ ಪತ್ರಕರ್ತರಾದ ಬಾ.ನಾ. ಸುಬ್ರಮಣ್ಯ ಅವರು ಇದೇ ಸಂದರ್ಭದಲ್ಲಿ ಹೇಳಿದರು.

ಪತ್ರಕರ್ತೆಯರಿಗೆ ಆಸರೆ:

ಪತ್ರಕರ್ತೆಯರ ಸಂಘದ ಮಾಲತಿ ಭಟ್ ಮಾತನಾಡಿ, ಉನ್ನತ ವ್ಯಕ್ತಿತ್ವದ ಡಾ. ವಿಜಯ ಅವರು ಪತ್ರಕರ್ತೆಯರ ಸಮಸ್ಯೆಗಳಿಗೂ ಸ್ಪಂದಿಸಿದವರು ಮತ್ತು ಪರ್ತ್ರಕರ್ತೆಯರ ಸಂಘದ ಹುಟ್ಟಿಗೂ ಕಾರಣಕರ್ತರಾದವರು ಎಂದರು.

ಡಾ. ವಿಜಯ ಅವರು ಪತ್ರಿಕಾವೃತ್ತಿಯ ಜೊತೆಗೆ ಹಲವಾರು ಮೌಲ್ಯಯುತ ಗ್ರಂಥಗಳ ಸಂಪಾದಕಿಯಾಗಿ ಪುಸ್ತಕ ಪ್ರಕಟಣೆಗಳ ಮೆರಗನ್ನು ಹೆಚ್ಚಿಸಿದ್ದಾರೆ ಎಂದು ಬೆಂಗಳೂರು ನಗರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನರೇಂದ್ರ ಪಾರೆಕಟ್ ಹೇಳಿದರು.

ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ. ಆರ್. ದೇವರಾಜ್, ನಗರ ಘಟಕದ ಸಮಿತಿ ಸದಸ್ಯ ಡಿ.ಎಲ್.ಹರೀಶ್, ಶಿವರಾಜ್, ಸದಸ್ಯರಾದ ಸುಂದರೇಶ್, ಶರಣ ಬಸಪ್ಪ, ಪೂರ್ಣಿಮಾ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ ಸ್ವಾಗತಿಸಿ, ಕೊನೆಯಲ್ಲಿ ರಾಜ್ಯ ಖಜಾಂಚಿ ವಾಸುದೇವ ಹೊಳ್ಳ ವಂದನಾರ್ಪಣೆ ಮಾಡಿದರು.

ಕಾರ್ಯಕ್ರಮದ ವೇಳೆ ಡಾ. ವಿಜಯಾ ಅವರ ಸಹೋದರಿ ಪುಷ್ಪಾ, ಪುತ್ರ ಗುರು, ಸೊಸೆ ಭಾರತಿ ಸೇರಿದಂತೆ ಅವರ ಹಲವಾರು ಹಿತೈಷಿಗಳು ಪಾಲ್ಗೊಂಡಿದ್ದರು.

# ಯುಗಾದಿ ಮಹೋತ್ಸವಗಳ ಪ್ರಾರಂಭ:

ಶ್ರೀಶೈಲದೇವಸ್ಥಾನದಲ್ಲಿಐದು ದಿವಸಗಳಪರ್ಯಂತ(27.03.2025ರಿಂದ 31.03.2025)ರವರೆಗೆನಿರ್ವಹಿಸಲ್ಪಡುವ ಯುಗಾದಿಮಹೋತ್ಸವಗಳು ಈದಿನ (27.03.2025)ದಂದುಪ್ರಾರಂಭವಾಗಿವೆ.

ಅದರಂತೆ ಇಂದಿನ ದಿನ ಬೆಳಿಗ್ಗೆ ಆಲಯಪ್ರಾಂಗಣದಲ್ಲಿಉತ್ಸವಪ್ರಾರಂಭಕಾರ್ಯಕ್ರಮಗಳು ಆಗಮಶಾಸ್ತ್ರಾನುಸಾರನಡೆದಿವೆ. ಈಸಂದರ್ಭವಾಗಿಶ್ರೀಸ್ವಾಮಿಅವ 'ಮ್ಮನವರಿಗೆವಿಶೇಷಪೂಜೆಗಳುನಡೆಸಲ್ಪಟ್ಟಿವೆ.

ಯಾಗಶಾಲಪ್ರವೇಶ:

ಉತ್ಸವನಿರ್ವಹಣೆಯಲ್ಲಿ ಭಾಗವಾಗಿ ಮೊದಲಿಗೆಕಾರ್ಯನಿರ್ವಹಣಾಧಿಕಾರಿ, ಸ್ಥಾನಾಚಾರ್ಯರು(ಅಧ್ಯಾಪಕ), ಅರ್ಚಕಸ್ವಾಮಿಗಳು,ವೇದಪಂಡಿತರು, ಅಧಿಕಾರರುಸಾಂಪ್ರದಾಯಬದ್ಧವಾಗಿ ಆಲಂಬ್ರಪ್ರಾಂಗಣದಲ್ಲಿ ಸ್ವಾಮಿಅವರಯಾಗಶಾಲೆಯ ಪ್ರವೇಶಮಾಡಿದರು.

ವೇದಸ್ವಸ್ತಿ:

ಆಲಯಪ್ರವೇಶ ಮಾಡಿದವೇದಪಂಡಿತರುವೇದಪಾರಾಯಣ ಮಾಡಿವೇದಸ್ವಸ್ತಿನಿರ್ವಹಿಸಿದರು.

ಶಿವಸಂಕಲ್ಪ:

ವೇದಪಠಣೆಯನಂತರಸ್ಥಾನಾಚಾರ್ಯರು (ಅಧ್ಯಾಪಕ) ಅರ್ಚಕಸ್ವಾಮಿಗಳು,ವೇದಪಂಡಿತರು ಲೋಕಕ್ಷೇಮವನ್ನುಕಾಂಕ್ಷಿಸುತ್ತಾ ಉತ್ಸವಸಂಕಲ್ಪವನ್ನುಪಠಿಸಿದರು. ಇದಕ್ಕೆ 'ಶಿವಸಂಕಲ್ಪ' ಎಂದುಹೆಸರು.

ಈಸಂಕಲ್ಪದಲ್ಲಿದೇಶವುಶಾಂತಿಸೌಭಾಗ್ಯಗಳಿಂದನೆಲೆಸಿರಬೇಕೆಂದು, ಪ್ರಕೃತಿವೈಪರೀತ್ಯಗಳುಸಂಭವಿಸದಂತೆಸಕಾಲದಲ್ಲಿಮಳೆಗಳುಬಂದುದೇಶವುಬೆಳೆಗಳಿಂದತುಂಬಿರಬೇಕೆಂದುಜನರುಆಯುರಾರೋಗ್ಯಗಳಿಂದಬಾಳಬೇಕೆಂದು,ಅಕಾಲಮರಣಗಳುಇಲ್ಲದಂತೆಇರಬೇಕೆಂದು,ಅಗ್ನಿಪ್ರಮಾದಗಳು,ವಾಹನ ಪ್ರಮಾದಗಳುಮುಂತಾದವುನಡೆಯದಂತೆಇರಬೇಕೆಂದು,ಪ್ರಜೆಗಳೆಲ್ಲರೂಸುಖಶಾಂತಿಗಳಿಂದಇರಬೇಕೆಂ

ದುಆಲಯಅರ್ಚಕರು,ವೇದಪಂಡಿತರುಸಂಕಲ್ಪಪಠಣೆಮಾಡಿದರು.

ಗಣಪತಿಪೂಜೆ :

ಸಂಕಲ್ಪಪಠಣದನಂತರಉತ್ಸವಗಳು ನಿರ್ವಿಘ್ನವಾಗಿನಡೆಯಬೇಕೆಂದುಮಹಾಗಣಪತಿಪೂಜೆನಡೆಸಲಾಯಿತು.

ಪುಣ್ಯಾಹವಾಚನೆ:

ಗಣಪತಿಪೂಜೆಯನಂತರ ಪುಣ್ಯಾಹವಾಚನೆನಡೆಯಿತು.ವೃದ್ಧಿಮತ್ತುಅಭ್ಯುದಯಗಳಿಗಾಗಿಈ ಪುಣ್ಯಾಹವಾಚನೆಮಾಡುತ್ತಾರೆ.

ಚಂಡೀಶ್ವರಪೂಜೆ:

ಸಂಕಲ್ಪಪಠಣದನಂತರಚಂಡೀಶ್ವರಪೂಜೆನಡೆಯಿತು. ಈಉತ್ಸವಗಳು ಕ್ಷೇತ್ರಪಾಲಕನಾದವೀರಭದ್ರಸ್ವಾಮಿಯ ಪರ್ಯವೇಕ್ಷಣದಲ್ಲಿ,ವಪರಿವಾರದೇವತೆಗಳಲ್ಲಿಒಬ್ಬನಾದಚಂಡೀಶ್ವರನನಾಯಕತ್ವದಲ್ಲಿ ನಿರ್ವಹಿಸಲ್ಪಡುತ್ತವೆ ಎಂ ದುಹೇಳಲಾಗಿದೆ.

ಆದ್ದರಿಂದಯಾಗಶಾಲೆಯಪ್ರವೇಶದನಂತರಚಂಡೀಶ್ವರನಿಗೆಪ್ರತ್ಯೇಕಪೂಜೆಗಳುನಡಿಸುವುದುಸಂಪ್ರದಾಯವು.

ಕಂಕಣಪೂಜೆ, ಕಂಕಣಧಾರಣೆ:

ಚಂಡೀಶ್ವರನಪೂಜೆಯನಂತರ ಕಂಕಣ (ರಕ್ಷಾಬಂಧನೆ)ಗಳಿಗೆಶಾಸ್ತ್ರೋಕ್ತವಾಗಿಪೂಜೆಗಳುನಡೆದವು. ನಂತರಅಧಿಕಾರರು, ಅರ್ಚಕಸ್ವಾಮಿಗಳುಕಂಕಣಗಳನ್ನುಧರಿಸಿದರು.

ಋತಿಗ್ವರಣ:

ಕಂಕಣಧಾರಣೆಯನಂತರಋತಿಗ್ವರಣನಡೆಯಿತು. ತ್ಸವಗಳಲ್ಲಿ ತಮಗೆತಕ್ಕಂತೆಆಯಾವೈದಿಕಕಾರ್ಯಕ್ರಮಗ

ಳನ್ನುನಿರ್ವಹಿಸಬೇಕೆಂದುಋತ್ವಿಕ್ಕುಗಳನ್ನುಆಹ್ವಾನಿಸುತ್ತ, ವರಿಗೆದೀಕ್ಷಾವಸ್ತ್ರಗಳನ್ನುಕೊಡುವಕಾರ್ಯಕ್ರಮಕ್ಕೆ

ಋತಿಗ್ವರಣಎಂದುಹೆಸರು.

ಅಖಂಡಸ್ಥಾಪನ:

ಋತ್ವಿಗ್ವರಣದ ನಂತರಅಖಂಡದೀಪಸ್ಥಾಪನೆಮಾಡಿದರು. ಅನಂತರವಾಸ್ತುಪೂಜೆಮಾಡಿದರು.

ರುದ್ರಕಲಶಸ್ಥಾಪನೆ:

ವಾಸ್ತುಹೋಮದನಂತರಮಂಡ 'ಪಾರಾಧನೆಮಾಡಿಪ್ರತ್ಯೇಕಕಲಶಸ್ಥಾಪನೆಮಾಡಿದರು. ಕಲಶಸ್ಥಾಪನೆಯನಂತರಕಲಶಾರ್ಚನೆನಂತರಪಂಚಾವರಣಾರ್ಚನೆನಿರ್ವಹಿಸಲ್ಪಟ್ಟವು. ಅನಂತರಲೋಕ ಕಲ್ಯಾಣಕ್ಕಾಗಿಜಪಾನುಷ್ಠಾನಗಳುನಡೆದವು.

ಅಂಕುರಾರ್ಪಣೆ:

ಉತ್ಸವಗಳವೊದಲನೇದಿವಸಸಾಯಂಕಾಲನಡೆಯುವಅಂಕುರಾರ್ಪಣೆಗೆಬಹಳಮಹತ್ವವಿದೆ.ಈಕಾರ್ಯಕ್ರಮದಲ್ಲಿಆಲಯ ಪ್ರಾಂಗಣದಲ್ಲಿ ನಿರ್ಣೀತವಾದಪವಿತ್ರಪ್ರದೇಶದಲ್ಲಿ ಇರುವಮಣ್ಣನ್ನು ತೆಗೆದುಯಾಗ ಶಾಲಕ್ಕೆತರುತ್ತಾರೆ. ಇದನ್ನೇ 'ಮೃತ್ಸಂಗ್ರಹಣೆ 'ಎನ್ನುತ್ತಾರೆ.

ನಂತರಈಮಣ್ಣನ್ನುಒಂಬತ್ತುಗಡಿಗೆಗಳಲ್ಲಿತುಂಬಿಅವುಗಳಒಳಗೆನವಧ್ಯಾನ್ಯಗಳನ್ನುಹಾಕಿ,ಆಮಣ್ಣಲ್ಲಿಮೊಳಕೆತ್ತುವ ಕೆಲಸವನ್ನುಪ್ರಾರಂಭಿಸುತ್ತಾರೆ. ಈಅಂಕುರಾರೋಪಣೆಯಕಾರ್ಯಕ್ರಮಕ್ಕೆಚಂದ್ರನು ಅಧಿಪತಿ. ಶುಕ್ಲಪಕ್ಷಚಂದ್ರನಂತೆಇರುವ ಪಾಲಿಕೆಗಳಲ್ಲಿನವಧಾನ್ಯಗಳುಸಹ ದಿನದಿನಾಭಿವೃದ್ಧಿಹೊಂದಬೇಕೆಂದುಪ್ರಾರ್ಥಿ ಸುತ್ತಾರೆ. ಈಪಾಲಿಕೆಗಳಲ್ಲಿಪ್ರತಿದಿವಸನೀರುಹಾಕಿಹಸಿರಾಗಿಬೆಳೆಯುವಂತೆಮಾಡುತ್ತಾರೆ. ಅಲಂಕಾರಗಳನ್ನುಆರೋಪಿಸುವ ಕಾರ್ಯಕ್ರಮವಾದಕಾರಣ ಇದಕ್ಕೆಅಂಕುರಾರ್ಪಣಎಂದುಹೆಸರು.

ಈಪ್ರಾರಂಭಪೂಜಾಕಾರ್ಯಕ್ರಮಗಳಲ್ಲಿಕಾರ್ಯನಿರ್ವಹಣಾಧಿಕಾರಿ ಶ್ರೀಯಂ . ಶ್ರೀನಿವಾಸರಾವು, ಅರ್ಚಕಸ್ವಾಮಿಗಳು,ವೇದಪಂಡಿತರು, ಸಂಬಂಧಿತ ಅಧಿಕಾರರು, ಉದ್ಯೋಗಿಗಳುಭಾಗವಹಿಸಿದರು.

ಭೃಂಗಿವಾಹನಸೇವೆ:

ಈಉತ್ಸವಗಳಲ್ಲಿಭಾಗವಾಗಿಈ ಸಾಯಂಕಾಲಸ್ವಾಮಿಅಮ್ಮನವರಿಗೆಭೃಂಗಿವಾಹನಸೇವೆನಡೆಯಿತು. ಈಸೇವೆಯಲ್ಲಿಶ್ರೀಸ್ವಾಮಿಅಮ್ಮನ 'ವರಉತ್ಸವಮೂರ್ತಿಗಳನ್ನು ಭೃಂಗಿವಾಹನದಮೇಲೆಕುಳ್ಳರಿಸಿವಿಶೇಷವಾಗಿಅಲಂಕಾರಮಂಟಪದಲ್ಲಿ ಪೂಜೆಮಾಡುತ್ತಾರೆ.

ನಂತರಗ್ರಾಮೋತ್ಸವನಿರ್ವಹಿಸುತ್ತಾರೆ.

ಭೃಂಗಿವಾಹನಾಧೀಶರಾದ ಶ್ರೀಸ್ವಾಮಿಅಮ್ಮನವರನ್ನು ದರ್ಶನಮಾಡಿದರೆಕಾರ್ಯಗಳಲ್ಲಿ ಏಕಾಗ್ರತೆಲಭಿಸಿ, ಪಾಪಗಳು ಪರಿಹಾರವಾಗುತ್ತವೆಂದುಹೇಳುತ್ತಾರೆ.

ಮಹಾಲಕ್ಷ್ಮಿ ಅಲಂಕಾರ:

ಉತ್ಸವಗಳಲ್ಲಿಭಾಗವಾಗಿ ಇಂದಿನದಿನ (27.03.2025) ಶ್ರೀಅಮ್ಮನವರಉತ್ಸವಮೂರ್ತಿಗೆ ಮಹಾಲಕ್ಷ್ಮಿಯ ಅಲಂಕಾರಗ್ರಾವೇಱೋತ್ಸವನಡೆಯಲಿವೆ.

ಚತುರ್ಭುಜಗಳು ಇರುವ ಈದೇವಿಯ ಮೇಲಿನಎರಡುಕೈಗಳಲ್ಲಿಪದ್ಮಗಳನ್ನು, ಕೆಳಗಿನಬಲಗೈಅಭಯಹಸ್ತವಾಗಿ,ಎಡಗೈವರಮುದ್ರವಾಗಿದರ್ಶನಕೊಡುತ್ತಾಳೆ. ಮಹಾಲಕ್ಷ್ಮಿಯ ಸ್ವರೂಪದರ್ಶನದಿಂದಶತ್ರುಬಾಧೆಗಳುನಿವಾರಣೆಯಾಗಿ, ಸಕಲಶುಭಗಳುಹೊಂದಬಹುದೆಂದುಹೇಳುತ್ತಾರೆ.

ಅದೇವಿಧವಾಗಿಗ್ರಾಮೋತ್ಸವದಲ್ಲಿನಾದಸ್ವರ,ಕೋಲಾಟ, ಚೆಕ್ಕಭಜನೆ,ರಾಜಭಟರವೇಷ, ಕೇರಳಚಂಡಿಮೇಳ,ಕೊಂಬುಕೊಯ್ಯನೃತ್ಯ, ಮುಂಬೈಡೋಲಿನಥೇಷ್, ವಿಳಕ್ಕು, ಸ್ವಾಗತನೃತ್ಯ,ವೀರಭದ್ರಡೊಳ್ಳು,ಕುಣಿತ ,ಜಾಂಜ್ಪಥಕ್,(ಕರ್ನಾಟಕಡೊಳ್ಳು) ಕಾಳಿಕಾನೃತ್ಯ, ಜಾನಪದಹಗಲುವೇಷ, ನಂದಿಕೋಲುಸೇವೆ,ಗೊರವನೃತ್ಯ, ತಪ್ಪಳಿಚಿಂದು, ಬೀರಪ್ಪಾಡೊಳ್ಳು, ನಂದಿಕೋಲುಸೇವೆ, ಢಮರುಕ, ಚಿಡತೆಗಳು, ಶಂಖ, ಕೊಳಲು, ಡೊಳ್ಳು ವಿನ್ಯಾಸ, ಮತ್ತು ಇತರ ಕಳಾರೂಪಗಳನ್ನು ಗ್ರಾಮೋತ್ಸವದಲ್ಲಿಏರ್ಪಾಟುಮಾಡಿದ್ದಾರೆ.

(ಕಾರ್ಯನಿರ್ವಹಣಾಧಿರಿಯ ಆದೇಶಗಳಮೇರೆಗೆ)

**–ಸಂಪಾದಕ**

# ಐಎಎಸ್ ಮತ್ತು ಕೆಎಎಸ್ ಪರೀಕ್ಷೆಗಳಿಗೆ ತರಬೇತಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.27:ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಕೇಂದ್ರ ಲೋಕ ಸೇವಾ ಆಯೋಗದ ಐಎಎಸ್ ಹಾಗೂ ಕರ್ನಾಟಕ ಲೋಕ ಸೇವಾ ಆಯೋಗದ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 50 ದಿನಗಳ ತರಬೇತಿಯನ್ನು ಮೈಸೂರಿನ ಕೇಂದ್ರ ಕಚೇರಿಯಲ್ಲಿ ನೀಡಲು ನಿರ್ಧರಿಸಲಾಗಿದೆ.

ಆಸಕ್ತರು ಏ.02 ರೊಳಗಾಗಿ ಬೆಳಿಗ್ಗೆ 10 ಗಂಟೆಯಿಂದ ಸಂಜೆ 04.30 ಗಂಟೆಯವರೆಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ದೂ.0821–2515944 ಗೆ ಸಂಪರ್ಕಿಸಬಹುದು ಎಂದು ಕರಾಮುವಿ ಕುಲಸಚಿವ ಪ್ರೊ.ಕೆ.ಬಿ ಪ್ರವೀಣ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.02 ರಂದು ದೇವರದಾಸಿಮಯ್ಯ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.27–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಆದ್ಯ ವಚನಕಾರ ನೇಕಾರ ಸಂತ ದೇವರದಾಸಿಮಯ್ಯ ಜಯಂತಿ ಕಾರ್ಯಕ್ರಮವನ್ನು ಏ.02 ರಂದು ಬೆಳಿಗ್ಗೆ 9.30 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಹೊಂಗಿರಣ ಸಾಂಸ್ಕೃತಿಕ ಸಮುಚ್ಚಯದಲ್ಲಿ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು, ಜಿಲ್ಲಾ ನೇಕಾರರ ಸಮುದಾಯಗಳ ಒಕ್ಕೂಟದ ಅಧ್ಯಕ್ಷ ಸಿ.ದೇವಾನಂದ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಬಿ.ಸಿದ್ಧಲಿಂಗಪ್ಪ ಅವರು ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಬಳ್ಳಾರಿಯ ಅಮಾತಿ ಬಸವರಾಜ ತಂಡದಿಂದ ವಚನ ಸಂಗೀತ ಇರಲಿದೆ.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಜರ್ಮನಿಯ ಲಿಂಡೌ ನೊಬೆಲ್ ಸಭೆಗೆ ವಿಶ್ರೀಕೃವಿವಿಯ ಇಬ್ಬರು ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.27–ಜರ್ಮನಿಯ ಲಿಂಡೌನಲ್ಲಿ ಜೂನ್ 29ರಿಂದ ಜುಲೈ 4ರವರೆಗೆ ಜರುಗಲಿರುವ ಪ್ರತಿಷ್ಠಿತ ಅಂತರಾಷ್ಟ್ರೀಯ ಲಿಂಡೌ ನೊಬೆಲ್ ಪುರಸ್ಕೃತರ ಸಭೆಗೆ ಬಳ್ಳಾರಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ರಸಾಯನಶಾಸ್ತ್ರ ವಿಭಾಗದ ಸಂಶೋಧನಾ ವಿದ್ಯಾರ್ಥಿಗಳಾದ ಗೌತಮಿ ಪಾಟೀಲ್ ಮತ್ತು ಡಾ.ನಸೀಮ್ ಕೌಸರ್ ಆಯ್ಕೆಯಾಗಿದ್ದಾರೆ.

ಕೇಂದ್ರ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯದ ಡಿಎಸ್‌ಟಿ ದೇಶವ್ಯಾಪಿ ಆಯ್ಕೆ ಮಾಡಿರುವ ಒಟ್ಟು 29 ಯುವ ವಿಜ್ಞಾನಿಗಳ ಪೈಕಿ ಬಳ್ಳಾರಿಯ ಇಬ್ಬರು ವಿದ್ಯಾರ್ಥಿಗಳು ಸ್ಥಾನ ಪಡೆದಿರುವುದು ವಿಶೇಷ.

ಪ್ರತಿವರ್ಷ ಜರುಗುವ ಲಿಂಡೌ ಜಾಗತಿಕ ಸಭೆಯಲ್ಲಿ ವಿಶ್ವದ ಆಯ್ದ 600 ಯುವ ವಿಜ್ಞಾನಿಗಳನ್ನು ಆಹ್ವಾನಿಸಿ ನೊಬೆಲ್ ಪ್ರಶಸ್ತಿ ಪುರಸ್ಕೃತ ದಿಗ್ಗಜರೊಂದಿಗೆ ಚರ್ಚಾಕೂಟ, ದುಂಡು ಮೇಜಿನ ಪರಿಷತ್ತುಗಳನ್ನು ನಡೆಸುತ್ತದೆ.

74ನೇ ಆವೃತ್ತಿಯ ಸಮ್ಮೇಳನವು ಈ ಬಾರಿ ರಸಾಯನಶಾಸ್ತ್ರ ವಿಷಯಕ್ಕೆ ಮೀಸಲಿಟ್ಟಿದ್ದು, ಆಯ್ಕೆಗೊಂಡಿರುವ ವಿದ್ಯಾರ್ಥಿಗಳ ಪ್ರವಾಸ ಹಾಗೂ ಇನ್ನಿತರ ಖರ್ಚು, ವೆಚ್ಚಗಳನ್ನು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ (ಡಿಎಸ್‌ಟಿ) ನಿಭಾಯಿಸಲಿದೆ.

ಈ ಸಂಶೋಧನಾರ್ಥಿಗಳು ವಿವಿಯ ರಸಾಯನಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಪ್ರೊ.ಕೆ.ಎಸ್ ಲೋಕೇಶ್ ಇವರ ಮಾರ್ಗದರ್ಶನದಲ್ಲಿ ಪಿಹೆಚ್‌ಡಿ ಮಾಡುತ್ತಿದ್ದಾರೆ.

ಲಿಂಡೌ ನೊಬೆಲ್ ಸಭೆಗೆ ಆಯ್ಕೆಯಾದ ವಿದ್ಯಾರ್ಥಿನಿಯರಿಗೆ ವಿವಿಯ ಕುಲಪತಿಗಳಾದ ಪ್ರೊ.ಎಂ ಮುನಿರಾಜು, ಕುಲಸಚಿವರಾದ ಎಸ್. ಎನ್ ರುದ್ರೇಶ್ ಹಾಗೂ ಮೌಲ್ಯಮಾಪನ ಕುಲಸಚಿವರಾದ ಪ್ರೊ.ಎನ್.ಎಂ. ಸಾಲಿ ಹಾಗೂ ವಿಭಾಗದ ಸಿಬ್ಬಂದಿ ಶುಭಾಶಯ ತಿಳಿಸಿದ್ದಾರೆ.

# ಬೂತ್ ಮಟ್ಟದ ಅಧಿಕಾರಿಗಳಿಗೆ ತರಬೇತಿ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.27–ನವದೆಹಲಿಯ ಇಂಡಿಯಾ ಇಂಟರ್ ನ್ಯಾಷನಲ್ ಇನ್ಸಿಟ್ಯೂಟ್ ಆಫ್ ಡೆಮಾಕ್ರಸಿ ಮತ್ತು ಎಲೆಕ್ಷನ್ ಮ್ಯಾನೇಜ್ ಮೆಂಟ್ ನಲ್ಲಿ ಕೇಂದ್ರ ಚುನಾವಣಾ ಆಯುಕ್ತರಾದ ಡಾ.ವಿವೇಕ್ ಜೋಶಿ ಅವರೊಂದಿಗೆ ಬೂತ್ ಮಟ್ಟದ ಅಧಿಕಾರಿಗಳ ಮೊದಲ ತರಬೇತಿಯನ್ನು ಬುಧವಾರ ಹಮ್ಮಿಕೊಳ್ಳಲಾಗಿತ್ತು.

ಕೇಂದ್ರ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರು ತರಬೇತಿ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಮುಂದಿನ ಕೆಲವು ವರ್ಷಗಳಲ್ಲಿ 10 ಮತಗಟ್ಟೆಗಳಿಗೆ ಸರಾಸರಿ ಒಂದು ಬಿಎಲ್‌ಒ ಹೊಂದಿರುವ 1 ಲಕ್ಷಕ್ಕೂ ಹೆಚ್ಚು ಬಿಎಲ್‌ಒ ಗಳಿಗೆ ಅಂತಹ ತರಬೇತಿ ಕಾರ್ಯಕ್ರಮಗಳಲ್ಲಿ ತರಬೇತಿ ನೀಡಲಾಗುವುದು. ಈ ಉತ್ತಮ ತರಬೇತಿ ಪಡೆದ ಬಿಎಲ್‌ಒ ಗಳು ದೇಶಾದ್ಯಂತ ಅಸೆಂಬ್ಲಿ ಮಟ್ಟದ ಮಾಸ್ಟರ್ ತರಬೇತುದಾರರ ಒಂದು ತುಕಡಿಯನ್ನು ರಚಿಸಿ, 100 ಕೋಟಿ ಮತದಾರರು ಮತ್ತು ಆಯೋಗದ ನಡುವಿನ ಮೊದಲ ಮತ್ತು ಪ್ರಮುಖ ಸಂಪರ್ಕ ಸಾಧನವಾಗಿದೆ ಎಂದು ಹೇಳಿದರು. ಈ ವಿಶಿಷ್ಟ ಸಾಮರ್ಥ್ಯ ವೃದ್ಧಿ ಕಾರ್ಯಕ್ರಮವು ಹಂತ ಹಂತವಾಗಿ ಮುಂದುವರಿಯಲಿದ್ದು, ಪ್ರಸ್ತುತ, ಬಿಹಾರ, ಪಶ್ಚಿಮ ಬಂಗಾಳ ಮತ್ತು ಅಸ್ಸಾಂನ 109 ಬಿಎಲ್‌ಒ ಗಳು ಈ 2 ದಿನಗಳ ವಸತಿ ತರಬೇತಿ ಕಾರ್ಯಕ್ರಮದಲ್ಲಿ ಬಿಹಾರ, ಪಶ್ಚಿಮ ಬಂಗಾಳ, ಅಸ್ಸಾಂ, ಕೇರಳ, ಪುದುಚೇರಿ ಮತ್ತು ತಮಿಳುನಾಡಿನ 24 ಇಆರ್‌ಒ ಗಳು ಮತ್ತು 13 ಡಿಇಒಗಳೊಂದಿಗೆ ಭಾಗವಹಿಸುತ್ತಿದ್ದಾರೆ.

ಬಿಎಲ್‌ಒ ಗಳು ರಾಜ್ಯ ಸರ್ಕಾರಿ ಅಧಿಕಾರಿಗಳಾಗಿದ್ದು, ಜಿಲ್ಲಾ ಚುನಾವಣಾ ಅಧಿಕಾರಿಗಳ (ಡಿಇಒ) ಅನುಮೋದನೆಯ ನಂತರ ಚುನಾವಣಾ ನೋಂದಣಿ ಅಧಿಕಾರಿಗಳು (ಇಆರ್‌ಒ) ನೇಮಕ ಮಾಡುತ್ತಾರೆ ಎಂದು ತಿಳಿಸಿದರು.

ಮತದಾರರ ಪಟ್ಟಿಯ ದೋಷ–ಮುಕ್ತ ನವೀಕರಣದಲ್ಲಿ ಇಆಆರ್‌ಒ ಗಳು ಮತ್ತು ಬಿಎಲ್‌ಒ ಗಳ ನಿರ್ಣಾಯಕ ಪಾತ್ರವನ್ನು ಗುರುತಿಸಿದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್, ರಾಜ್ಯ ಸರ್ಕಾರಗಳು ಎಸ್ಡಿಎಂ ಮಟ್ಟದ ಅಥವಾ ಸಮಾನ ಅಧಿಕಾರಿಗಳನ್ನು ಇಆರ್‌ಒಗಳಾಗಿ ನಾಮನಿರ್ದೇಶನ ಮಾಡಬೇಕು, ನಂತರ ಅವರು ತಮ್ಮ ಜೇಷ್ಠತೆಯನ್ನು ಪರಿಗಣಿಸಿ ಬಿಎಲ್‌ಒ ಗಳನ್ನು ನೇಮಿಸಬೇಕು ಎಂದರು. ಸಂವಿಧಾನದ 326 ನೇ ವಿಧಿ ಮತ್ತು ಆರ್ಪಿ ಕಾಯ್ದೆ 1950 ರ ಸೆಕ್ಷನ್ 20 ರ ಪ್ರಕಾರ, 18 ವರ್ಷಕ್ಕಿಂತ ಮೇಲ್ಪಟ್ಟ ಮತ್ತು ಕ್ಷೇತ್ರದಲ್ಲಿ ಸಾಮಾನ್ಯವಾಗಿ ವಾಸಿಸುವ ಭಾರತದ ನಾಗರಿಕರನ್ನು ಮಾತ್ರ ಮತದಾರರಾಗಿ ನೋಂದಾಯಿಸಿಕೊಳ್ಳಬಹುದು ಎಂದು ಅವರು ಹೇಳಿದರು.

ಎಲ್ಲಾ ಸಿಇಒಗಳು, ಡಿಇಒಗಳು, ಇಆರ್‌ಒ ಗಳು ತಮ್ಮ ಮಟ್ಟದಲ್ಲಿ ಸರ್ವಪಕ್ಷ ಸಭೆಗಳನ್ನು ನಡೆಸಬೇಕು ಮತ್ತು ಮತದಾರರ ಪಟ್ಟಿಯ ಸರಿಯಾದ ನವೀಕರಣ ಸೇರಿದಂತೆ ಅವರ ಅಧಿಕಾರ ವ್ಯಾಪ್ತಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಅವರು ನಿರ್ದೇಶಿಸಿದರು.

ಇಆರ್‌ಒ ಅಥವಾ ಬಿಎಲ್‌ಒ ವಿರುದ್ಧದ ಯಾವುದೇ ದೂರುಗಳ ಮೇಲೆ ಕಟ್ಟುನಿಟ್ಟಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ ಅವರು, ಮತದಾರರ ಪಟ್ಟಿಯ ನವೀಕರಣಕ್ಕಾಗಿ ಮನೆ–ಮನೆ ಪರಿಶೀಲನೆಯ ಸಮಯದಲ್ಲಿ ಎಲ್ಲಾ ಬಿಎಲ್‌ಒಗಳು ಮತದಾರರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಆಯೋಗವು ಸುಮಾರು 100 ಕೋಟಿ ಮತದಾರರೊಂದಿಗೆ ಇದೆ ಮತ್ತು ಯಾವಾಗಲೂ ನಿಲ್ಲುತ್ತದೆ ಎಂದು ಅವರು ಹೇಳಿದರು.

# ಕಲಬುರಗಿ: ಪ್ರಧಾನಮಂತ್ರಿ ಇಂಟರ್‌ಶಿಫ್ ಯೋಜನೆಯಡಿ ಕೌಶಲ್ಯ ತರಬೇತಿ ಪಡೆಯಲು ಹೆಸರು ನೋಂದಣಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಮಾ.27–ಪ್ರಸಕ್ತ 2024–25ನೇ ಸಾಲಿಗೆ ಪ್ರಧಾನಮಂತ್ರಿ ಇಂಟರ್‌ಶಿಫ್ ಯೋಜನೆ (ಕಡಿಟಜ ಒಟಜಿಣಜಢಿ, ಖಟಣಜಡಿಟಿಜಿ ಖಭಿಜಟಜುಟಖಿಠಿಅಠಟಠಿಚಿಟುಥ) ಯಡಿ ಉದ್ಯೋಗಾಧಾರಿತ ಕೌಶಲ್ಯ ತರಬೇತಿ ಪಡೆಯಲು ಆಸಕ್ತಿಯುಳ್ಳ ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯ ನಿರುದ್ಯೋಗಿ ಯುವಕ, ಯುವತಿಯರು ಆನ್‌ಲೈನ್ ಮೂಲಕ ನೋಂದಣಿ ಮಾಡಿಕೊಂಡು ಇದರ ಸದುಪಯೋಗ ಪಡೆಯಬೇಕೆಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ. ಅಭ್ಯರ್ಥಿಗಳ ವಯೋಮಿತಿ 21 ರಿಂದ 24 ವರ್ಷದೊಳಗಿರಬೇಕು. ಎಸ್.ಎಸ್.ಎಲ್.ಸಿ, ಐಟಿಐ, ಪಿಯುಸಿ–2, ಬಿ.ಎ, ಬಿ.ಎಸ್ಸಿ, ಬಿಕಾಂ, ಬಿಸಿಎ, ಬಿಬಿಎ, ಬೀಫಾರ್ಮ, ಇತ್ಯಾದಿ ವಿದ್ಯಾರ್ಹತೆ ಹೊಂದಿರಬೇಕು. ಇಂಟರ್‌ಶಿಫ್ ತರಬೇತಿ ಅವಧಿಯು 12 ತಿಂಗಳ ಅವಧಿ ಇದ್ದು, ತರಬೇತಿಗೆ ಆಯ್ಕೆಯಾದ ಅಭ್ಯರ್ಥಿಗಳು ಕಂಪನಿ ಆಯೋಜಿಸಿದ ಸ್ಥಳದಲ್ಲಿ ಹೋಗಿ ತರಬೇತಿ ಪಡೆಯಬೇಕು.

ಈ ಯೋಜನೆಯಡಿ ಉನ್ನತ ಮಟ್ಟದ 500 ಕಂಪನಿಗಳಲ್ಲಿ ಒಂದು ಕೋಟಿ ಯುವಕರಿಗೆ ಇಂಟರಶಿಫ್ (ಖಟಣಜಡಿಟಿಜಿ) ಮೂಲಕ ಕೌಶಲ್ಯವನ್ನು ವೃದ್ಧಿಸಲು ಯುವಕ/ಯುವತಿಯರು ಅವಶ್ಯಕ ದಾಖಲಾತಿಯೊಂದಿಗೆ 2025ರ ಮಾರ್ಚ್ 31ರೊಳಗಾಗಿ ತಿತಿತಿ.ಠಿಟುಟಣಜಢಿ. ಟಭಿಚಿ.ರಠತ.ಎಟ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಬೇಕು. ನಂತರ ಅಭ್ಯರ್ಥಿಗಳು ಹೆಸರು ನೋಂದಾಯಿಸಿದ ಒಂದು ಪ್ರತಿಯನ್ನು ಕಲಬುರಗಿ ಮಹಾನಗರ ಪಾಲಿಕೆಯ ಡೇ–ನಲ್ಮ್ ಶಾಖೆಯ ಕೋಣೆ ಸಂಖ್ಯೆ 47 ರಲ್ಲಿ ಸಲ್ಲಿಸಬೇಕು. ಅರ್ಹತೆ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಸದರಿ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಬಳ್ಳಾರಿ ಮಹಾನಗರ ಪಾಲಿಕೆ: ಆಸ್ತಿ ತೆರಿಗೆ ಪಾವತಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.27–ಬಳ್ಳಾರಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಆಸ್ತಿ ಮಾಲೀಕರು ನಿಗದಿತ ಅವಧಿಯಲ್ಲಿ ಆಸ್ತಿ ತೆರಿಗೆ ಪಾವತಿಸಬೇಕು ಎಂದು ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ,

ಕರ್ನಾಟಕ ಪೌರನಿಗಮಗಳ ಅಧಿನಿಯಮ 1976 ನಿಯಮ 108, 109 ಮತ್ತು 109ಎ ನಿಯಮಗಳಿಗೆ ತಿದ್ದುಪಡಿ ಮಾಡಿ ಆಯಾ ವರ್ಷಕ್ಕೆ ಉಪನೊಂದಣಾಧಿಕಾರಿ, ಉಪನೊಂದಣಿ ಕಚೇರಿ ಇವರ ಮಾರುಕಟ್ಟೆ ಮಾರ್ಗಸೂಚಿ ಬೆಲೆಗಳು ಪರಿಷ್ಕರಣೆ ಆಗದಿದ್ದಲ್ಲಿ ಕನಿಷ್ಠ ಶೇ.3 ಕ್ಕಿಂತ ಕಡಿಮೆ ಇಲ್ಲದಂತೆ ಮತ್ತು ಗರಿಷ್ಠ ಶೇ.5 ಕ್ಕಿಂತ ಹೆಚ್ಚಿಗೆ ಮೀರದಂತೆ ಆಸ್ತಿ ತೆರಿಗೆಯನ್ನು ವಿಧಿಸಿ ವಸೂಲಿ ಮಾಡಲು ತಿದ್ದುಪಡಿ ಮಾಡಲಾಗಿದೆ.

2025–26ನೇ ಸಾಲಿಗೆ ಮಾರುಕಟ್ಟೆ ಮೌಲ್ಯದ ಮಾರ್ಗಸೂಚಿ ಬೆಲೆ ಪರಿಷ್ಕರಣೆ ಮಾಡಿರುವುದಿಲ್ಲ ಎಂದು ತಿಳಿಸಿರುವ ಪ್ರಯುಕ್ತ 2025 ರ ಏ.01 ರಿಂದ 2026 ರ ಮಾ.31 ರ ವರೆಗೆ 2024–25ನೇ ಸಾಲಿನ ಆಸ್ತಿ ತೆರಿಗೆಯ ಮೇಲೆ ಶೇ.3 ರಷ್ಟು ನಿಗದಿಪಡಿಸಿ ಹೆಚ್ಚಿಸಿ, 2025–26ನೇ ಸಾಲಿಗೆ ಆಸ್ತಿ ತೆರಿಗೆಯನ್ನು ನಿಗದಿಪಡಿಸಿಕೊಳ್ಳಲು ಮಹಾಪೌರರ ಅಧ್ಯಕ್ಷತೆಯಲ್ಲಿ ಜರುಗಿದ ಸಾಮಾನ್ಯ ಸಭೆಯಲ್ಲಿ ಹಾಜರಿದ್ದ ಸದಸ್ಯರ ಸರ್ವಾನುಮತದಿಂದ ಒಪ್ಪಿ ತೀರ್ಮಾನಿಸಲಾಗಿದೆ.

ಹಾಗಾಗಿ ಸಾರ್ವಜನಿಕರು ನಿಗದಿತ ಅವಧಿಯಲ್ಲಿ ಆಸ್ತಿ ತೆರಿಗೆಯನ್ನು ಪಾವತಿಸಿ ಬಳ್ಳಾರಿ ಮಹಾನಗರ ಪಾಲಿಕೆಯ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಆಯುಕ್ತರು ಕೋರಿದ್ದಾರೆ.

# ರೌಡಿಶೀಟರ್ ರುಸ್ತುಂ ಬಳ್ಳಾರಿ ಜೈಲಿಗೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.27–ನಗರದ ಮಹ್ಮದ್ ಚೌಕನ ನಿವಾಸಿ ರೌಡಿ ಶೀಟರ್ ಮೋಹ್ಮದ್ ರುಸ್ತುಂ ಅಹ್ಮದ್ ಅಲಿಯಾಸ್ ರುಸ್ತುಂ ತಂದೆ ಅಬ್ದುಲ್ ರಶೀದ್ (35) ನನ್ನು ಬಳ್ಳಾರಿ ಜೈಲಿಗೆ ಹಸ್ತಾಂತರಿಸಲಾಗಿದೆ.

ಈತನ ವಿರುದ್ಧ 2010 ರಿಂದ 2015 ರವರೆಗೆ ಭಾರತೀಯ ದಂಡ ಸಂಹಿತೆ ಅಡಿಯಲ್ಲಿ 10, ಬಿಎನ್‌ಎಸ್ ಕಾಯ್ದೆ–2023ರ ಅಡಿಯಲ್ಲಿ 2, ದಂಡ ಪ್ರಕ್ರಿಯೆ ಅಡಿಯಲ್ಲಿ 11 ಪ್ರಕರಣ ಸೇರಿ 23 ಪ್ರಕರಣಗಳು ದಾಖಲಾಗಿದ್ದು, ಆರೋಪಿಯನ್ನು "ಎ"ರೌಡಿ ಎಂದು ಗುರುತಿಸಲಾಗಿದೆ. ಆರೋಪಿಯನ್ನು ಗುಂಡಾ ಕಾಯ್ದೆ ಅಡಿಯಲ್ಲಿ ಬಂಧಿಸುವುದು ಸೂಕ್ತ ಮತ್ತು ಅನಿವಾರ್ಯವಾಗಿದೆ ಎಂದು ರಾಘವೇಂದ್ರನಗರ ಪೊಲೀಸ್ ಠಾಣೆ ಪಿಐ ಕುಬೇರ ಎಸ್.ರಾಯಮಾನೆ ಅವರು ನೀಡಿದ ವರದಿ ಅನ್ವಯ ಆರೋಪಿಯನ್ನು ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ಹಸ್ತಾಂತರಿಸಲು ಪೊಲೀಸ್ ಆಯುಕ್ತರಾದ ಡಾ.ಶರಣಪ್ಪ ಎಸ್.ಡಿ.ಅವರು ಹಾಗೂ ಇಲ್ಲಿನ ವಿಶೇಷ ಕಾರ್ಯನಿರ್ವಾಹಕ ದಂಡಾಧಿಕಾರಿರವರ ನ್ಯಾಯಾಲಯ ಆದೇಶ ಹೊರಡಿಸಿದೆ.

ರಾಜ್ಯಮಟ್ಟದ ಹೈಟೆಕ್ ತರಬೇತಿ ಕಾರ್ಯಕ್ರಮ

# ಸುಸ್ಥಿರ ಬೆಳವಣಿಗೆಯಲ್ಲಿ ಮಹಿಳೆಯರ ಪಾತ್ರ ಪ್ರಮುಖ–ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.27–ಮಹಿಳೆಯರು ತಮ್ಮ ಕುಟುಂಬದ ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸುವಂತೆ ಸಹಕಾರಿ ಸಂಘಗಳ ಆರ್ಥಿಕ ಸಮತೋಲನವನ್ನು ಕಾಪಾಡುವಲ್ಲಿಯೂ ಮಹತ್ವದ ಪಾತ್ರವಹಿಸುತ್ತಾರೆಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ನವನಗರದ ಹೋಟೆಲ್ ಹರಿಪ್ರಿಯ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಸಹಕಾರಿ ಮಹಾಮಂಡಳ, ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಸಹಕಾರ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಬೆಳಗಾವಿ ವಿಭಾಗದ ಮಹಿಳಾ ಸಹಕಾರ ಸಂಘಗಳ ಪದಾಧಿಕಾರಿಗಳಿಗೆ ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಹಮ್ಮಿಕೊಂಡ ರಾಜ್ಯ ಮಟ್ಟದ ಹೈಟೆಕ್ ವಿಶೇಷ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಉತ್ತಮ ನಿರ್ವಹಣಾ ಕೌಶಲ್ಯದಿಂದ ಸಂಘಗಳ ಸುಸ್ಥಿರ ಬೆಳವಣಿಗೆ ಸಾಧ್ಯ ಎಂದರು.

ಮಹಿಳೆಯರು ಸಂಘಟಿತವಾಗಿ ಕಾರ್ಯ ನಿರ್ವಹಿಸಿ ತಮ್ಮ ನಿರ್ಧಾರ ಶಕ್ತಿಯನ್ನು ಬಳಸಿಕೊಂಡರೆ ಸಹಕಾರಿ ಸಂಘಗಳು ಸಮರ್ಥವಾಗಿ ಬೆಳೆಯಲು ಸಾಧ್ಯ. ಸಂಸ್ಥೆಯ ಲಾಭದಾಯಕ ನಿರ್ವಹಣೆಗೆ ಸಂಚಾಲಕರು ತಮ್ಮ ಜ್ಞಾನ ಮತ್ತು ಅನುಭವವನ್ನು ಬಳಸಿಕೊಳ್ಳಬೇಕು. ಸಹಕಾರಿ ಸಂಘಗಳು ಕೇವಲ ವ್ಯವಹಾರ ನಡೆಸಲು ಮಾತ್ರವಲ್ಲ, ಸಾಮಾಜಿಕ ಮತ್ತು ಆರ್ಥಿಕ ಸುಧಾರಣೆಗೆ ಸಹಕಾರಿಯಾಗಬೇಕು ಎಂದು ಜಾನಕಿ ಹೇಳಿದರು.

ಜಿಲ್ಲಾ ಸಹಕಾರ ಯೂನಿಯನ್ ನಿಗಮದ ಅಧ್ಯಕ್ಷ ದ್ಯಾಮಣ್ಣ ಗಾಳಿ ಮಾತನಾಡಿ, ಸಹಕಾರಿ ಸಂಘಗಳ ಯಶಸ್ಸು ಸರಿಯಾದ ನಿರ್ಧಾರಗಳ ಮೇಲೆ ಅವಲಂಬಿತವಾಗಿರುತ್ತದೆ.

# ಬಾಬು ಜಗಜೀವನರಾಂ ಹಾಗೂ ಅಂಬೇಡ್ಕರ್ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಿ – ಜಿಲ್ಲಾಧಿಕಾರಿ ನಲಿನ್ ಅತುಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಡಾ.ಬಾಬು ಜಗಜೀವನರಾಂ ಹಾಗೂ ಡಾ. ಬಿ.ಆರ್ ಅಂಬೇಡ್ಕರ್ ರವರ ಜಯಂತಿಗಳನ್ನು ಅರ್ಥಪೂರ್ಣ ಮತ್ತು ಅದ್ದೂರಿಯಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಾ. ಬಾಬು ಜಗಜೀವನರಾಂ ಹಾಗೂ ಡಾ. ಬಿ.ಆರ್.ಅಂಬೇಡ್ಕರ್ ರವರ ಜಯಂತಿ ಆಚರಣೆ ಕುರಿತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಈ ಹಿಂದೆ ಚುನಾವಣೆ ಹಿನ್ನೆಲೆಯಲ್ಲಿ ಬಾಬು ಜಗಜೀವನರಾಂ ಹಾಗೂ ಅಂಬೇಡ್ಕರ್ ಜಯಂತಿಗಳನ್ನು ಸರಳವಾಗಿ ಆಚರಿಸಲಾಗಿದೆ. ಈ ಬಾರಿ ಎರಡೂ ಜಯಂತಿಗಳನ್ನು ಬಹಳ ಅರ್ಥಪೂರ್ಣವಾಗಿ ಹಾಗೂ ವಿಜೃಂಭಣೆಯಿಂದ ಎಲ್ಲರೂ ಸೇರಿ ಆಚರಣೆ ಮಾಡೋಣ ಎಂದರು.

*ಬಾಬು ಜಗಜೀವನರಾಂ ಜಯಂತಿ:* ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಂ ರವರ 118ನೇ ಜಯಂತಿಯನ್ನು ಏಪ್ರಿಲ್ 5 ರಂದು ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಆಯೋಜಿಸಲಾಗಿದೆ. ಅಂದು ಬೆಳಿಗ್ಗೆ 8.30ಕ್ಕೆ ಬಾಬು ಜಗಜೀವನರಾಂ ರವರ ಭಾವಚಿತ್ರದ ಮೆರವಣಿಗೆಯು ನಗರದ ಮಾರುಕಟ್ಟೆ ಹತ್ತಿರವಿರುವ ಬಾಬು ಜಗಜೀವನರಾಂ ವೃತ್ತದಿಂದ ಆರಂಭಗೊಂಡು ಸಾಹಿತ್ಯ ಭವನದವರೆಗೆ ಜರುಗಲಿದೆ. ನಂತರ ಮಧ್ಯಾಹ್ನ 12 ಗಂಟೆಗೆ ಸಾಹಿತ್ಯ ಭನವದಲ್ಲಿ ವೇದಿಕೆ ಸಮಾರಂಭ ನಡೆಯಲಿದ್ದು, ಈ ಮಹಾನ ನಾಯಕರ ಭಾವಚಿತ್ರಕ್ಕೆ ಪೂಜೆ, ವಿಶೇಷ ಉಪನ್ಯಾಸ ಸೇರಿದಂತೆ ಇತರೆ ಕಾರ್ಯಕ್ರಮಗಳು ಜರುಗಲಿವೆ ಎಂದು ಹೇಳಿದರು.

**ಅಂಬೇಡ್ಕರ್ ಜಯಂತಿ:** ಸಂವಿಧಾನ ಶಿಲ್ಪಿ ಡಾ ಬಿ.ಆರ್ ಅಂಬೇಡ್ಕರ್ ರವರ 134ನೇ ಜನ್ಮ ದಿನಾಚರಣೆಯನ್ನು ಏಪ್ರಿಲ್ 14 ರಂದು ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಏರ್ಪಡಿಸಲಾಗಿದೆ. ಅಂದು ಬೆಳಿಗ್ಗೆ 8.30ಕ್ಕೆ ಅಂಬೇಡ್ಕರ್ ರವರ ಭಾವಚಿತ್ರದ ಮೆರವಣಿಗೆಯು ನಗರದ ಅಂಬೇಡ್ಕರ್ ವೃತ್ತದಿಂದ ಆರಂಭಗೊಂಡು, ನಗರದ ವಿವಿಧ ವೃತ್ತಗಳ ಮೂಲಕ ಸಾಹಿತ್ಯ ಭವನದವರೆಗೆ ಮೆರವಣಿಗೆ ನಡೆಯಲಿದೆ. ನಂತರ ಮಧ್ಯಾಹ್ನ 12 ಗಂಟೆಗೆ ಸಾಹಿತ್ಯ ಭನವದಲ್ಲಿ ನಡೆಯಲಿರುವ ವೇದಿಕೆ ಸಮಾರಂಭದಲ್ಲಿ ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪೂಜೆ, ವಿಶೇಷ ಉಪನ್ಯಾಸ ಸೇರಿದಂತೆ ಇತರೆ ಕಾರ್ಯಕ್ರಮಗಳು ನಡೆಯಲಿವೆ ಎಂದರು.

ಬಾಬು ಜಗಜೀವನರಾಂ ಹಾಗೂ ಅಂಬೇಡ್ಕರ್ ರವರ ಜಯಂತಿ ಸಮಾರಂಭಗಳ ದಿನದಂದು, ಸಾಹಿತ್ಯ ಭವನ, ವೃತ್ತಗಳು ಮತ್ತು ರಸ್ತೆ ಸ್ವಚ್ಛತೆ, ಮೆರವಣಿಗೆಯಲ್ಲಿ ಹಾಗೂ ವೇದಿಕೆ ಸಮಾರಂಭದಲ್ಲಿ ಪಾಲ್ಗೊಳ್ಳುವ ಜನರಿಗೆ ಕುಡಿಯುವ ನೀರಿನ ವ್ಯವಸ್ಥೆ ಕೈಗೊಳ್ಳಬೇಕು. ಕಾರ್ಯಕ್ರಮದಲ್ಲಿ ಎಲ್ಲಾ ಸಮಾಜದ ಮುಖಂಡರು ಭಾಗವಹಿಸಬೇಕು. ಈ ಎರಡೂ ಜಯಂತಿಯನ್ನು ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳು, ಗ್ರಾಮ ಪಂಚಾಯತ್ ಮತ್ತು ಇತರೆ ಕಛೇರಿಗಳಲ್ಲಿ ಆಚರಿಸಬೇಕು. ಎಲ್ಲಾ ಇಲಾಖೆಗಳ ಅಧಿಕಾರಿಗಳು ತಮ್ಮ ಸಿಬ್ಬಂದಿಗಳೊಂದಿಗೆ ಕಾರ್ಯಕ್ರಮದಲ್ಲಿ ಹಾಜರಿರಬೇಕೆಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಎಸ್.ಎಸ್.ಎಲ್.ಸಿ., ಪಿ.ಯು.ಸಿ ಹಾಗೂ ಉನ್ನತ ಶಿಕ್ಷಣದಲ್ಲಿ ಸಾಧನೆ ಮಾಡಿದ ಸಮಾಜದ ವಿದ್ಯಾರ್ಥಿಗಳಿಗೆ ಸನ್ಮಾನಿಸುವುದರ ಜತೆಗೆ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾದ ನಮ್ಮ ಜಿಲ್ಲೆಯವರಾದ ಬೀಮವ್ವ ಸಿಳ್ಳೆಕ್ಯಾತರ್ ಅವರಿಗೂ ಸಹ ಈ ಕಾರ್ಯಕ್ರಮದಲ್ಲಿ ಸನ್ಮಾನಿಸಬೇಕು. ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಂ ರವರ 118ನೇ ಹಾಗೂ ಸಂವಿಧಾನ ಶಿಲ್ಪಿ ಡಾ ಬಿ.ಆರ್ ಅಂಬೇಡ್ಕರ್ ರವರ 134ನೇ ಜನ್ಮ ದಿನಾಚರಣೆ ನಿಮಿತ್ತ ಈ ಇಬ್ಬರೂ ನಾಯಕರ ಕುರಿತು ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಚರ್ಚಾ ಸ್ಪರ್ಧೆ, ಪ್ರಬಂಧ ಮತ್ತು ವೇಷಭೂಷಣ ಸ್ಪರ್ಧೆಗಳನ್ನ ಏರ್ಪಡಿಸಲು ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ದರಾಮೇಶ್ವರ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಪ್ರಕಾಶ ವಿ., ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೋಗಲದ್, ಆಹಾರ ಇಲಾಖೆ ಉಪನಿರ್ದೇಶಕ ಸೋಮಶೇಖರ ಬಿರಾದರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ಮರಬನಹಳ್ಳಿ, ಕೊಪ್ಪಳ ನಗರಸಭೆ ಪೌರಾಯುಕ್ತರಾದ ಗಣಪತಿ ಪಾಟೀಲ್, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎ.ಬಸವರಾಜ, ಸಮಾಜದ ಮುಖಂಡರಾದ ಗೂಳಪ್ಪ ಹಲಗೇರಿ, ಗಾಳೆಪ್ಪ ಪೂಜಾರ, ಸಿದ್ದೇಶ ಪೂಜಾರ, ಯಲ್ಲಪ್ಪ ಬಳಗಾನೂರ, ಸಿದ್ದರಾಮಪ್ಪ ಹೊಸಮನಿ, ಬಿ.ಜ್ಞಾನ ಸುಂದರ, ರಾಮಣ್ಣ ಕಂದಾರಿ, ಮಲ್ಲಿಕಾರ್ಜುನ ಪೂಜಾರ, ವಿವೇಕಾನಂದ ಕಟ್ಟಿಮನಿ, ರಮೇಶ ಎಮ್ ಗುಡ್ಲಾನೂರು, ಗವಿಸಿದ್ದಪ್ಪ ಬೆಲ್ಲದ, ಪುಟ್ಟರಾಜ ಪೂಜಾರ, ಹನುಮೇಶ ಕಡೆಮನಿ, ರವಿ ನಿಂಗಪ್ಪ ಆಗೋಲಿ, ಶರಣಪ್ಪ ತೋಂಡಿಹಾಳ ವಕೀಲರು ಸೇರಿದಂತೆ ಮತ್ತಿತರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ನಾಳೆ ಕಾರಂಜಾ ಜಲಾಶಯದಿಂದ ನೀರು ಸರಬರಾಜು ಅಭಿವೃದ್ಧಿ ಯೋಜನೆಯ ಶಂಕುಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಹುಮನಾಬಾದ ಪಟ್ಟಣದಲ್ಲಿ ನಾಳೆ ಬೆಳ್ಳಿಗೆ 11 ಗಂಟೆಗೆ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯ ಹುಮನಾಬಾದ, ಚಿಟಗುಪ್ಪ ಮತ್ತು ಹಳ್ಳಿಖೇಡ(ಬಿ) ಪಟ್ಟಣಗಳಿಗೆ ಕಾರಂಜಾ ಜಲಾಶಯದಿಂದ ನೀರು ಸರಬರಾಜು ಅಭಿವೃದ್ಧಿ ಯೋಜನೆಯ ಶಂಕುಸ್ಥಾಪನೆ , ಭೂಮಿ ಕಾರ್ಯಕ್ರಮ ಅಂದು ಬೆಳಿಗ್ಗೆ 11 ಘಂಟೆಗೆ ಅಯೋಜಿಸಲಾಗಿದು. ಕಾರ್ಯಕ್ರಮದ ಅಧ್ಯಕ್ಷತೆ ಶಾಸಕ ಡಾ. ಸಿದ್ದು ಪಾಟೀಲ್ ವಹಿಸಲಿದ್ದಾರೆ.



ಶಂಕುಸ್ಥಾಪನೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ , ಘನ ಉಪಸ್ಥಿತಿ ಪೌರಾಡಳಿತ ಹಜ್ ಸಚಿವ ರಹೀಮ ಖಾನ, ನಗರಾಭಿವೃದ್ಧಿ ಪಟ್ಟಣ ಯೋಜನೆ ಸಚಿವ ಭೈರತಿ ಸುರೇಶ್ ಹಾಗೂ ಸ್ಥಳೀಯ ಜನ ಪ್ರನಿಧಿಗಳು ಉಪಸ್ಥಿತರಿರಲಿದ್ದಾರೆ ಆದ ಕಾರಣ ಹುಮನಾಬಾದ, ಚಿಟಗುಪ್ಪ ಮತ್ತು ಹಳ್ಳಿಖೇಡ (ಬಿ) ಪಟ್ಟಣದ ಪುರಸಭೆಯ ಅಧ್ಯಕ್ಷರು, ಉಪಾಧ್ಯಕ್ಷರೂ ಹಾಗೂ ಸರ್ವ ಸದಸ್ಯರು ಮತ್ತು ಕ್ಷೇತ್ರದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶ್ವಿಗೊಳಿಸಬೇಕೆಂದು ಶಾಸಕ ಡಾ. ಸಿದ್ದು ಪಾಟೀಲ್ ಪತ್ರಿಕಾ ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.

ಡಾ.ಜಗಜೀವನರಾಂ, ಡಾ.ಅಂಬೇಡ್ಕರ ಜಯಂತಿ

# ಅರ್ಥಪೂರ್ಣವಾಗಿ ಆಚರಣೆ ಮಾಡಲು ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.27–ಜಿಲ್ಲೆಯಲ್ಲಿ ಎಪ್ರೀಲ್ 4 ರಂದು ಆಚರಿಸಲ್ಪಡುವ ಡಾ.ಬಾಬು ಜಗಜೀವನರಾಂ ಅವರ 118ನೇ ಜಯಂತಿ ಹಾಗೂ ಎಪ್ರೀಲ್ 14 ರಂದು ಆಚರಿಸಲ್ಪಡುವ ಡಾ.ಬಿ.ಆರ್. ಅಂಬೇಡ್ಕರವರ 134ನೇ ಜಯಂತಿಯನ್ನು ಜಿಲ್ಲಾಡಳಿತದಿಂದ ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಗುರುವಾರ ಜರುಗಿದ ಡಾ.ಬಾಬು ಜಗಜೀವನರಾಂ ಹಾಗೂ ಡಾ.ಬಿ.ಆರ್. ಅಂಬೇಡ್ಕರವರ ಜಯಂತಿ ಆಚರಣೆ ಕುರಿತ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಪ್ರೀಲ್ 4 ರಂದು ಬೆಳಿಗ್ಗೆ 9 ಗಂಟೆಗೆ ಸೆಕ್ಟರ ನಂ.12ರಲ್ಲಿರುವ ದುರ್ಗಾದೇವಿ ದೇವಸ್ಥಾನದಿಂದ ಜಗಜೀವನರಾಂ ಭವನದವರೆಗೆ ಭಾವಚಿತ್ರದ ಮೆರವಣಿಗೆ ನಡೆಯಲಿದ್ದು, ಜಗಜೀವನರಾಂ ಭವನದಲ್ಲಿ ಉಪನ್ಯಾಸ ಒಳಗೊಂಡಂತೆ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಜಗಜೀವನರಾಂ ಅವರ ಕುರಿತು ಮಾತನಾಡಲು ಉತ್ತಮ ಉಪನ್ಯಾಸಕರನ್ನು ಆಹ್ವಾನಿಸಲು ತಿಳಿಸಿದರು.

ಡಾ.ಬಿ.ಆರ್.ಅಂಬೇಡ್ಕರವರ ಜಯಂತಿಯನ್ನು ಎಪ್ರೀಲ್ 14 ರಂದು ಬೆಳಿಗ್ಗೆ 10 ಗಂಟೆಗೆ ಸೆಕ್ಟರ ನಂ.45ರಲ್ಲಿರುವ ಶ್ರೀಮಾತೆ ರಮಾಬಾಯಿ ಅಂಬೇಡ್ಕರ ಸಮುದಾಯ ಭವನದ ಆವರಣದಲ್ಲಿ ಅಂಬೇಡ್ಕರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ವಿವಿಧ ಜಾನಪದ ಕಲಾತಂಡಗಳ ಮೂಲಕ ಮೆರವಣಿಗೆಗೆ ಚಾಲನೆ ನೀಡಲಾಗುತ್ತದೆ. ನಂತರ ಅಂಬೇಡ್ಕರ ಭವನದಲ್ಲಿ ವೇದಿಕೆ ಕಾರ್ಯಕ್ರಮ ನಡೆಸಲಾಗುತ್ತದೆ. ಅಂಬೇಡ್ಕರವರ ಜೀವನ ಚರಿತ್ರೆಯ ಕುರಿತು ಮಾತನಾಡಲು ಉತ್ತಮ ಉಪನ್ಯಾಸಕರನ್ನು ಆಹ್ವಾನಿಸುವಂತೆ ಅಧಿಕಾರಿಗಳಿಗೆ ತಿಳಿಸಲಾಯಿತು.

ಡಾ.ಜಗಜೀವನರಾಂ ಹಾಗೂ ಡಾ.ಅಂಬೇಡ್ಕರವರ ಜಯಂತಿ ಕಾರ್ಯಕ್ರಮಕ್ಕೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಪಾಲ್ಗೊಳ್ಳಬೇಕು. ಅಲ್ಲದೇ ಸಮುದಾಯದ ವಿವಿಧ ಸಂಘಟನೆಯ ಮುಖಂಡರು, ಸಾರ್ವಜನಿಕರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿಗಳು ಕೋರಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ, ತಹಶೀಲ್ದಾರ ಅಮರೇಶ ಪಮ್ಮಾರ ಸೇರಿದಂತೆ ಸಮುದಾಯದ ಮುಖಂಡರಾದ ಮಹಾದೇವ ಹಾದಿಮನಿ, ಚಂದ್ರಶೇಖರ ಚಲವಾದಿ, ಯಲ್ಲಪ್ಪ ಸಂಖ್ಯಾನವರ, ವಿವೇಕಾನಂದ ಗರಸಂಗಿ, ಹನಮಪ್ಪ ಚಲವಾದಿ, ಮನೋಹರ ಕದಮ, ಸಂಜೀವ ಐಹೊಳ್ಳಿ, ಶ್ರೀಧರ ಚಿಕ್ಕಲಕಿ, ಜಯವಂತ ಗುದಿಗೆನ್ನವರ, ರಾಜು ಮನ್ನಿಕೇರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನೀರು ಮಿತವಾಗಿ ಬಳಸಲು ಸಾರ್ವಜನಿಕರಿಗೆ ಗ್ರಾಪಂ ಮನವಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.27–ಈಗಾಗಲೇ ಬೇಸಿಗೆ ಪ್ರಾರಂಭವಾಗಿದ್ದು, ಬಿಸಿಲಿನ ತಾಪಮಾನ ಹೆಚ್ಚುತ್ತಿದೆ. ಹೀಗಾಗಿ ಜನರು ನೀರನ್ನು ಮಿತವಾಗಿ ಬಳಸಬೇಕು. ಯಾವುದೇ ಕಾರಣಕ್ಕೂ ನೀರು ಪೋಲಾಗದಂತೆ ಕಾಳಜಿ ವಹಿಸಬೇಕು ಎಂದು ತಾಲೂಕಿನ ಬೇವೂರು ಗ್ರಾಮ ಪಂಚಾಯತಿ ಸಾರ್ವಜನಿಕರಲ್ಲಿ ಮನವಿ ಮಾಡಿದೆ.

ಗ್ರಾಪಂ ವ್ಯಾಪ್ತಿಗೆ ಬರುವ ಬೇವೂರು ಹಾಗೂ ಚೌಡಾಪುರ ಗ್ರಾಮಗಳಲ್ಲಿ ಧ್ವನಿವರ್ಧಕದ ಮೂಲಕ ಪ್ರಚಾರ ಮಾಡುತ್ತಿದ್ದು, ಜನರು ಅವಶ್ಯಕತೆಗನುಗುಣವಾಗಿ ನೀರನ್ನು ಬಳಸಬೇಕು. ಅದರಲ್ಲೂ ಕುಡಿಯುವ ನೀರಿನ ವಿಷಯದಲ್ಲಿ ನಿರ್ಲಕ್ಷ್ಯ ಮಾಡದೇ ಸುಖಾಸುಮ್ಮನೆ ನೀರು ಹರಿದು ಹೋಗುವುದಕ್ಕೆ ಅವಕಾಶ ನೀಡಬಾರದು ಎಂದು ಹೇಳಲಾಗುತ್ತಿದೆ.

ನೀರು ಅತ್ಯಮೂಲ್ಯ ಆಸ್ತಿ, ಅದನ್ನು ಮಿತವಾಗಿ ಬಳಸಿ. ಜಲ ಮೂಲಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾಗುತ್ತಿದ್ದು, ಬರುವ ದಿನಗಳಲ್ಲಿ ನೀರಿನ ತೊಂದರೆ ಉಂಟಾಗದಿರಲು ಪ್ರತಿಯೊಬ್ಬರೂ ಜಾಗೃತಿ ವಹಿಸಬೇಕು ಎಂದು ಮನವಿ ಮಾಡಿಕೊಂಡಿದ್ದು, ಅಂಗಳಕ್ಕೆ ನೀರು ಚಲ್ಲಬೇಡಿ, ಪೈಪ್ ಹಿಡಿದು ವಾಹನಗಳನ್ನು ತೊಳೆಯದಿರಿ ಎಂದು ಹೇಳಿ ಪ್ರತಿಯೊಬ್ಬರೂ ಈ ಬಗ್ಗೆ ಜವಾಬ್ದಾರಿ ತೆಗೆದುಕೊಳ್ಳಿ ಎಂದು ವಿನಂತಿಸಿದೆ.

ಜೊತೆಗೆ ಜನರಿಗೆ ಆರೋಗ್ಯದ ಬಗ್ಗೆ ಅರಿವು ಕೂಡ ಮೂಡಿಸುತ್ತಿದೆ. ಬಿಸಿಲಿನ ತಾಪಮಾನ ಹೆಚ್ಚಾಗುತ್ತಿದ್ದು, ಸಾಂಕ್ರಾಮಿಕ ರೋಗಗಳು ಹರಡುವ ಭೀತಿಯಿದೆ. ಸಾರ್ವಜನಿಕರು ಮಧ್ಯಾಹ್ನ 12 ಗಂಟೆಯಿಂದ ಮಧ್ಯಾಹ್ನ 4 ಗಂಟೆಯವರೆಗೆ ಮನೆಯಲ್ಲೇ ಇರಿ, ಶುದ್ಧ ಆಹಾರ ಬಳಸಿ, ಶುದ್ಧ ಕುಡಿಯುವ ನೀರನ್ನು ಕಾಯಿಸಿ ಆರಿಸಿ ಕುಡಿಯಬೇಕು. ತಂಪು ಪಾನೀಯ ಬಳಕೆ ಕಡಿಮೆಯಿರಲಿ. ಎಲ್ಲಕ್ಕಿಂತ ಮುಖ್ಯವಾಗಿ ಮನೆ ಹಾಗೂ ಸುತ್ತಮುತ್ತ ಸ್ವಚ್ಛತೆ ಕಾಪಾಡಿಕೊಳ್ಳಿ ಎಂದು ಜಾಗೃತಿ ಮೂಡಿಸಲಾಗುತ್ತಿದೆ.

# ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.27–ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮವು 2024–25ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡಗಳ ಅಲೆಮಾರಿ ಸಮುದಾಯದವರಿಗೆ ಹಾಗೂ ಅರಣ್ಯ ಆಧಾರಿತ ಆದಿವಾಸಿ ಸಮುದಾಯದ ವಿದ್ಯಾವಂತ ನಿರುದ್ಯೋಗಿ ಯುವಕ, ಯುವತಿಯರಿಗಾಗಿ ವಿವಿಧ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಅರ್ಜಿ ಆಹ್ವಾನಿಸಿದೆ.

ಬೆಂಗಳೂರು ಕರ್ನಾಟಕ ಜರ್ಮನ್ ತಾಂತ್ರಿಕ ತರಬೇತಿ ಸಂಸ್ಥೆಯವರ ಪ್ರಾದೇಶಿಕ ತರಬೇತಿ ಕೇಂದ್ರಗಳ ಸಹಯೋಗದೊಂದಿಗೆ ಪ್ರತಿ ಜಿಲ್ಲೆಯ ಅರ್ಹ ಅಭ್ಯರ್ಥಿಗಳಿಂದ ಆಪ್‌ಲೈನ್ ಮೂಲಕ ಅರ್ಜಿಗಳನ್ನು ಎಪ್ರೀಲ್ 7 ರೊಳಗಾಗಿ ಸಲ್ಲಿಸಬೇಕು.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರುಗಳ ಕಚೇರಿಗೆ ಸಂಪರ್ಕಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಈಜು–ಬೇಸಿಗೆ ಶಿಬಿರ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.27–ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿರುವ ಈಜುಕೊಳದಲ್ಲಿ ಏಪ್ರೀಲ್ ಹಾಗೂ ಮೇ ಮಾಹೆಗಳಲ್ಲಿ ಎರಡು ತಿಂಗಳುಗಳ ಕಾಲ ಬೇಸಿಗೆ ಶಿಬಿರವನ್ನು ಆಯೋಜಿಸಲಾಗುತ್ತಿದೆ.

ಈಜು ತರಬೇತುದಾರರು, ಜೀವ ರಕ್ಷಕರು ಹಾಗೂ ಜೀವ ರಕ್ಷಕ ಅಗತ್ಯ ಸಾಮಾಗ್ರಿಗಳ ಸೌಲಭ್ಯವಿರುತ್ತದೆ. ಅಲ್ಲದೇ 4 ವರ್ಷ ಮೇಲ್ಪಟ್ಟ ಆರೋಗ್ಯವಂತ ಎಲ್ಲ ಮಕ್ಕಳಿಗೂ ಮಕ್ಕಳ ಈಜುಕೊಳವಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೋರಿದೆ. ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಜಿಲ್ಲಾ ಕ್ರೀಡಾಂಗಣ ಬಾಗಲಕೋಟೆ ಕಛೇರಿಗೆ ಭೇಟಿ ನೀಡಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08354–235896, 9739722700ಗೆ ಸಂಪರ್ಕಿಸುವಂತೆ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಸ್ಪೀಟ್ ದಂಧೆ ಕಡಿವಾಣಕ್ಕೆ ದಲಿತ ವೇದಿಕೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.27–ಜಿಲ್ಲೆಯಲ್ಲಿ ಗ್ಯಾಂಬಲಿಂಗ್ ಜೋರಾಗಿ ನಡೆಯುತ್ತಿದ್ದು, ಇದಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ನಿರ್ಲಕ್ಷ್ಯವೇ ಕಾರಣ ಎಂದು ಜಿಲ್ಲಾ ದಲಿತ ಯುವ ವೇದಿಕೆ ಆರೋಪಿಸಿದೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ವೇದಿಕೆಯ ಪ್ರಮುಖರು, ಜಿಲ್ಲೆಯ ಎಲ್ಲೆಡೆ ಇಸ್ಪೀಟ್ ಅಡ್ಡೆಗಳು ತಲೆಯೆತ್ತಿದ್ದು ಇದು ಜಿಲ್ಲೆಗೆ ಕಳಂಕ ತರುವಂತಹದ್ದು. ಸಚಿವರ ಹಿಂಬಾಲಕರ ಸಹಕಾರದಿಂದ ಈ ದಂಧೆ ನಡೆ–ಯುತ್ತಿದೆ ಎಂದು ಹೇಳಿದ್ದಾರೆ.

ಮುಧೋಳ, ಲೋಕಾಪೂರ, ಮಹಾಲಿಂಗಪುರ ಲಾಡ್ಜಗಳಲ್ಲಿ ನಿರಂತರವಾಗಿ ಇಸ್ಪೀಟ್ ಆಟ ನಡೆಯುತ್ತಿದೆ. ನಗರದ ಸಿಮೆಂಟ ಪ್ಯಾಕ್ಟರಿ ಹತ್ತಿರದ ಜಮೀನುಗಳಲ್ಲಿ ಟೆಂಟ್ ಹಾಕಿ ಗ್ಯಾಂಬಲಿಂಗ್ ನಡೆಸಲಾಗುತ್ತಿದೆ. ಬಾದಾಮಿ ತಾಲೂಕಿನ ಶಿವಪುರ ಗುಡ್ಡ, ಕೆರೂರಿನ ಲಾಡ್ಜ್, ಕಗಲಗೊಂಬದ ತೋಟದ ಮನೆ, ಬೀಳಗಿ ತಾಲೂಕಿನ ಗಲಗಲಿ, ತೆಗ್ಗಿ, ಆನದಿನ್ನಿ ಹೀಗೆ ಬಹುತೇಕ ಕಡೆಗಳಲ್ಲಿ ಇಸ್ಪೀಟ್ ದಂಧೆ ನಡೆಯುತ್ತಿದ್ದರೂ ಯಾರೂ ಗಮನಹರಿಸುತ್ತಿಲ್ಲ. ಇದರಿಂದ ಯುವಕರು ಹಾದಿ ತಪ್ಪಿ ಕೆಟ್ಟ ಅಭ್ಯಾಸಕ್ಕೆ ಮುಂದಾಗುತ್ತಾರೆ. ಇದನ್ನು ಜಿಲ್ಲಾ ಉಸ್ತುವಾರಿ ಮಂತ್ರಿಗಳು ಗಮನಿಸಬೇಕು ಎಂದು ಒತ್ತಾಯಿಸಿದ್ದಾರೆ.

ಗೃಹ ಸಚಿವರು ಈ ಬಗ್ಗೆ ಮುತುವರ್ಜಿವಹಿಸಿ ಜಿಲ್ಲಾ ಪೋಲಿಸ್ ಇಲಾಖೆಯ ಅಧಿಕಾರಿಗಳಿಗೆ ಬೆಂಗಾವಲಾಗಿ ನಿಲ್ಲಬೇಕು. ಇದರಿಂದ ಇಸ್ಪೀಟ್ ದಂಧೆಗೆ ಕಡಿವಾಣ ಹಾಕಬಹುದಾಗಿದೆ ಎಂದು ದಲಿತ ಯುವ ವೇದಿಕೆಯ ಜಿಲ್ಲಾ ಸಂಚಾಲಕರಾದ ಮಂಜುನಾಥ ಕೊಪ್ಪದ, ಹನಮಂತ ದೊಡ್ಡಮನಿ, ರಮೇಶ ಮಾದರ, ಸಂಘಟನಾ ಕಾರ್ಯದರ್ಶಿಗಳಾದ ರವಿ ಮಾದಿನಾಳ, ಮಲ್ಲಿಕಾರ್ಜುನ ಹಾವರಗಿ, ಕುಮಾರ ಮಾದರ ಜಂಟೀ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಆರ್.ಬಿ.ವೈ.ಎಂ.ನಲ್ಲಿ ಕ್ರಿಕೇಟ್ ಪಂದ್ಯಾವಳಿಗೆ ಚಾಲನೆ

ಬಳ್ಳಾರಿ, ಮಾ.26: ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿಂದು "ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯದ ಕಲಬುರ್ಗಿ ವಲಯದ ಪುರುಷರ ಕ್ರಿಕೆಟ್ ಟೂರ್ನಮೆಂಟ್ ಗೆ ಚಾಲನೆ ನೀಡಲಾಯಿತು. ಪ್ರಾಂಶುಪಾಲರು–ಡಾ. ಟಿ.ಹನುಮಂತ ರೆಡ್ಡಿ, ಮಹಾವಿದ್ಯಾಲಯ ಧೈಹಿಕ ಶಿಕ್ಷಕ ನಿರ್ದೇಶಕ–ಶ್ರೀ ವಿಜಯಮಹಂತೇಶ, ಕೆ.ಎಸ್.ಮಂಜುನಾಥ, ಸುನಿಲ್ ಕುಮಾರ್, ಪ್ರವೀಣ್, ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಈ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿ "ಒಳ್ಳೆಯ ಮನೋಭಾವನೆಯಿಂದ ಈ ಪಂದ್ಯಾವಳಿಯಲ್ಲಿ ಪಾಲ್ಗೊಂಡು ಗೆಲುವಿಗಾಗಿ ಪ್ರಯತ್ನಿಸಬೇಕು. ಆಟದಲ್ಲಿ ಸೋಲು ಗೆಲುವು ಸಾಮಾನ್ಯ, ಆದರೆ, ಸೋಲೇ ಗೆಲುವಿಗೆ ಮುಖ್ಯ ಮೆಟ್ಟಿಲು ಎಂಬುದನ್ನು ಮರೆಯಬಾರದು ಎಂದರು..

# ಜೀವನದಲ್ಲಿ ಭಯವೇ ಮೃತ್ಯು, ಭಯವೇ ಅನಾಚಾರ, ಭಯ ಮುಕ್ತಿ ಹೊಂದಿದಾಗ ಮಾತ್ರ ಸಾಧನೆ – ವೆಂಕಟ್ ವಾವಿಲಾಲ್

ಮಲ್ಲಮ್ಮ ನುಡಿ ವಾರ್ತೆ

ಬೀದರ, ಮಾ. 27– ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರ ಅಮೃತ ಹಸ್ತದಿಂದ ಸಸಿಗೆ ನೀರೇರೆಯುವುದರ ಮುಖಾಂತರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಇಂತಹ ಕಾರ್ಯಗಾರದಿಂದ ವಿದ್ಯಾರ್ಥಿಗಳು ಪದವಿ ಪಡೆದ ನಂತರ ನಾವು ಯಾವ ಉನ್ನತ ಹುದ್ದೆಗೆ ಹೋಗಬೇಕೆಂದು ತರಬೇತಿ ಕೊಟ್ಟು ಉನ್ನತವಾದ ದೊಡ್ಡ ದೊಡ್ಡ ಕಂಪನಿಗಳಿಗೆ ಸಿ.ಇ.ಓ ಹಾಗೂ ವ್ಯವಸ್ಥಾಪಕ ಹುದ್ದೆಗಳಿಗೆ ಹೋಗಲು ದಾರಿದೀಪವಾಗುತ್ತದೆ. ಆದುದರಿಂದ ವಿದ್ಯಾರ್ಥಿಗಳು 100% ಕಾರ್ಯಗಾರದ ಲಾಭ ಪಡೆಯಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.



ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಶ್ರೀ ವೆಂಕಟ್ ವಾವಿಲಾಲ್ ಅವರು ಮಾತನಾಡುತ್ತಾ ಜಗತ್ತಿನಲ್ಲಿ ಪ್ರತಿಯೊಂದು ಜೀವಿಯಲ್ಲಿಯೂ ಭಯದ ವಾತಾವರಣ ಇದೆ ಉದಾಹರಣೆಗೆ ವಿದ್ಯಾರ್ಥಿಗಳಿಗೆ ಮಾತನಾಡುವ ಭಯ, ಪರೀಕ್ಷೆಯ ಭಯ, ವೇದಿಕೆಯ ಭಯ ಇಂತಹ ಭಯಗಳು ಹೊಡೆದೋಡಿಸಿದಾಗ ಮಾತ್ರ ವಿದ್ಯಾರ್ಥಿಗಳು ತನ್ನ ಕನಸನ್ನು ಹಾಗೂ ಗುರಿಯನ್ನು ಮುಟ್ಟಲು ಸಾಧ್ಯ, ಮುಂದೆ ಗುರಿ ಹಿಂದೆ ಗುರು ಇದ್ದಾಗ ಮಾತ್ರ ವಿದ್ಯಾರ್ಥಿಗಳು ಮುಂದೆ ಬರಲು ಸಾಧ್ಯ, ಪ್ರತಿಯೊಬ್ಬರು ನಾಯಕತ್ವ ಗುಣ ಬೆಳೆಸಿಕೊಳ್ಳಬೇಕು ಧನಾತ್ಮಕ ಚಿಂತನೆಗಳನ್ನು ಹೊಂದಬೇಕು ನಿಮ್ಮ ನಿಮ್ಮ ವಿಚಾರಗಳು ಉನ್ನತವಾಗಿದ್ದಾಗ ನೀವು ಒಳ್ಳೆಯ ವ್ಯಕ್ತಿಯಾಗಿ ಹೊರಹೊಮ್ಮಬಹುದು ಎಂದು ಮಾರ್ಮಿಕವಾಗಿ ನುಡಿದರು.

ಇನ್ನೋರ್ವ ಸಂಪನ್ಮೂಲ ವ್ಯಕ್ತಿಗಳಾದ ಹೈದ್ರಾಬಾದಿನ ದಿ ಹಿಂದೂ ದಿನ ಪತ್ರಿಕೆಯ ಪ್ರಧಾನ ಸಂಪಾದಕರಾದ ಶ್ರೀ ಪಿ.ರಂಗಾರಡ್ಡಿ ಅವರು ಮಾತನಾಡುತ್ತಾ ವಿದ್ಯಾರ್ಥಿಗಳು ವೃತ್ತಿ ಕೌಶಲಗಳನ್ನು ಬೆಳೆಸಿಕೊಳ್ಳಬೇಕು ಈ ಕೌಶಲಗಳನ್ನು ಬೆಳೆಸಿಕೊಳ್ಳಲು ದಿನ ಪತ್ರಿಕೆ ಓದುವ ಹವ್ಯಾಸ ಉನ್ನತವಾದ ಕೃತಿಗಳು, ಕಾಂದಬರಿಗಳು, ಜೀವನ ಚರಿತ್ರೆಗಳು ದೂರದರ್ಶನದಲ್ಲಿ ಪ್ರಸಾರವಾಗುವ ಒಳ್ಳೆಯ ಕಾರ್ಯಕ್ರಮಗಳು ವೀಕ್ಷಿಸಬೇಕು ಯಶಸ್ಸು ಮತ್ತು ಪ್ರಯತ್ನ ಒಂದೇ ನಾಣ್ಯದ ಎರಡು ಮುಖಗಳು ಹಾಗೂ ಜೀವನದ ಎಲ್ಲಾ ದಿಕ್ಕುಗಳಲ್ಲಿ ಎಂದರೆ ವಿದ್ಯರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಕಮ್ಯೂನಿಕೇಷನ್ ಸ್ಕಿಲ್ ಬೆಳೆಸಿಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ತಿಳಿಹೇಳಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಮಹಾವಿದ್ಯಾಲಯ ಉಪಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆಯವರು ಮಾತನಾಡುತ್ತಾ ಒಬ್ಬ ವಿದ್ಯಾರ್ಥಿ ಪ್ರತಿನಿತ್ಯ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪ್ರತಿದಿನ 8–10 ತಾಸು ಅಧ್ಯಯನ ಮಾಡಬೇಕು ಹಾಗೂ ನಮ್ಮ ಮಹಾವಿದ್ಯಾಲಯದ ಗ್ರಂಥಾಲಯ ಹಾಗೂ ಇ–ಗ್ರಂಥಾಲಯದ ಸದುಪಯೋಗ ಪಡೆದುಕೊಂಡು ಉನ್ನತ ಹುದ್ದೆ ಪಡೆದುಕೊಂಡು ಸಮಾಜದಲ್ಲಿ ತಮ್ಮ ಪಾಲಕರ ಹಾಗೂ ಮಹಾವಿದ್ಯಾಲಯದ ಕೀರ್ತಿಯನ್ನು ಹೆಚ್ಚಿಸಬೇಕೆಂದು ಕರೆಕೊಟ್ಟರು.

ಕಾರ್ಯಕ್ರಮದ ಆರಂಭದಲ್ಲಿ ಪ್ರಾರ್ಥನೆ ಗೀತೆಯನ್ನು ಕು. ಸಂಗೀತಾ ಬಿಸಿಎ 6ನೇ ಸೆಮಿಸ್ಟರ್ ಹಾಡಿದರೆ, ಪ್ರಾಣಿಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಪೂಜಾ ಎಂ. ಸ್ವಾಗತ ಹೇಳಿದರೆ, ಕು. ನಾಗರಾಣಿ ಪಾಲಂ ನಿರೂಪಿಸಿದರೆ, ಕು. ಪ್ರೀಯಾದರ್ಶಿನಿ ವಂದಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಪ್ರಾಧ್ಯಾಪಕರು, ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಮಾ.29 ರಂದು ಕಾರಂಜಾ ಜಲಾಶಯದಿಂದ ನೀರು ಸರಬರಾಜು ಅಭಿವೃದ್ಧಿ ಯೋಜನೆಯ ಶಂಕುಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮಾ.27: ನಗರಾಭಿವೃದ್ಧಿ ಇಲಾಖೆ, ಜಿಲ್ಲಾಡಳಿತ ಬೀದರ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ಪುರಸಭೆ ಹುಮನಾಬಾದ, ಚಿಟಗುಪ್ಪಾ ಮತ್ತು ಹಳ್ಳಿಖೇಡ (ಬಿ) ಇವರ ಸಂಯುಕ್ತಾಶ್ರಯದಲ್ಲಿ ಮಾರ್ಚ.29 ರಂದು ಬೆಳಿಗ್ಗೆ 11 ಗಂಟೆಗೆ ಥೇರ್ ಮೈದಾನ ಹುಮನಾಬಾದದಲ್ಲಿ ಕೇಂದ್ರ ಪುರಸ್ಕೃತ ಅಮೃತ್ 2.0 ಯೋಜನೆಯಡಿ ಹುಮನಾಬಾದ, ಚಿಟಗುಪ್ಪಾ ಮತ್ತು ಹಳ್ಳಿಖೇಡ (ಬಿ) ಪಟ್ಟಣಗಳಿಗೆ ಕಾರಂಜಾ ಜಲಶಯದಿಮದ ನೀರು ಸರಬರಾಜು ಅಭಿವರದ್ಧಿ ಯೋಜನೆಯ ಶಂಕುಸ್ಥಾಪನೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಶಂಕುಸ್ಥಾಪನೆಯನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾಡಲಿದ್ದಾರೆ.

ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿಯನ್ನು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್, ನಗರಾಭಿವೃದ್ಧಿ, ಪಟ್ಟಣ ಯೋಜನೆ ಸಚಿವರಾದ ಭೈರತಿ ಸುರೇಶ್, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷರಾದ ವಿನಯ್ ಕುಲಕರ್ಣಿ ಅವರುಗಳು ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಹುಮನಾಬಾದ ಶಾಸಕರಾದ ಡಾ.ಸಿದ್ದು ಪಾಟೀಲ ಅವರು ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಭೀಮರಾವ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಡಾ.ಎಂ.ಡಿ.ಮೂಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಹುಮನಾಬಾದ ಪುರಸಭೆ ಅಧ್ಯಕ್ಷರಾದ ಪಾರ್ವತಿ ಎಮ್.ಶೇರಿಕಾರ, ಚಿಟ್ಟಗುಪ್ಪಾ ಪುರಸಭೆ ಅಧ್ಯಕ್ಷರಾದ ರೋಜಮ್ಮ, ಹಳ್ಳಿಖೇಡ (ಬಿ) ಪುರಸಭೆ ಅಧ್ಯಕ್ಷರಾದ ಜಗದೇವಿ ರಾಜು ಶಂಕೆ ಅವರುಗಳು ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಬೆಂಗಳೂರು ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಕಾರ್ಯದರ್ಶಿ ದೀಪಾ ಚೋಳನ್, ಬೆಂಗಳೂರು ಪೌರಾಡಳಿತ ನಿರ್ದೇಶಕರಾದ ಪ್ರಭುಲಿಂಗ ಕಾವಲಿಕಟ್ಟಿ, ಕ.ನ.ನೀ.ಸ. ಮತ್ತು ಒ.ಚ.ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರಾದ ಡಾ.ಸೆಲ್ವಮಣಿ. ಆರ್., ಬೆಂಗಳೂರು ಕ.ನ.ನೀ.ಸ. ಮತ್ತು ಒ.ಚ.ಮಂಡಳಿ ಜಂಟಿ ವ್ಯವಸ್ಥಾಪಕ ನಿರ್ದೇಶಕರಾದ ಜ್ಞಾನೇಂದ್ರ ಕುಮಾರ ಗಂಗ್ವಾರ, ಬೀದರ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿವಾಹಕ ಅಧಿಕಾರಿ ಡಾ.ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ ಗುಂಟಿ ಅವರುಗಳು ಭಾಗವಹಿಸಲಿದ್ದಾರೆ.

# ಜಿಮ್ಸ್ ಕಟ್ಟಡ ಮೇಲಿಂದ ಬಿದ್ದು ಆರೋಪಿ ಸಾವು: ಎಎಸ್ಐ ಸೇರಿ ಇಬ್ಬರು ಪೇದೆಗಳ ವಿರುದ್ಧ ಎಫ್.ಐ.ಆರ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.27: ವೈದ್ಯಕೀಯ ತಪಾಸಣೆಗೆ ಕರೆತಂದಿದ್ದ ಆರೋಪಿ ಜಿಮ್ಸ್ ಕಟ್ಟಡದ ಮೇಲಿಂದ ಜಿಗಿದು ಸಾವನ್ನಪ್ಪಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಓರ್ವ ಎ.ಎಸ್.ಐ ಹಾಗೂ ಇಬ್ಬರು ಪೇದೆಗಳ ವಿರುದ್ಧ ಕರ್ತವ್ಯಲೋಪ ಆರೋಪ ಸಾಬೀತಾಗಿರುವ ಹಿನ್ನೆಲೆಯಲ್ಲಿ ಎಫ್.ಐ.ಆರ್ ದಾಖಲಾಗಿದೆ.

ಬ್ರಹ್ಮಪುರ ಪೊಲೀಸ್ ಠಾಣೆಯ ಎಎಸ್ಐ ಅಬ್ದುಲ್ ಖಾದರ್ (54) ಹಾಗೂ ಪೇದೆಗಳಾದ ಹುಣಚಪ್ಪ ಮಲ್ಲಪ್ಪ (56) ಹಾಗೂ ಕುಮಾರ ರಾಠೋಡ್ (22) ವಿರುದ್ಧ ಪ್ರಕರಣ ದಾಖಲಾಗಿದೆ. ದರೋಡೆಗಾಗಿ ಹೊಂಚು ಹಾಕಿ ಕುಳಿತಿದ್ದ ಗ್ಯಾಂಗ್ ಆರೋಪಿಯಾಗಿದ್ದ ಹಾಗೂ ತಲೆ ಮರೆಸಿಕೊಂಡಿದ್ದ ಮುನ್ನಾ ಸೋಹೇಬ್ (20) ಎಂಬಾತನನ್ನು ಬ್ರಹ್ಮಪುರ ಠಾಣೆಯ ಪೊಲೀಸರು ಆಗಸ್ಟ್ 8, 2022ರಂದು ವಶಕ್ಕೆ ಪಡೆದಿದ್ದರು. ನ್ಯಾಯಾಲಯದ ಮುಂದೆ ಹಾಜರಿಪಡಿಸಲು ಆರೋಪಿಯನ್ನು ವೈದ್ಯಕೀಯ ತಪಾಸಣೆಗಾಗಿ ಜಿಮ್ಸ್ ಆಸ್ಪತ್ರೆಗೆ ಕರೆ ತಂದಿದ್ದರು.

ಈ ವೇಳೆ ಆರೋಪಿಗೆ ಕೋವಿಡ್ ಸೋಂಕು ಪರೀಕ್ಷೆ ಸೇರಿದಂತೆ ಇತರ ವೈದ್ಯಕೀಯ ತಪಾಸಣೆಗಾಗಿ ಆರೋಪಿ ಮುನ್ನಾ ಕೈಗಳಿಗೆ ತೊಡಿಸಲಾಗಿದ್ದ ಕೈಕೋಳವನ್ನು ಪೊಲೀಸರು ಬಿಚ್ಚಿದ್ದರು. ಈ ವೇಳೆ ಪೊಲೀಸರ ವಶದಿಂದ ತಪ್ಪಿಸಿಕೊಂಡು ಓಡಿ ಹೋದ ಮುನ್ನಾ, ಜಿಮ್ಸ್ ಆಸ್ಪತ್ರೆಯ 3ನೇ ಮಹಡಿಯಿಂದ ಕೆಳಗೆ ಜಿಗಿದು ಸಾವನ್ನಪ್ಪಿದ್ದ. ಈ ಪ್ರಕರಣದ ತನಿಖೆಯನ್ನು ಸಿಐಡಿಗೆ ಒಪ್ಪಿಸಲಾಗಿತ್ತು. ಹಾಗಾಗಿ, ಸಿಐಡಿ ಅಧಿಕಾರಿಗಳು ಸಿಸಿಟಿವಿ ಕ್ಯಾಮೆರಾ ದೃಶ್ಯಾವಳಿಗಳು ಹಾಗೂ ಇನ್ನಿತರ ಪೂರಕ ಸಾಕ್ಷ್ಯಾಧಾರಗಳನ್ನು ಕಲೆ ಹಾಕಿದ್ದರು. ಒಟ್ಟು 257 ಪುಟಗಳಲ್ಲಿ ತನಿಖಾ ದಾಖಲಾತಿಗಳನ್ನು ಸಲ್ಲಿಸಿದ್ದು, ಘಟನೆಗೆ ಪೊಲೀಸರ ಕರ್ತವ್ಯಲೋಪವೇ ಕಾರಣ ಎಂದು ಸಿಐಡಿ ಅಧಿಕಾರಿಗಳು ವರದಿಯಲ್ಲಿ ಉಲ್ಲೇಖಿಸಿದ್ದಾರೆ.

ಮೇಲಾಗಿ, ಆರೋಪಿಯನ್ನು ಸುರಕ್ಷಿತವಾಗಿ ತಮ್ಮ ಜೊತೆ ಇರಿಸಿಕೊಳ್ಳದೆ ಸ್ವತಂತ್ರವಾಗಿ ಬಿಟ್ಟು ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿದ್ದಾರೆ ಎಂದು ಸಿಐಡಿ ತನಿಖೆಯಿಂದ ದೃಢಪಟ್ಟಿರುವ ಕಾರಣ ಎ.ಎಸ್.ಐ ಅಬ್ದುಲ್, ಪೊಲೀಸ್ ಪೇದೆಗಳಾದ ಹುಣಚಪ್ಪ ಮತ್ತು ಕುಮಾರ್ ವಿರುದ್ಧ ಐಪಿಸಿ ಸೆಕ್ಷನ್ 225 (ಎ), (ಬಿ) ಅಡಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

# ರೌಡಿಶೀಟರ್ ರುಸ್ತುಂ ಬಳ್ಳಾರಿ ಜೈಲಿಗೆ ಹಸ್ತಾಂತರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.27:ನಗರದ ಮಹ್ಮದ್ ಚೌಕ್‌ನ ನಿವಾಸಿ ರೌಡಿ ಶೀಟರ್ ಮೋಹ್ಮದ್ ರುಸ್ತುಂ ಅಹ್ಮದ್ ಅಲಿಯಾಸ್ ರುಸ್ತುಂ ತಂದೆ ಅಬ್ದುಲ್ ರಶೀದ್ (35) ನನ್ನು ಬಳ್ಳಾರಿ ಜೈಲಿಗೆ ಹಸ್ತಾಂತರಿಸಲಾಗಿದೆ.

ಈತನ ವಿರುದ್ಧ 2010 ರಿಂದ 2015 ರವರೆಗೆ ಭಾರತೀಯ ದಂಡ ಸಂಹಿತೆ ಅಡಿಯಲ್ಲಿ 10, ಬಿಎಸ್ಎಸ್ ಕಾಯ್ದೆ–2023ರ ಅಡಿಯಲ್ಲಿ 2, ದಂಡ ಪ್ರಕ್ರಿಯೆ ಅಡಿಯಲ್ಲಿ 11 ಪ್ರಕರಣ ಸೇರಿ 23 ಪ್ರಕರಣಗಳು ದಾಖಲಾಗಿದ್ದು, ಆರೋಪಿಯನ್ನು "ಎ"ರೌಡಿ ಎಂದು ಗುರುತಿಸಲಾಗಿದೆ.

ಆರೋಪಿಯನ್ನು ಗುಂಡಾ ಕಾಯ್ದೆ ಅಡಿಯಲ್ಲಿ ಬಂಧಿಸುವುದು ಸೂಕ್ತ ಮತ್ತು ಅನಿವಾರ್ಯವಾಗಿದೆ ಎಂದು ರಾಘವೇಂದ್ರನಗರ ಪೊಲೀಸ್ ಠಾಣೆ ಪಿಐ ಕುಬೇರ ಎಸ್.ರಾಯಮಾನೆ ಅವರು ನೀಡಿದ ವರದಿ ಅನ್ವಯ ಆರೋಪಿಯನ್ನು ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ಹಸ್ತಾಂತರಿಸಲು ಪೊಲೀಸ್ ಆಯುಕ್ತರಾದ ಡಾ.ಶರಣಪ್ಪ ಎಸ್.ಡಿ.ಅವರು ಹಾಗೂ ಇಲ್ಲಿನ ವಿಶೇಷ ಕಾರ್ಯನಿರ್ವಾಹಕ ದಂಡಾಧಿಕಾರಿರವರ ನ್ಯಾಯಾಲಯ ಆದೇಶ ಹೊರಡಿಸಿದೆ.

# 1 ಕೋಟಿ ಮೌಲ್ಯದ ಅಕ್ರಮ ಮದ್ಯ ಜಪ್ತಿ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಮಾ.27:ಪರವಾನಗಿ ಇಲ್ಲದೆ ಮಹಾರಾಷ್ಟ್ರದಿಂದ ತೆಲಂಗಾಣಕ್ಕೆ ಅಕ್ರಮವಾಗಿ ಸಾಗಿಸುತ್ತಿದ್ದ 1.01 ಕೋಟಿ ಮೌಲ್ಯದ ಮದ್ಯವನ್ನು ಅಬಕಾರಿ ಪೊಲೀಸರು ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 65ರ ಮೇಲಿನ ಮೊಳಕೇರಾ ಗ್ರಾಮದಲ್ಲಿ ಬುಧವಾರ ಜಪ್ತಿ ಮಾಡಿ, ಒಬ್ಬ ಆರೋಪಿಯನ್ನು ಬಂಧಿಸಿದ್ದಾರೆ.

ವಾಹನ ಚಾಲಕ ಉತ್ತರ ಪ್ರದೇಶ ಮೂಲದ ಮನೋಜ್‌ಕುಮಾರ್ (49) ಬಂಧಿತ ಆರೋಪಿ, ಐಚರ್ ವಾಹನದಲ್ಲಿದ್ದ 860 ಪೆಟ್ಟಿಗೆಯಲ್ಲಿ 1485 ಲೀಟರ್ ವೈನ್ ಹಾಗೂ 6225 ಲೀಟರ್ ಮದ್ಯ ಸ್ವತ್ತು ವಶಕ್ಕೆ ಪಡೆದಿದ್ದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ಅಬಕಾರಿ ಪೊಲೀಸ್ ಅಧಿಕಾರಿಗಳು ವಾಹನ ತಪಾಸಣೆ ಮಾಡುವಾಗ ಅಕ್ರಮ ಮದ್ಯ ಪತ್ತೆ ಆಗಿದೆ. ಮದ್ಯವನ್ನು ಮಹಾರಾಷ್ಟ್ರದ ಥಾಣೆಯಿಂದ ತೆಲಂಗಾಣದ ರಂಗಾರೆಡ್ಡಿ ಜಿಲ್ಲೆಗೆ ಸಾಗಿಸಲಾಗುತ್ತಿತ್ತು ಎಂದು ತಿಳಿದುಬಂದಿದೆ. ಈ ಸಂದರ್ಭದಲ್ಲಿ ಅಬಕಾರಿ ಜಿಲ್ಲಾ ಅಧಿಕಾರಿ ರವಿಶಂಕರ್, ಡಿವೈಎಸ್ಪಿ ಆನಂದ ಉಕ್ಕಲಿ, ಸಿಪಿಐ ದಯಾನಂದ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಪಿಐಬಿ ಸತ್ಯಶೋಧನಾ ಘಟಕದ ಕಾರ್ಯವೈಖರಿ ಬಗ್ಗೆ ಜಿ. ಕುಮಾರ ನಾಯಕ ಕಳವಳ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ.27:ಭಾರತ ಸರ್ಕಾರದ ಅಧೀನದಲ್ಲಿರುವ ಪಿಐಬಿಯ ಸತ್ಯಶೋಧನಾ ಘಟಕದ ಕಾರ್ಯವೈಖರಿಯ ಬಗ್ಗೆ ರಾಯಚೂರು–ಯಾದಗಿರಿ ಸಂಸದರಾದ ಜಿ. ಕುಮಾರ ನಾಯಕ ಅವರು ಸಂಸ???ನಲ್ಲಿ ಇಂದು ಕಳವಳ ವ್ಯಕ್ತಪಡಿಸಿದರು.

ಲೋಕಸಭೆಯಲ್ಲಿ ಮಾತನಾಡಿದ ಅವರು, ಸುಳ್ಳುಸುದ್ದಿಗಳನ್ನು ಗುರುತಿಸಲು ಮತ್ತು ಪರಿಶೀಲಿಸಲು ಈ ಘಟಕ ಬಳಸುವ ಮಾನದಂಡಗಳು ಮತ್ತು ವಿಧಾನಗಳ ಕುರಿತು ಸ್ಪಷ್ಟತೆಯನ್ನು ಕೋರಿದರು. ಅಲ್ಲದೆ, ಈ ಘಟಕದ ಸತ್ಯ–ಶೋಧನಾ ಪ್ರಕ್ರಿಯೆಯು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುವ ಸುಳ್ಳು ಸುದ್ದಿಗಳನ್ನು ತೆಗೆದುಹಾಕುವಲ್ಲಿ ಎಷ್ಟರಮಟ್ಟಿಗೆ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿದೆ ಎನ್ನುವ ಮಾಹಿತಿ ಕೋರಿದರು. ಜೊತೆಗೆ ಸರ್ಕಾರವು ಸ್ವತಂತ್ರ, ಪಕ್ಷಾತೀತ ಸತ್ಯ–ಶೋಧನಾ ಸಂಸ್ಥೆಯನ್ನು ಸ್ಥಾಪಿಸುವ ಬಗ್ಗೆ ಪರಿಗಣಿಸುತ್ತಿದೆಯೇ ಎಂಬುದರ ಬಗ್ಗೆ ಪ್ರಶ್ನಿಸಿದರು. ಇದ–ರೊಟ್ಟಿಗೆ ಕಳೆದ ಮೂರು ವರ್ಷಗಳಲ್ಲಿ ಸ್ವೀಕೃತ ಮತ್ತು ಪರಿಹರಿಸಿದ ದೂರುಗಳ ರಾಜ್ಯವಾರು ಮಾಹಿತಿಯನ್ನು ಒದಗಿಸಲು ಸರ್ಕಾರವನ್ನು ಒತ್ತಾಯಿಸಿದರು.

ಶ್ರೀ ಜಿ. ಕುಮಾರ ನಾಯಕ ಅವರ ಪ್ರಶ್ನೆಗಳಿಗೆ ಪ್ರತಿಕ್ರಿಯೆ ನೀಡಿದ, ಕೇಂದ್ರ ಮಾಹಿತಿ ಮತ್ತು ಪ್ರಸಾರ ಇಲಾಖೆ ಸಚಿವರು "ಪಿಐಬಿ ಸತ್ಯ–ಶೋಧನಾ ಘಟಕವು 2019ರ ನವೆಂಬ???ನಲ್ಲಿ ಸ್ಥಾಪನೆಯಾಗಿದ್ದು, ನಾಲ್ಕು ಹಂತದ ಪರಿಶೀಲನಾ ಪ್ರಕ್ರಿಯೆಯನ್ನು ಅನುಸರಿಸುತ್ತದೆ ಎಂದು ತಿಳಿಸಿದರು. ಈ ಘಟಕವು ಮುಖ್ಯವಾಗಿ ಭಾರತ ಸರ್ಕಾರಕ್ಕೆ ಸಂಬಂಧಿಸಿದ ಸುಳ್ಳು ಸುದ್ದಿಗಳನ್ನು, ತಪ್ಪು ಮಾಹಿತಿಗಳನ್ನು ಸರಿಪಡಿಸುವ ಕಾರ್ಯವನ್ನು ನಿರ್ವಹಿಸುತ್ತದೆ ಎಂದು ಸ್ಪಷ್ಟನೆ ನೀಡಿದರು. ಅಧಿಕೃತ ಮಾಹಿತಿಗಳ ಪ್ರಕಾರ, ಘಟಕವು ವಾರ್ಷಿಕವಾಗಿ 20,000 ರಿಂದ 25,000 ದೂರುಗಳನ್ನು ಸ್ವೀಕರಿಸುತ್ತದೆ. ಆದರೆ, ಈ ದೂರುಗಳ ಪೈಕಿ ಕೇವಲ 30% ಮಾತ್ರ ಸರ್ಕಾರದ ನೀತಿಗಳು ಮತ್ತು ಯೋಜನೆಗಳಿಗೆ ಸಂಬಂಧಿಸಿದ್ದರಿಂದ ಅವನ್ನು ಮಾತ್ರ ಪರಿಗಣಿಸಿ, ಘಟಕದ ವ್ಯಾಪ್ತಿಗೆ ಬರದ ಕಾರಣ ಮಿಕ್ಕ ಶೇ 70ರಷ್ಟು ದೂರುಗಳನ್ನು ಪರಿಗಣಿಸಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದರು.

ಇದಕ್ಕೆ ಮರು ಪ್ರತಿಕ್ರಿಯಿಸಿದ ಶ್ರೀ ಜಿ. ಕುಮಾರ ನಾಯಕ ಅವರು, ಸರ್ಕಾರದ ಪ್ರಯತ್ನದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರೂ, ಪಿಐಬಿ ಸತ್ಯಶೋಧನಾ ಘಟಕದ ವ್ಯಾಪ್ತಿಯು ಸಂಕುಚಿತವಾಗಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಇದು ಸರ್ಕಾರಕ್ಕೆ ಸಂಬಂಧಿಸಿದ ವಿಷಯಗಳಿಗಷ್ಟೆ??? ಸೀಮಿತವಾಗಿರುವುದರಿಂದ, ಸಮಾಜದಲ್ಲಿ ಹರಡುವ ಹೆಚ್ಚಿನ ಸುಳ್ಳು ಸುದ್ದಿಗಳನ್ನು ಪರಿಹರಿಸಲು ವಿಫಲವಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಸುಳ್ಳುಸುದ್ದಿಗಳ ಅಪಾಯವನ್ನು ಒತ್ತಿ ಹೇಳಿದ ಸಂಸದರು, ವಿಶೇಷವಾಗಿ ಸಾರ್ವಜನಿಕ ಆರೋಗ್ಯ, ಸಾಮಾಜಿಕ ಸೌಹಾರ್ದ ಮತ್ತು ರಾಷ್ಟ್ರೀಯ ಭದ್ರತೆ ಕ್ಷೇತ್ರಗಳಲ್ಲಿ ಸುಳ್ಳುಸುದ್ದಿಗಳು ಗಂಭೀರ ಪರಿಣಾಮ ಬೀರಬಹುದು ಎಂದು ಎಚ್ಚರಿಸಿದರು.

# ಮಹಿಳೆ ವೃದ್ಧರಿಗಿಲ್ಲ ಶೌಚಾಲಯದ ವ್ಯವಸ್ಥೆ ತಾಲೂಕಾಡಳಿತ ವಿರುದ್ದ ದೂರು





ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಮಾ.27: ಇಲ್ಲಿನ ತಹಸೀಲ್ದಾರ ಕಾರ್ಯಾಲಯದ ಹತ್ತಿರ ನಾಮಕಾವಸ್ಥೆಗೆ ಶೌಚಾಲಯ ನಿರ್ಮಿಸಲಾಗಿದ್ದು. ಇದರ ಉಪಯೋಗ ಆಗದೆ ಮಹಿಳೆಯರು ಶೌಚಾಲಯಕ್ಕಾಗಿ ಪರದಾಡುತ್ತಿದ್ದಾರೆ. ತಕ್ಷಣ ಮಹಿಳೆಯರಿಗೆ, ವೃದ್ದರಿಗೆ ಶೌಚಾಲಯದ ವ್ಯವಸ್ಥೆ ಕಲ್ಪಿಸಬೇಕು ಎಂದು ಸಿದ್ರಾಮ ಖಜೊರೆ ನಿವೃತ್ತ ಸರಕಾರಿ ನೌಕರಸ್ತರು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.

ತಹಸೀಲ್ದಾರ ಕಾರ್ಯಾಲಯಕ್ಕೆ ಪ್ರತಿ ನಿತ್ಯ ಸಾವಿರಾರು ಮಹಿಳೆಯರು, ವೃದ್ದರು ತಮ್ಮ ಕೆಲಸ ಕಾರ್ಯಗಳಿಗೆ ಅಲೆದಾಡುತ್ತಿರುತ್ತಾರೆ. ಬಂದ ಮಹಿಳೆಯರು ಶೌಚಾಲಯವಿಲ್ಲದೆ ಮೂತ್ರ ವಿಸರ್ಜನೆ ಮಾಡಲು ಪರದಾಡುತ್ತಿರುತ್ತಾರೆ. ಮಹಿಳೆಯರ ಕಷ್ಟ ಇಲ್ಲಿ ಕೇಳುವರೇ ಇಲ್ಲದ ಹಾಗೆ ಆಗಿದೆ.

ಈ ಬಗ್ಗೆ ಶಾಸಕರ ಗಮನಕ್ಕೆ ತರಲಾಗಿದ್ದು. ಶಾಸಕರ ಸೂಚನೆಗೂ ಬೆಲೆ ಇಲ್ಲದ ರೀತಿ ನಡೆದುಕೊಳ್ಳಲಾಗುತ್ತಿದೆ. ಆದ್ದರಿಂದ ಜಿಲ್ಲಾಡಳಿತ ತಕ್ಷಣ ಹುಮನಾಬಾದ್ ತಹಸೀಲ್ದಾರ ಕಾರ್ಯಾಲಯದ ಹತ್ತಿರ ಇರುವ ಶೌಚಾಲಯವನ್ನು ಸಾರ್ವಜನಿಕರ ಉಪಯೋಗಕ್ಕೆ ಬರುವ ರೀತಿ ಸಂಬಂಧಿಸಿದವರಿಗೆ ಸೂಕ್ತ ಆದೇಶ ನೀಡಬೇಕಾಗಿ ಸಿದ್ರಾಮ ಖಜೊರೆ ರವರು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.

# ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯಎಸಗಿದ ಆರೋಪಿಗೆ 35 ವರ್ಷ ಜೈಲು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.27: ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಸಾಬೀತಾಗಿದ್ದರಿಂದ ಅಪರಾಧಿಗೆ ಇಲ್ಲಿನ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ (ವಿಶೇಷ ಪೋಕ್ಸೊ) ನ್ಯಾಯಾಲಯ 35 ವರ್ಷ ಜೈಲು ಶಿಕ್ಷೆ ವಿಧಿಸಿದೆ.

ಆಳಂದ ಪೊಲೀಸ್ ಠಾಣೆ ವ್ಯಾಪ್ತಿಯ ಗ್ರಾಮವೊಂದರ ನಿವಾಸಿ ಸೈಬಣ್ಣ ನಾಗಣ್ಣ (25) ಶಿಕ್ಷೆಗೆ ಒಳಗಾದ ಅಪರಾಧಿ.

15 ವರ್ಷದ ಬಾಲಕಿಗೆ ಮದುವೆ ಆಗುವುದಾಗಿ ನಂಬಿಸಿ, ಮಹಿಳಾ ಶೌಚಾಲಯದಲ್ಲಿ ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದ. ನಂತರ ಸ್ನೇಹಿತನ ಕಾರಿನಲ್ಲಿ ಅಪಹರಿಸಿ ಹುಬ್ಬಳ್ಳಿಗೆ ತೆರಳಿ, ಅಲ್ಲಿಂದ ಹರಿಯಾಣಕ್ಕೆ ಕರೆದೊಯ್ದು ಅಕ್ರಮ ಬಂಧನದಲ್ಲಿ ನಿರಂತರ ಲೈಂಗಿಕ ದೌರ್ಜನ್ಯ ಎಸಗಿದ್ದ. ಈ ಕುರಿತು ದೂರು ದಾಖಲಾಗಿ ಪಿಎಸ್ಐ ತಿರುಮಲೇಶ, ಪಿಐ ಮಹಾದೇವ ಪಂಚಮುಖಿ ಅವರು ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದರು.

ವಾದಪ್ರತಿವಾದ ಆಲಿಸಿದ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ (ವಿಶೇಷ ಪೊ?ಕ್ಸೊ) ದ ನ್ಯಾಯಾಧೀಶ ಯಮನಪ್ಪ ಬಮ್ಮಣಗಿ ಅವರು, ಸೈಬಣ್ಣಗೆ ವಿವಿಧ ಸೆಕ್ಷನ್ ಅಡಿ 35 ವರ್ಷ ಜೈಲು ಶಿಕ್ಷೆ ಮತ್ತು 38 ಸಾವಿರ ದಂಡ ವಿಧಿಸಿ ಆದೇಶ ಹೊರಡಿಸಿದ್ದಾರೆ. ಸರಕಾರದ ಪರವಾಗಿ ವಿಶೇಷ ಸರಕಾರಿ ಅಭಿಯೋಜಕ ಶಾಂತವೀರ ಬಿ.ತುಪ್ಪದ ಅವರು ವಾದ ಮಂಡಿಸಿದ್ದರು.

# ಮಾ. 30 ರಂದು ಆರ್‌ಎಸ್‌ಎಸ್ ಕೇಂದ್ರ ಕಚೇರಿಗೆ ಮೋದಿ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ನಾಗ್ಪುರ:ಮಾ.27:ಪ್ರಧಾನಿ ನರೇಂದ್ರ ಮೋದಿ ಅವರು ಮಾರ್ಚ್ 30 ರಂದು ನಾಗ್ಪುರದಲ್ಲಿರುವ ಆರ್‌ಎಸ್‌ಎಸ್ ಸಂಸ್ಥಾಪಕ ಡಾ. ಕೆ.ಬಿ. ಹೆಡ್ಗೆವಾರ್ ಅವರ ಸ್ಮಾರಕಕ್ಕೆ ಭೇಟಿ ನೀಡಲಿದ್ದಾರೆ. ಈ ವೇಳೆ ಮಾಧವ್ ನೇತ್ರಾಲಯ ಪ್ರೀಮಿಯಂ ಸೆಂಟರ್‌ನ ವಿಸ್ತರಣಾ ಕಟ್ಟಡಕ್ಕೆ ಪ್ರಧಾನಿ ಮೋದಿ ಶಿಲಾನ್ಯಾಸ ನೆರವೇರಿಸಲಿದ್ದಾರೆ.

ಆರ್‌ಎಸ್‌ಎಸ್ ಸಂಸ್ಥಾಪಕ ಡಾ. ಕೆ.ಬಿ. ಹೆಡ್ಗೆವಾರ್ ಮತ್ತು ಅವರ ಉತ್ತರಾಧಿಕಾರಿ ಎಂ.ಎಸ್.ಗೋಲ್ವಾಲ್ಕರ್ ಅವರ ಅಂತಿಮ ವಿಶ್ರಾಂತಿ ಸ್ಥಳವಾದ ರೇಶಿಂಬಾಗ್‌ನಲ್ಲಿರುವ ಪೂಜ್ಯ ಸ್ಮೃತಿ ಮಂದಿರಕ್ಕೆ ಪ್ರಧಾನಿ ಭೇಟಿ ನೀಡಲಿದ್ದಾರೆ. ಮಾರ್ಚ್ 30 ರಂದು ಮೋದಿ ಈ ಸ್ಮಾರಕಗಳಿಗೆ ಭೇಟಿ ನೀಡಲಿದ್ದಾರೆ ಎಂದು ಮಹಾರಾಷ್ಟ್ರ ಭಾರತೀಯ ಜನತಾ ಪಕ್ಷದ ಅಧ್ಯಕ್ಷ ಚಂದ್ರಶೇಖರ್ ಬವಾಂಕುಲೆ ಅವರು ಗುರುವಾರ ನಾಗ್ಪುರದಲ್ಲಿ ಸುದ್ದಿಗಾರರಿಗೆ ತಿಳಿಸಿದ್ದಾರೆ. ಭೇಟಿಯ ಸಮಯದಲ್ಲಿ, ಪ್ರಧಾನಿ ಮೋದಿ, ಮಾಧವ್ ನೇತ್ರಾಲಯ ಪ್ರೀಮಿಯಂ ಸೆಂಟರ್‌ನ ವಿಸ್ತರಣಾ ಕಟ್ಟಡಕ್ಕೆ ಶಿಲಾನ್ಯಾಸ ನೆರವೇರಿಸಲಿದ್ದಾರೆ ಎಂದು ಅವರು ಹೇಳಿದರು. ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಕೂಡ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

"ಪ್ರಧಾನಿಯೊಬ್ಬರು ಡಾ. ಹೆಡ್ಗೆವಾರ್ ಸ್ಮೃತಿ ಮಂದಿರ ಆವರಣ ಅಥವಾ ಆರ್ ಎ???ಸ್ ಕೇಂದ್ರ ಕಚೇರಿಗೆ ಭೇಟಿ ನೀಡುತ್ತಿರುವುದು ಇದೇ ಮೊದಲು" ಎಂದು ಆರ್‌ಎಸ್‌ಎಸ್ ಇತಿಹಾಸದ ಬಗ್ಗೆ ಚೆನ್ನಾಗಿ ತಿಳಿದಿರುವ ವಿದ್ವಾಂಸರೊಬ್ಬರು ಪಿಟಿಐಗೆ ತಿಳಿಸಿದ್ದಾರೆ. 2007 ರಲ್ಲಿ ಮಾಜಿ ಪ್ರಧಾನಿ, ದಿವಂಗತ ಅಟಲ್ ಬಿಹಾರಿ ವಾಜಪೇಯಿ ಅವರು ಈ ಸ್ಮಾರಕಕ್ಕೆ ಭೇಟಿ ನೀಡಿದ್ದರು. ಆದರೆ ಆ ಸಮಯದಲ್ಲಿ ಅವರು ಪ್ರಧಾನಿಯಾಗಿರಲಿಲ್ಲ ಎಂದು ಅವರು ಹೇಳಿದ್ದಾರೆ.


Hyderabad Karnataka Education Society's

**NATIONAL ENGLISH MEDIUM PUBLIC SCHOOL**

(Affiliated to CBSE New Delhi Affiliation No. 831240)

(Affiliated to SSS New Delhi, Ministry of Defence, Affiliation No:SNKLP0018652822)

B.V.B Campus, Manhalli Road, BIDAR – 585 403 K.S

## Walk-In Interview

Hyderabad Karnataka Education Society's National English Medium Public School invites eligible candidates for a **Walk-In Interview** for the recruitment of **Teaching Staff** for the academic year 2025-26. The selection process will be conducted in three rounds:

**Written Test, Teaching Demonstration, and Personal Interview.**

### Teaching Staff Vacancies:

| Sl. No | Position | Required No. | Designation | Qualification |
|---|---|---|---|---|
| 1 | English | 2 | TGT | B.A., B.Ed. |
| 2 | Kannada | 2 | TGT | B.A., B.Ed. |
| 3 | Kannada | 1 | PGT | M.A., B.Ed. |
| 4 | Hindi | 1 | PGT | M.A., B.Ed. |
| 5 | Mathematics | 1 | PGT | M.Sc., B.Ed. |
| 6 | Science | 1 | TGT | B.Sc., B.Ed. |
| 7 | Science | 2 | PGT | M.Sc., B.Ed. |
| 8 | Social Studies | 2 | PGT | M.A., B.Ed. |
| 9 | Computer | 1 | | BCA |
| 10 | Computer | 1 | | MCA |
| 11 | Art & Craft | 1 | | Bachelor's Degree |
| 12 | Wellness Teacher | 1 | | M.A., B.Ed. |
| 13 | Dance Teacher | 1 | | Degree in Dance |
| 14 | Special Educator | 1 | | TGT, B.Ed. in Special Education |
| 15 | Counsellor | 1 | | M.A. in Psychology/Counseling |
| 16 | Primary Teacher | 1 | PRT | D.El.Ed./B.Ed. |

### Walk-in Interview Details:

- **Date:** 29 March 2025
- **Time:** 9:00 am
- **Venue:** National English Medium Public School, B.V.B Campus, Manhalli Road, Bidar–585403

**For further details, Contact:**

**Mrs. Srilatha G. Swamy**
Principal
National English Medium Public School Bidar, Karnataka
Cell no: 9482429210,7892349355


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.